"ನೀವು ನನ್ನನ್ನು ಹುಡುಕುವಿರಿ, ಮನಃಪೂರ್ವಕವಾಗಿ ಹುಡುಕಿದಾಗ ನನ್ನನ್ನು ಕಂಡುಕೊಳ್ಳುವಿರಿ."

# ದೇವರನ್ನು ತಿಳಿಯುವುದು ಹೇಗೆ

## ದೇವರನ್ನು ತಿಳಿಯುವುದು ಹೇಗೆ

ಅಬ್ರಹಾಮನು ದೇವರಿಗೆ ಅಧೀನವಾಗಿ ಮತ್ತು ವಿಧೇಯನಾಗಿ ಇದ್ದು 'ದೇವರ ಸ್ನೇಹಿತನು' ಎಂದು ಕರೆಸಿಕೊಂಡ ಹಾಗೆ ನೀವು ಸಹ ದೇವರನ್ನು ತಿಳಿದು ಆತನ ಕರುಣೆ, ಶಾಂತಿ ಮತ್ತು ಅನುಗ್ರಹವನ್ನು ಪಡೆಯಬಹುದು. ದೇವರನ್ನು ತಿಳಿದು ಭರವಸದಿಂದ ಆತನಿಗೆ ನಿಜವಾಗಿ ಒಳಪಟ್ಟಿರುವುದು ಜೀವನದ ಅತ್ಯಂತ ಪ್ರಾಮುಖ್ಯವಾದ ಅನುಭವವಾಗಿದೆ. ಮನಃಪೂರ್ವಕವಾಗಿ ದೇವರನ್ನು ಹುಡುಕುವವರೆಲ್ಲರಿಗೂ ದೇವರು ತನ್ನನ್ನು ತಾನೇ ಪ್ರಕಟಿಸಿಕೊಳ್ಳುತ್ತಾನೆ ಎಂಬುದು ಎಷ್ಟೊಂದು ಆಶ್ಚರ್ಯ

ನೀನು ನಿನ್ನ ಸ್ವಂತ ಮಾರ್ಗದಿಂದ ತಿರುಗಿಕೊಂಡು ನಿಜವಾಗಿಯೂ ನಿನ್ನನ್ನು ದೇವರಿಗೆ ಒಳಪಡಿಸಿಕೊಂಡರೆ ಆತನ ಆತ್ಮವು ನಿನ್ನಲ್ಲಿ ನೆಲೆಗೊಳ್ಳುವುದು ಮತ್ತು ನೀನು ವಿಧೇಯನಾಗಿ ಆತನನ್ನು ಹಿಂಬಾಲಿಸುತ್ತಾ, ಆತನ ವಾಗ್ದಾನಗಳಲ್ಲಿ ಭರವಸೆಯಿಡುವಾಗ ಯಾವುದು ಸಹ ನಿನ್ನನ್ನು ಆತನ ಪ್ರೀತಿಯಿಂದ ಅಗಲಿಸಲು ಸಾಧ್ಯವಿಲ್ಲ. ಆತನು ನಿನ್ನ ದೇವರಾಗಿರುವನು, ಮತ್ತು ನೀನು ಆತನ ಸ್ವಂತ ಸ್ವತ್ತಾಗಿರುವೆ. ದೇವರು ಕೊಟ್ಟು ನಿನ್ನನ್ನು ಕೊಂಡುಕೊಂಡಿದ್ದಾನೆಂದು ಕಂಡುಕೊಳ್ಳುವೆ ಮತ್ತು ನಿನ್ನೊಂದಿಗೆ ಸಹವಾಸ ಮಾಡಲು ಆತನು ಈಗಲೂ ಮತ್ತು ನಿತ್ಯ ನಿತ್ಯವೂ ಬಯಸುತ್ತಾನೆ.

ಮುಂದಿನ ಪುಟಗಳಲ್ಲಿರುವ ದೇವರ ವಾಕ್ಯದ ಉಲ್ಲೇಖನಗಳನ್ನು ನೀನು ಅಧ್ಯಯನ ಮಾಡುತ್ತಿರುವಾಗ ನಿನಗ ಬೇಕಾದ ಬುದ್ಧಿಶಕ್ತಿಯನ್ನು ನೀಡುವಂತೆ ದೇವರನ್ನು ಕೇಳಿಕೊ. ದೇವರು ಈ ವಾಕ್ಯಗಳನ್ನು ಬರೆಯುವಂತೆ ದೇವರ ಮನುಷ್ಯರನ್ನು ಪ್ರೇರೇಪಿಸಿದ್ದಲ್ಲದೆ, ಅವುಗಳನ್ನು ನಾಶಪಡಿಸಬೇಕೆಂಬ ಸೈತಾನನ ನಾನಾ ಪ್ರಯತ್ನಗಳ ನಡುವೆಯೂ ಅದ್ಭುತವಾದ ರೀತಿಯಲ್ಲಿ ತಲೆಮೂರಗಳಿಂದ ಈ ವಾಕ್ಯಗಳನ್ನು ದೇವರು ಸಂರಕ್ಷಿಸಿದ್ದಾನೆ.

## ಸತ್ಯ ದೇವರು ಒಬ್ಬನೇ



"ನಮ್ಮ ದೇವರಾದ ಯೆಹೋವನು ಒಬ್ಬನೇ ದೇವರು ; ನೀವು ನಿಮ್ಮ ದೇವರಾದ ಯೆಹೋವನನ್ನು ಪೂರ್ಣ ಹೃದಯದಿಂದಲೂ ಪೂರ್ಣ ಪ್ರಾಣದಿಂದಲೂ ಪೂರ್ಣ ಶಕ್ತಿಯಿಂದಲೂ ಪ್ರೀತಿಸ ಬೇಕು"

-ಧರ್ಮೋಪದೇಶಕಾಂಡ 6:4,5

ಆಕಾಶ ಮಂಡಲವನ್ನು ಸೃಷ್ಟಿಸಿದ ಯೆಹೋವನ ಮಾತನ್ನು ಕೇಳಿರಿ ; ಆತನೇ ದೇವರು, ಭೂಲೋಕವನ್ನು ನಿರ್ಮಿಸಿ ರೂಪಿಸಿ ಸ್ಥಾಪಿಸಿದನು; ಅದನ್ನು ಶೂನ್ಯ ಸ್ಥಾನವಾಗಿರಲೆಂದು ಸೃಷ್ಟಿಸದೆ ಜನನಿಸವಾಸಕ್ಕಾಗಿಯೇ ರೂಪಿಸಿದನು. ಈತನು ಹೀಗೆನ್ನುತ್ತಾನೆ - "ನಾನೇ ಯೆಹೋವನು, ಇನ್ನು ಯಾವನೂ ಅಲ್ಲ" -ಯೆಶಾಯ 45:18

"ಭೂಲೋಕದ ಜನರೆಲ್ಲರೂ ಯೆಹೋವನ ಹೊರತು ಬೇರೆ ದೇವರಿಲ್ಲವೆಂಬದನ್ನು ತಿಳಿದುಕೊಳ್ಳು ವಂತೆ ಆತನು ಅವಶ್ಯವಿರುವಾಗಲ್ಲಾ ತನ್ನ ಸೇವಕನ ಮತ್ತು ಪ್ರಬೆಗಳಾದ ಇಸ್ರಾಯೇಲ್ಯರ ನ್ಯಾಯವನ್ನು ಸ್ಥಾಪಿಸುತ್ತಾ ಬರಲಿ"

- 1 ಅರಸು 8:60

"ನಾನೇ ಯೆಹೋವನು ; ಇದೇ ಇನ್ನ ನಾಮವು; ನನ್ನ ಮಹಿಮೆಯನ್ನು ಮತ್ತೊಬ್ಬನಿಗೆ ಸಲ್ಲಗೊಡಿಸೆನು, ನನ್ನ ಸ್ತೋತ್ರವನ್ನು ವಿಗ್ರಹಗಳ ಪಾಲು ಮಾಡೆನು"

- ಯೆಶಾಯ 42:8

ಯೆಹೋವನ ಮಾತೇನೆಂದರೆ - "ನೀವು ನನ್ನ ಸಾಕ್ಷಿ", ನಾನು ಆರಿಸಿಕೊಂಡಿರುವ ಸೇವಕನು, ನೀವು ನನ್ನನ್ನು ತಿಳಿದು ನಂಬಿ ನನ್ನನ್ನೇ ಪರಮಾತ್ಮನು ಎಂದು ಗ್ರಹಿಸುವ ಹಾಗೆ; ನನಗಿಂತ ಮುಂಚೆ ಯಾವ ದೇವರೂ ಇರಲಿಲ್ಲ, ನನ್ನ ಅನಂತರದಲ್ಲಿಯೂ ಇರುವದಿಲ್ಲ. ನಾನೇ, ನಾನೇ ಯೆಹೋವನು, ನಾನು ಹೊರತು ಯಾವ ರಕ್ಷಕನೂ ಇಲ್ಲ"

- ಯೆಶಾಯ 43:10,11

"ಎಲ್ಲಾ ದಿಗಂತಗಳವರೇ, ನನ್ನ ಕಡೆಗೆ ತಿರುಗಿಕೊಳ್ಳಿರಿ , ರಕ್ಷಣೆಯನ್ನು ಹೊಂದಿಕೊಳ್ಳಿರಿ; ನಾನೇ ದೇವರು ಇನ್ನು ಯಾರೂ ಇಲ್ಲ"

-ಯೆಶಾಯ 45:22

## ದೇವರು ಕರುಣೆ ಮತ್ತು ಕೃಪೆಯುಳ್ಳವನು



ಯೆಹೋವನು ಕನಿಕರವೂ ದಯೆಯೂ ದೀರ್ಘಶಾಂತಿಯೂ ಪೂರ್ಣಪ್ರೀತಿಯೂ ಉಳ್ಳವನು. ಭೂಮಿಯ ಮೇಲೆ ಆಕಾಶವು ಎಷ್ಟು ಉನ್ನತವೋ, ಆತನಲ್ಲಿ ಭಯಭಕ್ತಿಯುಳ್ಳವರ ಮೇಲೆ ಆತನ ಕೃಪೆಯು ಅಷ್ಟು ಅಪಾರವಾಗಿದೆ.

-ಕೀರ್ತನೆಗಳು 103:8,11

ಆದರೆ ಯೆಹೋವನಲ್ಲಿ ಭಯಭಕ್ತಿಯುಳ್ಳವರ ಮೇಲೆ ಆತನ ದಯವು ಯುಗಯುಗಾಂತರಗಳವರೆಗೂ ಇರುತ್ತದೆ. ಆತನ ವಿಧಿಗಳನ್ನು ನೆನಪಿನಲ್ಲಿಟ್ಟು ಕೊಂಡು ನಡೆಯುವವರ ಮಕ್ಕಳು ಮೊಮ್ಮಕ್ಕಳವರೆಗೂ ಆತನು ತನ್ನ ನೀತಿಯನ್ನು ಸಾಧಿಸುವನು - ಕೀರ್ತನೆಗಳು 103:17a,18b

ನಿನಗೆ ಯಾವ ದೇವರು ಸಮಾನ? ನೀನು ನಿನ್ನ ಸ್ವಾಸ್ಥ್ಯದವರಲ್ಲಿ ಉಳಿದವರ ಅಪರಾಧವನ್ನು ಕ್ಷಮಿಸುವವನೂ ಅವರ ದ್ರೋಹವನ್ನು ಲಕ್ಷಿಸದವನೂ ಆಗಿದ್ದಿ; ಹೌದು, ನಮ್ಮ ದೇವರು ನಿತ್ಯವೂ ಕೋಪಿಸುವವನಲ್ಲ ಕರುಣೆಯೇ ಆತನಿಗೆ ಇಷ್ಟ. - ಮೀಕ 7:18

ನಾವು ಉಳಿದಿರುವದು ಯೆಹೋವನ ಕರುಣೆಯೇ; ಆತನ ಕೃಪಾವರಗಳು ನಿಂತುಹೋಗವು. ದಿನದಿನವೂ ಹೊಸದಾಗಿ ಒದಗು ತ್ತವೆ; ನಿನ್ನ ಸತ್ಯ ಸಂಧತೆಯು ದೊಡ್ಡದು.

- ಪ್ರಲಾಪಗಳು 3:22,23

ಆತನು ವ್ಯಥೆಗೊಳಿಸಿದರೇನು, ತನ್ನ ಕೃಪಾತಿಶಯ ದಿಂದ ಕನಿಕರಿಸುವನು. -ಪ್ರಲಾಪಗಳು 3:32

ನೀನು ಕೃಪೆಯುಳ್ಳವನಿಗೆ ಕೃಪಾವಂತನೂ ದೋಷವಿಲ್ಲದವನಿಗೆ ನಿರ್ದೋಷಿಯೂ. -ಕೀರ್ತನೆಗಳು 18:25a

ಯೆಹೋವನಿಗೆ ಕೃತಜ್ಞತಾ ಸ್ತುತಿ ಮಾಡಿರಿ; ಆತನು ಒಳ್ಳೆಯವನು ; ಆತನ ಕೃಪೆಯು ಶಾಶ್ವತವಾಗಿರುವದು

- 1 ಪೂರ್ವಕಾಲವೃತ್ತಾಂತ 16:34

ನೀನು ದಯೆಯೂ ಕನಿಕರವೂ ದೀರ್ಘಶಾಂತಿಯೂ ಮಹಾಕೃಪೆಯೂ ಉಳ್ಳ ದೇವರು, ಮಾಡಬೇಕೆಂದಿದ್ದ ಕೇಡಿಗೆ ಮನಮರುಗುವವನು ಎಂದು ನಾನೇ ತಿಳಿದೇ ತಾರ್ಷೀಷಿಗೆ ಓಡಿಹೋಗಲು ತ್ವರೆಪಟ್ಟೆನು - ಯೋನ 4:2b

## ದೇವರು ನಿನ್ನನ್ನು ಪ್ರೀತಿಸುತ್ತಾನೆ



ಅದಕ್ಕೆ ದರ್ಶನಕೊಟ್ಟು ಹೀಗೆನ್ನುವನು - ನಾನು ನಿನ್ನನ್ನು ಪ್ರೀತಿಸಿರುವದು ಶಾಶ್ವತ ಪ್ರೇಮದಿಂದಲೇ; ಆದಕಾರಣ ನಿನ್ನನ್ನು ಮಮತೆಯಿಂದ ಸೆಳೆದುಕೊಂಡಿ ದ್ದೇನೆ.

- ಯೆರೆಮೀಯ 31:3

ಇವರಿಗೆ ಗತಿಯಾಗಲಿ, ನಿರೀಕ್ಷೆಯಿರಲಿ ಎಂದು ನಾನು ನಿಮ್ಮ ವಿಷಯದಲ್ಲಿ ಮಾಡಿಕೊಳ್ಳುತ್ತಿರುವ ಆಲೋಚನೆಗಳನ್ನು ನಾನೇ ಬಲ್ಲೆನು; ಅವು ಅಹಿತದ ಯೋಚನೆಗಳಲ್ಲ, ಹಿತದ ಯೋಚನೆಗಳೇ

-ಯೆರೆಮೀಯ 29:11

ಯೆಹೋವನು ಇಂತೆನ್ನುತ್ತಾನೆ - "ನಾನು ನಿಮ್ಮನ್ನು ಪ್ರೀತಿಸಿದ್ದೇನೆ"

-ಮಲಾಕಿಯ 1:2a

ತಂದೆಯು ಮಕ್ಕಳನ್ನು ಕನಿಕರಿಸುವಂತೆ ಯೆಹೋವನು ತನ್ನಲ್ಲಿ ಭಯಭಕ್ತಿಯುಳ್ಳವರನ್ನು ಕನಿಕರಿಸುತ್ತಾನೆ.

-ಕೀರ್ತನೆಗಳು 103:13

ಆಹಾ, ನಾನು ಪಟ್ಟ ದುಃಖವು ನನ್ನ ಸುಖಕ್ಕಾಗಿಯೇ ಆಯಿತು. ನನ್ನ ಆತ್ಮವನ್ನು ನಾಶಕೂಪದಿಂದ ರಕ್ಷಿಸಿದ್ದು ನಿನ್ನ ಪ್ರೀತಿಯೇ, ನನ್ನ ಪಾಪಗಳನ್ನೆಲ್ಲಾ ನಿನ್ನ ಬೆನ್ನ ಹಿಂದೆ ಹಾಕಿ ಬಿಟ್ಟಿದ್ದೀ. - ಯೆಶಾಯ 38:17

ದೇವರು ನಮ್ಮಲ್ಲಿಟ್ಟಿರುವ ಪ್ರೀತಿಯನ್ನು ನಾವು ತಿಳಿದುಕೊಂಡಿದ್ದೇವೆ ಅದನ್ನು ನಂಬಿದ್ದೇವೆ. ದೇವರು ಮೊದಲು ನಮ್ಮನ್ನು ಪ್ರೀತಿಸಿದ್ದರಿಂದ ನಾವು ಪ್ರೀತಿ ಸುತ್ತೇವೆ.

- 1 ಯೋಹಾನನ 4:16a, 19

ನಿನ್ನ ದೇವರದಾ ಯೆಹೋವನು ನಿನ್ನ ಮಧ್ಯದಲ್ಲಿ ಶೂರನಾಗಿದ್ದೇನೆ, ನಿನ್ನನ್ನು ರಕ್ಷಿಸುವನು; ನಿನ್ನಲ್ಲಿ ಉಲ್ಲಾಸಿಸೇ ಉಲ್ಲಾಸಿಸುವನು; ತನ್ನ ಪ್ರೀತಿಯಲ್ಲಿ ಮುಣುಗಿ ಮೌನವಾಗಿರುವನು; ನಿನ್ನಲ್ಲಿ ಆನಂದಿಸಿ ಹರ್ಷ ಧ್ವನಿಗೈಯುವನು ಎಂದು ಹೇಳೋಣವಾಗುವದು

- ಚೆಫನ್ಯ 3:17

ದೇವರೇ, ನಿನ್ನ ಪ್ರೀತಿ ಎಷ್ಟೋ ಅಮೂಲ್ಯವಾದದ್ದು;

- ಕೀರ್ತನೆಗಳು 36:7a

## ದೇವರನ್ನು ತಿಳಿಯುವದೇ ಜೀವನದ ಮಹತ್ವದ ಸಂಗತಿಯಾಗಿದೆ



ನಿಬಂಧನ ದ್ರೋಹಿಗಳು ಅವನ ನಯನುಡಿಗಳಿಂದ ಕೆಟ್ಟುಹೋಗುವರು ; ತಮ್ಮ ದೇವರನ್ನು ಅರಿತವರೋ ದೃಢಚಿತ್ತರಾಗಿ ಕೃತಾರ್ಥರಾಗುವರು.

-ದಾನಿಯೇಲನು 11:32b

ಹೆಚ್ಚಳ ಪಡುವವನು ತಾನು ನನ್ನನ್ನು ತಿಳಿದು ನಾನು ಲೋಕದಲ್ಲಿ ಪ್ರೀತಿ ನೀತಿ ನ್ಯಾಯಗಳನ್ನು ತೋರ್ಪಡಿಸುವ ಯೆಹೋವನಾಗಿರುವೆನು ಎಂದು ಗ್ರಹಿಸಿಕೊಂಡಿದ್ದೇನೆ ಎಂಬುದಕ್ಕೇ ಹೆಚ್ಚಳಪಡಲಿ; ಪ್ರೀತಿ ನೀತಿ ನ್ಯಾಯಗಳೇ ನನಗೆ ಆನಂದವೆಂದು ಯೆಹೋವನು ಅನ್ನುತ್ತಾನೆ.

-ಯೆರೆಮೀಯ 9:24

ಆತನ ಕಟ್ಟಳೆಗಳನ್ನು ಕೈಕೊಂಡು ಸಂಪೂರ್ಣ ಮನಸ್ಸಿನಿಂದ ಆತನನ್ನು ಹುಡುಕುವವರು ಭಾಗ್ಯವಂತರು.

- ಕೀರ್ತನೆಗಳು 119:2

ನಾನು ಜೀವಮರಣಗಳನ್ನೂ ಆಶೀರ್ವಾದ ಶಾಪಗಳನ್ನೂ ಈಗ ನಿಮ್ಮ ಮುಂದೆ ಇಟ್ಟಿದ್ದೇನೆ; ಇದಕ್ಕೆ ಭೂಮ್ಯಾಕಾಶಗಳು ಸಾಕ್ಷಿಗಳಾಗಿರಲಿ. ಆದುದರಿಂದ ನೀವೂ ನಿಮ್ಮ ಸಂತತಿಯವರೂ ಬದುಕಿಕೊಳ್ಳುವಂತೆ ಜೀವನವನ್ನೇ ಆದುಕೊಳ್ಳಿರಿ ; ನಿಮ್ಮ ದೇವರಾದ ಯೆಹೋ ವನನ್ನು ಪ್ರೀತಿಸಿ ಆತನ ಮಾತಿಗೆ ವಿಧೇಯರಾಗಿರ್ರಿ, ಆತನನ್ನು ಹೊಂದಿಕೊಂಡೇ ಇರ್ರಿ.

-ಧರ್ಮೋಪದೇಶಕಾಂಡ 30:19b, 20a

ನನಗೆ ಯಜ್ಞವು ಬೇಡ, ಕರುಣೆಯೇ ಬೇಕು; ಹೋಮಗಳಿಗಿಂತ ದೇವಜ್ಞಾನವೇ ಇಷ್ಟ

- ಹೋಶೇಯ 6:6

ದೇವರೇ ಬಾಯಾರಿದ ಜಿಂಕೆಯು ನೀರಿನ ತೊರೆಗಳನ್ನು ಹೇಗೋ ಹಾಗೆಯೇ ನನ್ನ ಮನವು ನಿನ್ನನ್ನು ಬಯಸುತ್ತದೆ.

-ಕೀರ್ತನೆಗಳು 42:1

ಅದಕ್ಕೇ ಯೆಹೋವನು - ನಾನೇ ನಿಮ್ಮ ಜೊತೆಯಲ್ಲಿ ಬಂದು ನಿಮಗೆ ವಿಶ್ರಾಂತಿಯನ್ನು ಉಂಟು ಮಾಡುವೆನು ಅಂದನು - ವಿಮೋಚನಕಾಂಡ 33:14

## ದೇವರ ವಿಷಯದಲ್ಲಿ ಸ್ವೇಚ್ಛೆಯಾಗಿ ಜೀವಿಸುವುದು ಅಪಾಯಕರ



ನೀವು ಯೆಹೋವನನ್ನು ಹೊಂದಿಕೊಂಡಿರುವ ತನಕ ಆತನೂ ನಿಮ್ಮೊಂದಿಗಿರುವನು; ನೀವು ಆತನನ್ನು ಹುಡುಕಿದರೆ ನಿಮಗೆ ಸಿಕ್ಕುವನು; ಆತನನ್ನು ಬಿಟ್ಟರೆ ಆತನು ನಿಮ್ಮನ್ನು ಬಿಟ್ಟುಬಿಡುವನು - 2. ಪೂರ್ವಕಾಲವೃತ್ತಾಂತ 15:2b

ಹೃದಯವು ಎಲ್ಲಕ್ಕಿಂತ ವಂಚಕ; ಗುಣವಾಗದ ಹೋಗಕ್ಕೆ ಒಳಗಾಗಿದೆ; ಅದನ್ನು ಯಾರು ತಿಳಿದಾರು?

-ಯೆರೆಮೀಯ 17:9

ಮನುಷ್ಯ ದೃಷ್ಟಿಗೆ ಸರಳವಾಗಿ ತೋರುವ ಒಂದು ದಾರಿಯುಂಟು ; ಕಟ್ಟಕಡೆಗೆ ಅದು ಮರಣ ಮಾರ್ಗವೇ.

- ಜ್ಞಾನೋಕ್ತಿಗಳು 16:25

ಹೇಗೆಂದರೆ ದೇವದೂತರು ಪಾಪಮಾಡಿದಾಗ ದೇವರು ಅವರನ್ನು ಸುಮ್ಮನೆ ಬಿಡದೆ ನರಕಕ್ಕೆ ದೊಬ್ಬಿ ನ್ಯಾಯತೀರ್ಪನ್ನು ಹೊಂದುವದಕ್ಕೆ ಇಡಲ್ಪಟ್ಟವರಾಗಿರ ಬೇಕೆಂದು ಕತ್ತಲೇ ಗುಂಡಿಗಳಿಗೆ ಒಪ್ಪಿಸಿದನು. ಕರ್ತನು ಭಕ್ತರನ್ನು ಕಷ್ಟಗಳೊಳಗಿಂದ ತಪ್ಪಿಸುವುದಕ್ಕೂ ದುರ್ಮಾರ್ಗಿಗಳನ್ನು ನ್ಯಾಯತೀರ್ಪಿನ ದಿನದ ತನಕ ಶಿಕ್ಷಾನುಭವದಲ್ಲಿ ಇಡುವುದಕ್ಕೂ ಬಲ್ಲವನಾಗಿದ್ದಾನೆ.

-2 ಪೇತ್ರನು 2:4,9

"ನೀವು ಯೆಹೋವನ ಮಾತನ್ನು ಕೇಳದೆಯೂ ಆತನ ಆಜ್ಞೆಗಳನ್ನು ಕೈಕೊಳ್ಳದೆಯೂ ಹೋದರೆ ಆತನ ಹಸ್ತವು ನಿಮ್ಮ ಹಿರಿಯರಿಗೆ ವಿರೋಧವಾಗಿದ್ದಂತೆ ನಿಮಗೂ ವಿರೋಧವಾಗಿಯೇ ಇರುವದು"

- 1 ಸಮುವೇಲನು 12:15a

"ಯಾವನು ನನ್ನಲ್ಲಿ ನೆಲೆಗೊಂಡಿರುವದಿಲ್ಲವೋ ಅವನು ಆ ಕೊಂಬೆಯಂತೆ ಹೊರಕ್ಕೆ ಬಿಸಾಡಲ್ಪಟ್ಟು ಒಣಗಿ ಹೋಗುವನು ; ಅಂಥ ಕೊಂಬೆಗಳನ್ನು ಕೂಡಿಸಿ ಬೆಂಕಿ ಯಲ್ಲಿ ಹಾಕುತ್ತಾರೆ, ಅವು ಸುಟ್ಟು ಹೋಗುತ್ತವೆ"

- ಯೋಹಾನ 15:6

ದ್ರೋಹಿಗಳೆಲ್ಲರೂ ನಾಶವಾಗುವರು ; ದುಷ್ಟರ ಸಂತಾನವು ತೆಗೆದು ಹಾಕಲ್ಪಡುವದು. -ಕೀರ್ತನೆಗಳು 37:38

## ದೇವರನ್ನು ತಿಳಿಯಲು ಆತನನ್ನು ಹುಡುಕಬೇಕು



ನೀವು ನನ್ನನ್ನು ಹುಡುಕುವಿರಿ, ಮನಃಪೂರ್ವಕವಾಗಿ ಹುಡುಕಿದಾಗ ನನ್ನನ್ನು ಕಂಡುಕೊಳ್ಳುವಿರಿ

-ಯೆರೆಮೀಯ 29:13

ಅದನ್ನು ಬೆಳ್ಳಿಯಂತೆಯೂ ನಿಕ್ಷೇಪದಂತೆಯೂ ಹುಡುಕು; ಆಗ ನೀನು ಯೆಹೋವನ ಭಯವನ್ನು ಅರಿತು ದೈವಜ್ಞಾನವನ್ನು ಪಡೆದುಕೊಳ್ಳುವಿ.

- ಜ್ಞಾನೋಕ್ತಿಗಳು 2:4,5

ಬೇಡಿಕೊಳ್ಳಿರಿ, ನಿಮಗೆ ದೊರೆಯುವದು; ಹುಡುಕಿರಿ, ನಿಮಗೆ ಸಿಕ್ಕುವದು; ತಟ್ಟಿರಿ, ನಿಮಗೆ ತೆರೆಯುವದು.

-ಮತ್ತಾಯ 7:7

ಆದರೆ ನಂಬಿಕೆಯಿಲ್ಲದೆ ದೇವರನ್ನು ಮೆಚ್ಚಿಸುವದು ಅಸಾಧ್ಯ; ದೇವರ ಬಳಿಗೆ ಬರುವವನು ದೇವರು ಇದ್ದಾನೆ, ಮತ್ತು ತನ್ನನ್ನು ಹುಡುಕುವವರಿಗೆ ಪ್ರತಿಫಲವನ್ನು ಕೊಡುತ್ತಾನೆ ಎಂದು ನಂಬುವದು ಅವಶ್ಯ.

- ಇಬ್ರಿಯರಿಗೆ 11:6

"ನನ್ನನ್ನು ಪ್ರೀತಿಸುವವರನ್ನು ನಾನು ಪ್ರೀತಿಸುತ್ತೇನೆ, ಆತುರದಿಂದ ಹುಡುಕುವವರು ನನ್ನನ್ನು ಕಂಡುಕೊಳ್ಳುವರು" - ಜ್ಞಾನೋಕ್ತಿಗಳು 8:17

ಯೆಹೋವನು ತನ್ನನ್ನು ನಿರೀಕ್ಷಿಸುವವರಿಗೂ ಹುಡುಕುವವರಿಗೂ ಮಹೋಪಕಾರಿಯಾಗಿದ್ದಾನೆ.

- ಪ್ರಲಾಪಗಳು 3:25

ಆತನು ಒಬ್ಬನಿಂದಲೇ ಎಲ್ಲಾ ಜನಾಂಗದವರನನು ಹುಟ್ಟಿಸಿ ಅವರವರು ಇರತಕ್ಕ ಕಾಲಗಳನ್ನೂ ಅವರವರ ನಿವಾಸಗಳ ಮೇರೆಗಳನ್ನೂ, ಒಂದು ವೇಳೆ ಅವರು ತಡ ಮಾಡಿ ಕಂಡುಕೊಂಡಾರೇನೋ ಎಂದು ತನ್ನನ್ನು ಹುಡುಕುವವರನ್ನಾಗಿ ಮಾಡಿದನು. ಆತನು ನಮ್ಮಲ್ಲಿ ಒಬ್ಬನಿಗೂ ದೂರವಾದವನಲ್ಲ. -ಅಪೋಸ್ತಲರ ಕೃತ್ಯಗಳು 17:26a,27

ನಾನಾದರೋ ದೇವರನ್ನೇ ಆಶ್ರಯಿಸುತ್ತಿದ್ದೆನು; ನನ್ನ ಸಂಗತಿಯನ್ನು ದೇವರಿಗೇ ಅರಿಕೆಮಾಡಿಕೊಳ್ಳುತ್ತಿದ್ದೆನು.

-ಯೋಬನು 5:8

## ನಾವು ಆತನ ಬಳಿಗೆ ಬರಬೇಕೆಂದು ಆತನು ಬಯಸುತ್ತಾನೆ 

''ನಿಮ್ಮ ದೇವರಾದ ಯೆಹೋವನು ದಯೆಯೂ ಕನಿಕರವೂ ಉಳ್ಳವನಾಗಿರುತ್ತಾನೆ. ಆತನು ತನ್ನ ಕಡೆಗೆ ತಿರುಗಿಕೊಳ್ಳುವ ನಿಮ್ಮನ್ನು ಕಟಾಕ್ಷಿಸದೆ ಇರುವುದಿಲ್ಲ ಎಂಬದೇ''

- 2 ಪೂರ್ವಕಾಲವೃತ್ತಾಂತ 30:96

ಕರ್ತನೇ ನೀನು ಒಳ್ಳೆಯವನೂ, ಕ್ಷಮಿಸುವವನೂ ನಿನಗೆ ಮೊರೆಯಿಡುವವರೆಲ್ಲರಲ್ಲಿ ಕೃಪಾಪೂರ್ಣನೂ ಆಗಿದ್ದೀಯಲ್ಲಾ -ಕೀರ್ತನೆಗಳು 86:5

ದೇವರ ಸಮೀಪಕ್ಕೆ ಬನ್ನಿರಿ , ಆಗ ಆತನು ನಿಮ್ಮ ಸಮೀಪಕ್ಕೆ ಬರುವನು. - ಯಾಕೋಬನು 4:8a

ಯೆಹೋವನಿಗೆ ಮೊರೆಯಿಡುವವರು ಯಥಾರ್ಥ ವಾಗಿ ಮೊರೆಯಿಡುವದಾದರೆ ಆತನು ಹತ್ತಿರವಾಗಿಯೇ ಇದ್ದಾನೆ.

-ಕೀರ್ತನೆಗಳು 145:18

''ಬನ್ನಿರಿ , ವಾದಿಸುವ ಎಂದು ಯೆಹೋವನು ಅನ್ನುತ್ತಾನೆ; ನಿಮ್ಮ ಪಾಪಗಳು ಕಡುಕೆಂಪಾಗಿದ್ದರೂ ಹಿಮದ ಹಾಗೆ ಬಿಳುಪಾಗುವವು; ಕಿರಮಂಜಿ ಬಣ್ಣ ವಾಗಿದ್ದರೂ ಉಣ್ಣೆಯಂತೆ ಬೆಳ್ಳಗಾಗುವವು'' - ಯೆಶಾಯ 1:18

'' ಎಲ್ಲೈ ಕಷ್ಟ ಪಡುವವರೇ, ಹೊರೆಹೊತ್ತವರೇ, ನೀವೆಲ್ಲರೂ ನನ್ನ ಬಳಿಗೆ ಬನ್ನಿರಿ, ನಾನು ನಿಮಗೆ ವಿಶ್ರಾಂತಿ ಕೊಡುವೆನು. ನಾನು ಸಾತ್ವಿಕನೂ ದೀನ ಮನಸ್ಸುಳ್ಳವನೂ ಆಗಿರುವದರಿಂದ ನನ್ನ ನೊಗವನ್ನು ನಿಮ್ಮ ಮೇಲೆ ತೆಗೆದುಕೊಂಡು ನನ್ನಲ್ಲಿ ಕಲಿತುಕೊಳ್ಳಿರಿ''

- ಮತ್ತಾಯ 11:28,29

''ನನ್ನ ಬಳಿಗೆ ಬರುವವನನ್ನು ನಾನು ತಳ್ಳಿ ಬಿಡುವದೇ ಇಲ್ಲ'' -ಯೋಹಾನ 6:37b

ಎಲ್ಲೈ ಬಾಯಾರಿದ ಸಕಲ ಜನರೇ, ನೀರಿನ ಬಳಿಗೆ ಬನ್ನಿರಿ,. ಹಣವಿಲ್ಲದವನು ಸಹ ಬರಲಿ! ಬನ್ನಿರಿ ಕಂಡು ಕೊಳ್ಳಿರಿ, ಉಣ್ಣಿರಿ! ಬಂದು ದ್ರಾಕ್ಷಾರಸವನ್ನೂ ಹಾಲನ್ನೂ ಹಣಕೊಡದೆ ಕ್ರಯವಿಲ್ಲದೆ ತೆಗೆದುಕೊಳ್ಳಿರಿ'' -ಯೆಶಾಯ 55:1

##  ದೇವರು ಆಜ್ಞಾಪಿಸುವ ಸಂಗತಿಗಳು

ನ್ಯಾಯವನ್ನು ಆಚರಿಸುವುದು, ಕರುಣೆಯಲ್ಲಿ ಆಸಕ್ತನಾಗಿರುವದು, ನಿನ್ನ ದೇವರಿಗೆ ನಮ್ರವಾಗಿ ನಡೆದುಕೊಳ್ಳುವುದು, ಇಷ್ಟನ್ನೇ ಹೊರತು ಯೆಹೋವನು ನಿನ್ನಿಂದ ಇನ್ನೇನು ಅಪೇಕ್ಷಿಸುವನು? - ಮೀಕ 6:8b

''ನಾನು ಪರಿಶುದ್ಧನಾಗಿರುವುದರಿಂದ ನೀವೂ ಪರಿಶುದ್ಧರಾಗಿರಬೇಕು'' - ಯಾಜಕಕಾಂಡ 19:2b

ನಿನ್ನ ದೇವರಾಗಿರುವ ಕರ್ತನನ್ನು ನಿನ್ನ ಪೂರ್ಣ ಹೃದಯದಿಂದಲೂ ನಿನ್ನ ಪೂರ್ಣ ಪ್ರಾಣದಿಂದಲೂ ನಿನ್ನ ಪೂರ್ಣ ಶಕ್ತಿಯಿಂದಲೂ ನಿನ್ನ ಪೂರ್ಣ ಬುದ್ದಿಯಿಂದಲೂ ಪ್ರೀತಿಸಬೇಕು. ಮತ್ತು ನಿನ್ನ ನೆರೆಯವರನ್ನು ನಿನ್ನಂತೆಯೇ ಪ್ರೀತಿಸಬೇಕು ಎಂದು ಬರೆದದ ಅಂದನು

- ಲೂಕನು 10:27b

ನರಹತ್ಯ ಮಾಡಬಾರು; ವ್ಯಭಿಚಾರ ಮಾಡಬಾರದು; ಕದಿಯಬಾರುದ; ಸುಳ್ಳು ಸಾಕ್ಷಿಹೇಳಬಾರದು; ಮೋಸ ಮಾಡಬಾರದು; ನಿನ್ನ ತಂದೆ ತಾಯಿಗಳನ್ನು ಸನ್ಮಾನಿಸ ಬೇಕು ಎಂಬ ದೇವರಾಜ್ಞೆಗಳು ನಿನಗೆ ಗೊತ್ತಿವೆಯಷ್ಟೆ ಎಂದು ಹೇಳಿದನು

- ಮಾರ್ಕ 10:19

ಇಹಲೋಕದ ನಡವಳಿಕೆಯನ್ನು ಅನುಸರಿಸದೆ ನೂತನ ಮನಸ್ಸನ್ನು ಹೊಂದಿಕೊಂಡು ಪರಲೋಕ ಭಾವದವರಾ ಗಿರಿ

- ರೋಮಾಪುರದವರಿಗೆ 12:2a

ಈ ಧರ್ಮಶಾಸ್ತ್ರವು ಯಾವಾಗಲೂ ನಿನ್ನ ಬಾಯಲ್ಲಿರಲಿ ; ಹಗಲಿರುಳು ಅದನ್ನು ಧ್ಯಾನಿಸುತ್ತಾ ಅದರಲ್ಲಿ ಬರೆದಿರುವದನ್ನೆಲ್ಲಾ ಕೈಕೊಂಡು ನಡಿ. ಆಗ ನಿನ್ನ ಮಾರ್ಗದಲ್ಲೆಲ್ಲಾ ಸಫಲನಾಗುವಿ, ಕೃತಾರ್ಥನಾಗುವಿ

- ಯೆಹೋಶುವ 1:8

''ನಿಮಗೆ ದೇವರಲ್ಲಿ ನಂಬಿಕೆಯಿರಲಿ ''

-ಮಾರ್ಕ 11:22b

''ನಿಮ್ಮ ದೇವರಾದ ಯೆಹೋವನೊಬ್ಬನನ್ನೇ ಆರಾಧಿಸಬೇಕು'' -ವಿಮೋಚನಾ ಕಾಂಡ 23:25a

## ನಮ್ಮ ಸ್ವಕ್ರಿಯೆಗಳಿಂದ ದೇವರನ್ನು ಮೆಚ್ಚಿಸಲಾಗದು 

ದೇವರಲ್ಲಿ ಆಸಕ್ತರಾಗಿದ್ದಾರೆಂದು ನಾನು ಅವರ ವಿಷಯದಲ್ಲಿ ಸಾಕ್ಷಿಕೊಡುತ್ತೇನೆ ; ಆದರೂ ಅವರ ಆಸಕ್ತಿ ಜ್ಞಾನಾನುಸಾರವಾದದ್ದಲ್ಲ. ಅವರು ದೇವರಿಂದ ದೊರಕುವ ನೀತಿಯನ್ನರಿಯದೆ ಸ್ವನೀತಿಯನ್ನೇ ಸ್ಥಾಪಿಸ ಬೇಕೆಂದು ಪ್ರಯತ್ನಿಸುತ್ತಾ ಇದ್ದರಿಂದ ದೇವರ ನೀತಿಗೆ ಅಧೀನರಾಗಲಿಲ್ಲ.

-ರೋಮಾಪುರದವರಿಗೆ 10:2,3

ನಾವೆಲ್ಲರೂ ಅಶುದ್ಧನ ಹಾಗಿದ್ದೇವೆ. ನಮ್ಮ ಧರ್ಮ ಕಾರ್ಯಗಳೆಲ್ಲಾ ಹೊಲೆಯ ಬಟ್ಟೆಯಂತಿವೆ;

-ಯೆಶಾಯ 64:6a

ನಾನು ಶಿಷ್ಯನಿಗೆ - ನೀನು ಬಾಳೇ ಬಾಳುವಿ ಎಂದು ಹೇಳಲು ಅವನು ತನ್ನ ಪುಣ್ಯದ ಮೇಲೆ ಭರವಸೆವಿಟ್ಟು ಪಾಪ ಮಾಡಿದರೆ ಅವನು ಮಾಡಿದ ಯಾವ ಸುಕೃತ್ಯವೂ ಅವನ ಲೆಕ್ಕಕ್ಕೆ ಸೇರಿಸಲ್ಪಡದು; ಅವನು ಮಾಡುವ ಪಾಪದಿಂದಲೇ ಅವನು ಸಾಯುವನು

ಯೆಹೆಜ್ಕೇಲನು 33:13

ಶರೀರಭಾವಧೀನರು ದೇವರಿಗೆ ಮೆಚ್ಚಿಕೆಯಾಗಿರಲಾರರು

- ರೋಮಾಪುರದವರಿಗೆ 8:8

ಯಾಕೆಂದರೆ ಯಾವನಾದರೂ ನೇಮನಿಷ್ಠೆಗಳನ್ನ ನುಸರಿಸಿ ದೇವರ ಸನ್ನಿಧಿಯಲ್ಲಿ ನೀತಿವಂತನೆಂದು ನಿರ್ಣಯಿಸಲ್ಪಡುವದಿಲ್ಲ - ರೋಮಾಪುರದವರಿಗೆ 3:20a

ನಮ್ಮಿಂದಲೇ ಏನಾದರೂ ಉಂಟಾಯಿತೆಂದು ತೀರ್ಮಾನಿಸಿಕೊಳ್ಳುವುದಕ್ಕೆ ನಮ್ಮಷ್ಟಕ್ಕೆ ನಾವೇ ಸಮರ್ಥರೆಂತಲ್ಲ; ನಮಗಿರುವ ಸಾಮರ್ಥ್ಯವು ದೇವರಿಂದಲೇ ಬಂದದ್ದು;

-2 ಕೊರಿಂಥವರಿಗೆ 3:5

ಇದಲ್ಲದೆ ಕರ್ಮಮಾರ್ಗದಿಂದ ಯಾವನೂ ದೇವರ ಸನ್ನಿಧಿಯಲ್ಲಿ ನೀತಿವಂತನಾಗುವುದಿಲ್ಲವೆಂಬುದು ಸ್ಪಷ್ಟವಾಗಿದೆ. ಯಾಕೆಂದರೆ ನೀತಿವಂತನು ನಂಬಿಕೆಯಿಂದಲೇ ಬದುಕುವನೆಂದು ಬರೆದದೆ.

-ಗಲಾತ್ಯದವರಿಗೆ 3:11

##  ದೇವರು ಪರಿಶುದ್ಧನಾಗಿದ್ದಾನೆ

ಯೆಹೋವನೇ, ದೇವರುಗಳಲ್ಲಿ ನಿನ್ನ ಸಮಾನನು ಯಾವನು? ಪರಿಶುದ್ಧತ್ವದಿಂದ ಮಾಡಿರುವುದರಿಂದ ಭಯಂಕರನೂ ಅದ್ಭುತಗಳನ್ನು ನಡಿಸುವವನೂ ಆಗಿರುವ ನಿನಗೆ ಸಮಾನನು ಎಲ್ಲಿ? - ವಿಮೋಚನಾಕಾಂಡ 15:11

ಯೆಹೋವನಂಥ ಪರಿಶುದ್ಧನು ಇಲ್ಲವೇ ಇಲ್ಲ; ನಿನ್ನ ಹೊರತು ದೇವರು ಯಾರು? -1 ಸಮುವೇಲನು 2:2a

ದೇವರು ಕೆಟ್ಟದ್ದನ್ನು ಮಾಡಾನೆಂಬ ಯೋಚನೆಯೂ ಸರ್ವಶಕ್ತನು ಅನ್ಯಾಯವನ್ನು ನಡಿಸಾನೆಂಬ ಭಾವನೆ ಯೂ ದೂರವಾಗಿರಲಿ! -ಯೋಬನು 34:10b

ಸೇನಾಧೀಶ್ವರನಾದ ಯೆಹೋವನು ಪರಿಶುದ್ಧನು, ಪರಿಶುದ್ಧನು, ಪರಿಶುದ್ಧನು ; ಭೂಮಂಡಲವೆಲ್ಲಾ ಆತನ ಪ್ರಭಾವದಿಂದ ತುಂಬಿದೆ ಎಂದು ಕೂಗಿ ಹೇಳಿದನು.

-ಯೆಶಾಯ 6:3b

ಸದಮಲನೆನಿಸಿಕೊಂಡು ಶಾಶ್ವತಲೋಕದಲ್ಲಿ ನಿತ್ಯ ನಿವಾಸಿಯಾದ ಮಹೋನ್ನತನಮು ಹೀಗೆನ್ನುತ್ತಾನೆ - ಉನ್ನತ ಲೋಕವೆಂಬ ಪವಿತ್ರಾಲಯದಲ್ಲಿ ವಾಸಿಸುವ.

-ಯೆಶಾಯ 57:15a

''ದೇವರೊಬ್ಬನೇ ಹೊರತು, ಮತ್ತಾವನೂ ಒಳ್ಳೆಯವನಲ್ಲ''

- ಮಾರ್ಕ 10:18

ಕರ್ತನೇ, ನಿನ್ನ ನಾಮಕ್ಕೆ ಭಯಪಡದವರೂ ಅದನ್ನು ಧನವಾದ್ದೆಂದು ಒಪ್ಪಿಕೊಳ್ಳದವರೂ ಯಾರಾದರೂ ಇದ್ದಾರೇ? ನೀನೊಬ್ಬನೇ ಪರಿಶುದ್ಧನು ; - ಪ್ರಕಟನೆ 15:4a

ಅವರು ಯೆಹೋವನ ಪೂಜ್ಯವಾದ ಮಹಾನಾಮ ವನ್ನು ಕೊಂಡಾಡಲಿ; ಆತನು ಪರಿಶುದ್ಧನು.

-ಕೀರ್ತನೆಗಳು 99:3

ನಮ್ಮ ಯೆಹೋವ ದೇವರನ್ನು ಘನಪಡಿಸಿರಿ; ಆತನ ಪರಿಶುದ್ಧಪರ್ವತದ ಗಡೆಗೆ ಅಡ್ಡ ಬೀಳಿರಿ. ನಮ್ಮ ಯೆಹೋವ ದೇವರು ಪರಿಶುದ್ಧನು.

-ಕೀರ್ತನೆಗಳು 99:9

''ದೇವರಾದ ಕರ್ತನು ಪರಿಶುದ್ಧನು, ಪರಿಶುದ್ಧನು, ಪರಿಶುದ್ಧನು ; ಆತನು ಸರ್ವಶಕ್ತನು, ವರ್ತಮಾನ ಭೂತ ಭವಿಷ್ಯತ್ಕಾಲಗಳಲ್ಲಿರುವಂಥವನು '' - ಪ್ರಕಟನೆ 4:8b

## ದೇವರು ದ್ವೇಷಿಸುವ ಸಂಗತಿಗಳು 

ಯೆಹೋವನು ಹಗೆ ಮಾಡುವ ವಸ್ತುಗಳು ಆರು ಇವೆ. ಹೌದು, ಏಳು ಆತನಿಗೆ ಅಸಂಹ್ಯಗಳಾಗಿ ತೋರುತ್ತವೆ. ಯಾವದೆಂದರೆ, ಹೆಮ್ಮೆಯ ಕಣ್ಣು, ಸುಳ್ಳಿನ ನಾಲಿಗೆ, ನಿರ್ದೋಷರಕ್ತವನ್ನು ಸುರಿಸುವ ಕೈ, ದುರಾಲೋಚನೆಗಳನ್ನು ಕಲ್ಪಿಸುವ ಹೃದಯ, ಕೇಡು ಮಾಡಲು ತ್ವರೆ ಪಡುವ ಕಾಲು, ಅಸತ್ಯವಾಡುವ ಸುಳ್ಳು ಸಾಕ್ಷಿ, ಒಡಹುಟ್ಟಿ ದವರಲ್ಲಿ ಜಗಳಗಳನ್ನು ಬಿತ್ತುವವನು, ಈ ಏಳೇ.

- ಜ್ಞಾನೋಕ್ತಿಗಳು 6:16 -19

ಯೆಹೋವನೆಂಬ ನಾನು ನ್ಯಾಯವನ್ನು ಪ್ರೀತಿಸುತ್ತೇನೆ, ಕೊಳ್ಳೆಯನ್ನೂ ಅನ್ಯಾಯವನ್ನೂ ದ್ವೇಷಿಸುತ್ತೇನೆ.

-ಯೆಶಾಯ 61:8a

ಆದರೆ ಹೇಡಿಗಳು, ನಂಬಿಕೆಯಿಲ್ಲದವರು, ಅಸಹ್ಯವಾದದ್ದರಲ್ಲಿ ಸೇರಿದವರು, ಕೊಲೆಗಾರರು, ಜಾರರು, ಮಾಟಾಗಾರರು, ವಿಗ್ರಹಾರಾಧಕರು, ಎಲ್ಲಾ ಸುಳ್ಳುಗಾರರು ಇವರಿಗೆ ಸಿಕ್ಕುವ ಪಾಲು ಬೆಂಕಿ ಗಂಧಕಗಳುರಿಯುವ ಕೆರೆಯೇ; ಅದು ಎರಡನೆಯ ಮರಣವು ಎಂದು ನನಗೆ ಹೇಳಿದನು. -ಪ್ರಕಟಣೆ 21:8

ಹೀಗಿರಲು ನಿಮ್ಮ ಆತ್ಮವನ್ನು ಎಚ್ಚರಿಕೆಯಿಂದ ನೋಡಿಕೊಳ್ಳಿರಿ, ಯಾವನೂ ತನ್ನ ಯೌವನದ ಪತ್ನಿಗೆ ದ್ರೋಹ ಮಾಡದಿರಲಿ. ಇಸ್ರಾಯೇಲಿನ ದೇವರಾದ ಯಹೋವನು ಇಂತೆನ್ನುತ್ತಾನೆ - ನಾನು ಪತ್ನೀ ತ್ಯಾಗವನ್ನು ಹೆಂಡತಿಗೆ ಅನ್ಯಾಯವನ್ನು ಮಾಡುವವನನ್ನೂ ಹಗೆ ಮಾಡುತ್ತೇನೆ; ಇದು ಸೇನಾಧೀಶ್ವರ ಯೆಹೋವನ ನುಡಿ.

- ಮಲಾಕಿಯ 2:15b,16a

ನಿಮ್ಮಲ್ಲಿ ಯಾವನೂ ತನ್ನ ಹೃದಯದಲ್ಲಿ ನೆರೆಯವರಿಗೆ ಕೇಡನು ಬಗೆಯದಿರಲಿ, ಸುಳ್ಳುಸಾಕ್ಷಿಗೆ ಎಂದು ಸಂತೋಷ ಪಡಬೇಡಿರಿ; ಇವುಗಳನ್ನೆಲ್ಲಾ ದ್ವೇಷಿ ಸುವವನಾಗಿದ್ದೇನೆ; ಇದು ಯೆಹೋವನ ನುಡಿ - ಜೆಕರ್ಯ 8:17

ಮನುಷ್ಯರ ಮುಂದೆ ನೀತಿವಂತರೆಂದು ತೋರಿಸಿಕೊಳ್ಳುವವರು ನೀವು; ಆದರೆ ದೇವರು ನಿಮ್ಮ ಹೃದಯಗಳನ್ನು ತಿಳಿದುಕೊಂಡಿದ್ದಾನೆ. ಮನುಷ್ಯರಲ್ಲಿ ಶ್ರೇಷ್ಠವೆನಿಸಿಕೊಳ್ಳುವಂಥದು ದೇವರ ದೃಷ್ಟಿಯಲ್ಲಿ ಅಸಹ್ಯವಾಗಿದೆ.

- ಲೂಕ 16:15b

##  ಪಾಪವು ನಮ್ಮನ್ನು ದೇವರಿಂದ ದೂರ ಮಾಡುತ್ತದ.

ಒಬ್ಬ ಮನುಷ್ಯನಿಂದಲೇ ಪಾಪವೂ, ಪಾಪದಿಂದ ಮರಣವೂ ಲೋಕದೊಳಗೆ ಸೇರಿದವು; ಎಲ್ಲರೂ ಪಾಪ ಮಾಡಿದ್ದರಿಂದ ಮರಣವು ಹೀಗೆ ಎಲ್ಲರಲ್ಲಿಯೂ ವ್ಯಾಪಿಸಿತು. -ರೋಮಾಪುರದವರಿಗೆ 5:12

ಆಮೇಲೆ ಆಶೆಯು ಬಸುರಾಗಿ ಪಾಪವನ್ನು ಹೆರುತ್ತದೆ ; ಪಾಪವು ತುಂಬಾ ಬೆಳೆದು ಮರಣವನ್ನು ಹೆಡೆಯುತ್ತದೆ.

-ಯಾಕೋಬ 1:15

ಆದರೆ ನಿಮ್ಮ ಅಪರಾಧಗಳೇ ನಿಮ್ಮ ದೇವರಿಂದ ನಿಮ್ಮ ಅಗಲಿಸುತ್ತಾ ಬಂದಿವೆ; ನಿಮ್ಮ ಪಾಪಗಳೇ ಆತನು ಕೇಳಲಾರದಂತೆ ಆತನ ಮುಖಕ್ಕೆ ಅಡ್ಡವಾಗಿವೆ.

-ಯೆಶಾಯ 59:2

ಧರ್ಮನಿರತನಿಗೆ ಜೀವ, ಅಧರ್ಮಾಸಕ್ತನಿಗೆ ಮರಣ.

-ಜ್ಞಾನೋಕ್ತಿಗಳು 11:19

ದೇವರ ಮಾತನ್ನು ಕೇಳಿರಿ; ನೀವು ಯೆಹೋವನ ಆಜ್ಞೆಗಳನ್ನು ಮೀರಿ ನಿಮ್ಮನ್ನು ಕೆಡಿಸಿಕೊಳ್ಳುವದೇಕೆ ? ನೀವು ಯೆಹೋವನನ್ನು ಬಿಟ್ಟಿದ್ದರಿಂದ ಆತನೂ ನಿಮ್ಮನ್ನು ಬಿಟ್ಟಿದ್ದಾನೆ ಅಂದನು.

- 2 ಪೂರ್ವಕಾಲವೃತ್ತಾಂತ 24:20b

ಅವಿಧೇಯತ್ವವು ಮಂತ್ರತಂತ್ರಗಳಷ್ಟೇ ಕೆಟ್ಟದ್ದಾಗಿರುವುದು ; ಹಟವು ಮಿಥ್ಯಾಭಕ್ತಿಗೂ, ವಿಗ್ರಹಾರಾಧನೆಗೂ ಸಮಾನವಾಗಿರುವುದು. ನೀನು ಯೆಹೋವನ ಮಾತನ್ನು ತಳ್ಳಿಬಿಟ್ಟದ್ದರಿಂದ ಆತನು ನಿನ್ನನ್ನು ಅರಸುತನದಿಂದ ತಳ್ಳಿಬಿಟ್ಟಿದ್ದಾನೆ ಎಂದು ನುಡಿದನು.

- 1 ಸಮುವೇಲನು 15:23a

ಅವರು ನನ್ನನ್ನು ಬಿಟ್ಟು ಇತರ ದೇವರುಗಳನ್ನು ಆಶ್ರಯಿಸಿ ಬಹಳ ದುಷ್ಕಾರ್ಯಗಳನ್ನು ನಡಿಸುವುದರಿಂದ ನಾನು ಆ ಕಾಲದಲ್ಲಿ ಖಂಡಿತವಾಗಿ ಅವರಿಗೆ ವಿಮುಖನಾಗಿರುವೆನು.

-ಧರ್ಮೋಪದೇಶಕಾಂಡ 31:18a

ಪಾಪ ಮಾಡುವವನೇ ಸಾಯುವನು ;

-ಯೆಹೆಜ್ಕೇಲನು 18:20a

## ದೇವ ಜನರು ಪವಿತ್ರವಾಗಿ ಜೀವಿಸಬೇಕು 

ದೇವರು ಒಬ್ಬನೇ ಎಂದು ನೀನು ನಂಬುವವನು. ಹಾಗೆ ನಂಬುವದು ಒಳ್ಳೇದು. ದೆವ್ವಗಳು ಕೂಡ ಹಾಗೆಯೇ ನಂಬಿ ಹೆದರಿ ನಡುಗುತ್ತವೆ. ಅಪ್ರಯೋಜಕನೇ, ಕ್ರಿಯೆ ಗಳಿಲ್ಲದ ನಂಬಿಕೆಯು ವ್ಯರ್ಥವಾಗಿದೆ, ಎಂಬುದಕ್ಕೆ ದೃಷ್ಟಾಂತ ಬೇಕೋ? ವಾಕ್ಯದ ಪ್ರಕಾರ ನಡೆಯುವವರಾಗಿರಿ; ಅದನ್ನು ಕೇಳುವವರು ಮಾತ್ರವೇ ಆಗಿದ್ದು, ನಿಮ್ಮನ್ನು ನೀವೇ ಮೋಸಗೊಳಿಸಬೇಡಿರಿ.

-ಯಾಕೋಬನು 2:19,20;1:22

ದುಷ್ಟನ ನಡತೆಯು ಯೆಹೋವನಿಗೆ ಅಸಹ್ಯ; ಧರ್ಮಾಸಕ್ತನು ಆತನಿಗೆ ಪ್ರಿಯ -ಜ್ಞಾನೋಕ್ತಿಗಳು 15:9

ಆತನನ್ನು ಬಲ್ಲನೆಂದು ಹೇಳಿ ಆತನ ಆಜ್ಞೆಗಳನ್ನು ಕೈಕೊಳ್ಳದೆ ನಡೆಯುವವನು ಸುಳ್ಳುಗಾರನಾಗಿದ್ದಾನೆ; ಸತ್ಯವೆಂಬುದು ಅವನಲ್ಲಿ ಇಲ್ಲ. ಇವರು ದೇವರ ಮಕ್ಕಳೆಂಬದೂ ಅವರು ಸೈತಾನನನ ಮಕ್ಕಳೆಂಬದೂ ಇದರಿಂದ ವ್ಯಕ್ತವಾಗುತ್ತದೆ. ನೀತಿಯನ್ನು ಅನುಸರಿಸಿದವನು ತನ್ನ ಸಹೋದರನನ್ನು ಪ್ರೀತಿಸದವನು ದೇವರಿಂದ ಹುಟ್ಟಿದವರಲ್ಲ.

-1 ಯೋಹಾನನು 2:4;3:10

ಎಲ್ಲರ ಸಂಗಡ ಸಮಾಧಾನದಿಂದಿರುವುದಕ್ಕೂ ಪರಿಶುದ್ಧತೆಯನ್ನು ಹೊಂದುವುದಕ್ಕೂ ಪ್ರಯತ್ನ ಮಾಡಿರಿ; ಪರಿಶುದ್ಧತೆಯಿಲ್ಲದ ಯಾವನೂ ಕರ್ತನನ್ನು ಕಾಣುವುದಿಲ್ಲ.

-ಇಬ್ರಿಯರಿಗೆ 12:14

ನಿಮ್ಮನ್ನು ಕರೆದಾನು ಪರಿಶುದ್ಧನಾಗಿರುವ ಪ್ರಕಾರವೇ ನೀವು ವಿಧೇಯರಿಗೆ ತಕ್ಕಂತೆ ನಿಮ್ಮ ಎಲ್ಲಾ ನಡವಳಿಕೆಯಲ್ಲಿ ಪರಿಶುದ್ಧರಾಗಿರಿ. - 1ಪೇತ್ರನು 1:15

ಕೆಟ್ಟದ್ದನಲ್ಲ, ಒಳ್ಳೆಯದನ್ನು ಅನುಸರಿಸಿರಿ, ಬಾಳುವಿರಿ, ನೀವು ಅಂದುಕೊಂಡಂತೆ ಸೇನಾಧೀಶ್ವರದೇವರಾದ ಯೆಹೋವನು ನಿಮ್ಮ ಸಂಗಡ ಇರುವನು

- ಆಮೋಸ 5:14a

ಆತನ ಪವಿತ್ರ ಸ್ಥಾನದಲ್ಲಿ ನಿಲ್ಲುವದಕ್ಕೆ ಎಂಥವನು ಯೋಗ್ಯನು? ಯಾವನು ಅಯೋಗ್ಯಕಾರ್ಯಗಳಲ್ಲಿ ಮನಸ್ಸಿಡದಜೆ ಮೋಸಪ್ರಮಾಣಮಾಡದೆ.

- ಕೀರ್ತನೆಗಳು 24:3b,4a

##  ಜನರು ದೇವರ ಅಗತ್ಯತೆಯನ್ನು ಪೂರೈಸಲು ಸಮರ್ಥರಲ್ಲ

ಆದರೆ ನಿಮ್ಮನ್ನು ನಾನು ಬಲ್ಲೆನು, ದೇವರಲ್ಲಿ ನಿಮಗೆ ಪ್ರೀತಿಯಿಲ್ಲವೆಂದು ನನಗೆ ತಿಳಿದದೆ. - ಯೋಹಾನ 5:42

ಯಾಕೆಂದರೆ ಯಾವನಾದರೂ ಧರ್ಮಶಾಸ್ತ್ರವನ್ನೆಲ್ಲಾ ಕೈಕೊಂಡು ನಡೆದು ಒಂದೇ ಒಂದರಲ್ಲಿ ತಪ್ಪಿದರೆ ಅವನು ಎಲ್ಲಾ ವಿಷಯದಲ್ಲಿಯೂ ಅಪರಾಧಿಯಾಗುತ್ತಾನೆ.

- ಯಾಕೋಬ 2:10

ಆಗ ನಾನು - ಅಯ್ಯೋ, ನನ್ನ ಗತಿಯನ್ನೂ ಏನು ಹೇಳಲಿ ! ನಾಶವಾದೆನಲ್ಲಾ; ನಾನು ಹೊಲಸು ತುಟಿಯವನು, ಹೊಲಸು ತುಟಿಯವರ ಮಧ್ಯದಲ್ಲಿ ವಾಸಿ ಸುವವನು; ಇಂಥ ನನ್ನ ಕಣ್ಣುಗಳು ರಾಜಾಧಿರಾಜರನ್ನು, ಸೇನಾಧೀಶ್ವರನಾದ ಯೆಹೋವನನ್ನು ಕಂಡವು - ಯೆಶಾಯ 6:5

ಹೀಗಿರುವುದರಿಂದ ಒಳ್ಳೇದನ್ನು ಮಾಡಬೇಕೆಂದು ತಿಳಿದು ಅದನ್ನು ಮಾಡದೆ ಇರುವವನು ಪಾಪಕ್ಕೊಳಗಾಗಿದ್ದಾನೆ.

- ಯಾಕೋಬ 4:17

ಇದು ಶಾಸ್ತ್ರದಲ್ಲಿ ಬರೆದಿರುವ ಮಾತುಗಳಿಗೆ ಸರಿಯಾಗಿದೆ; ಅವು ಯಾವವೆಂದರೆ - ನೀತಿವಂತನು ಇಲ್ಲ, ಒಬ್ಬನಾದರೂ ಇಲ್ಲ; - ರೋಮಾಪುರದವರಿಗೆ 3:10

ಎಲ್ಲರೂ ಪಾಪಮಾಡಿ ದೇವರ ಮಹಿಮೆಯನ್ನು ಹೊಂದದೆ ಹೋಗಿದ್ದಾರೆ.

- ರೋಮಾಪುರದವರಿಗೆ 3:23

ನೀತಿಯನ್ನು ಅನುಸರಿಸಿದವನೂ ತನ್ನ ಸಹೋ ದರನನ್ನು ಪ್ರೀತಿಸಿದವನೂ ದೇವರಿಂದ ಹುಟ್ಟಿದವರಲ್ಲ

-1 ಯೋಹಾನ 3:10b

ನಾವೆಲ್ಲರೂ ಕುರಿಗಳಂತೆ ದಾರಿತಪ್ಪಿ ತೊಳಲುತ್ತಿದ್ದೆವು . ಪ್ರತಿಯೊಬ್ಬನೂ ತನ್ನ ತನ್ನ ದಾರಿಯನ್ನು ಹಿಡಿಯು ತ್ತಿದ್ದನು.

-ಯೆಶಾಯ 53:6a

ಅಗಮ್ಯದೇವರಾದ ಯೆಹೋವನ ಮುಂದೆ ಯಾರು ನಿಂತಾರು? - 1 ಸಮುವೇಲನು 6:20b

## ಪಾಪದ ಮೇಲೆ ದೇವರ ಕೋಪವಿದೆ 

ದೇವರು ನ್ಯಾಯಕ್ಕೆ ಸರಿಯಾಗಿ ತೀರ್ಪು ಕೊಡುವವನು ಯಾವಾಗಲಾ ಕೋಪವುಳ್ಳವನು.

-ಕೀರ್ತನೆಗಳು 7:11

ಯೆಹೋವನು ಧೀರ್ಘಶಾಂತನಾಗಿದ್ದರೂ ಆತನ ಶಕ್ತಿಯು ಅಪಾರ, ಅಪರಾಧಿಗಳನ್ನು ಶಿಕ್ಷಿಸದೆ ಬಿಡನು ;

ನಹೂಮನ 1:3a

ಇವುಗಳ ನಿಮಿತ್ತ ದೇವರ ಕೋಪವು ಉಂಟಾಗುತ್ತದೆ.

- ಕೊಲೊಸ್ಸಯವರಿಗೆ 3:6

ಮೊದಲನೇದು, ನಿಮ್ಮ ನಂಬಿಕೆಯು ಲೋಕದಲ್ಲೆಲ್ಲಾ ಪ್ರಸಿದ್ಧಿಗೆ ಬಂದದ್ದರಿಂದ ನಿಮ್ಮೆಲ್ಲರ ವಿಷಯವಾಗಿ ಯೇಸುಕ್ರಿಸ್ತನ ಮೂಲಕ ನನ್ನ ದೇವರಿಗೆ ಸ್ತೋತ್ರ ಮಾಡುತ್ತೇನೆ. - ರೋಮಾಪುರದವರಿಗೆ 1:18

ಹೇಗೆಂದರೆ ಅವರು ಸಕಲ ವಿಧವಾದ ಅನ್ಯಾಯ ದುರ್ಮಾರ್ಗತನ ಲೋಲುಪ್ತಿ ದುಷ್ಟತ್ವಗಳಿಂದಲೂ ಹೊಟ್ಟೇಕಿಚ್ಚು ಕೊಲೆಜಗಳ ಮೋಸ ಹಗೆತನಗಳಿಂದಲೂ ತುಂಬಿದವರಾದರು. ಅವರು ಕಿವಿ ಊದುವವರೂ, ಚಾಡಿ ಹೇಳುವವರೂ ದೇವರನ್ನು ದ್ವೇಷಿಸುವವರೂ ಸೊಕ್ಕಿನವರೂ, ಅಹಂಕಾರಿಗಳೂ ಬಡಾಯಿಕೊಚ್ಚುವವ 'ರೂ ಕೇಡನ್ನು ಕಲ್ಪಿಸುವವವರೂ, ತಂದೆತಾಯಿಗಳ ಮಾತನ್ನು ಕೇಳದವರೂ, ವಿವೇಕವಿಲ್ಲದವರೂ ಮಾತಿಗೆ ತಪ್ಪುವವರೂ, ಮಮತೆಯಿಲ್ಲದವರೂ ಕರುಣೆಯಿಲ್ಲದವರೂ ಆದರು. ಇಂಥವುಗಳನ್ನು ನಡಿಸುವವರು ಮರಣ ಕ್ಕೆ ಪಾತ್ರರಾಗಿದ್ದಾರೆಂದು ದೇವವಿಧಿಯು ಅವರಿಗೆ ತಿಳಿದಿದ್ದರೂ ಅವರು ತಾವೇ ಅವುಗಳನ್ನು ಮಾಡುವ ದಲ್ಲದೆ ಮಾಡುವವರನ್ನೂ ಅನುಮೋದಿಸುತ್ತಾರೆ.

- ರೋಮಾಪುರದವರಿಗೆ 1:29-32

ಕೆಟ್ಟದ್ದನ್ನು ನಡಿಸುವ ಪ್ರತಿಯೊಬ್ಬ ನರಪ್ರಾಣಿಗೆ ಕಷ್ಟವೂ ಸಂಕಟವೂ ಬರುವವು - ಯೆಹೂದ್ಯರಿಗೆ ಮೊದಲು, ಅನಂತರ ಗ್ರೀಕರಿಗೆ ಸಹ

- ರೋಮಾಪುರದವರಿಗೆ 2:9a

## ೧೬ ನ್ಯಾಯತೀರ್ಪು ಮುಂದೆ ಬರಲಿದೆ

ಒಂದೇ ಸಾರಿ ಸಾಯುವದೂ ಆಮೇಲೆ ನ್ಯಾಯ ತೀರ್ಪು ಮನುಷ್ಯರಿಗೆ ನೇಮಕವಾಗಿದೆ.

-ಇಬ್ರಿಯರಿಗೆ 9:27b

ಇದಲ್ಲದ ಸತ್ತವರಾದ ದೊಡ್ಡವರೂ ಚಿಕ್ಕವರೂ ಸಿಂಹಾಸನದ ಮುಂದೆ ನಿಂತಿರುವುದನ್ನು ಕಂಡೆನು. ಆಗ ಪುಸ್ತಕಗಳು ತೆರೆಯಲ್ಪಟ್ಟವು. ಆ ಪುಸ್ತಕಗಳಲ್ಲಿ ಬರೆದಿದ್ದ ಸಂಗತಿಗಳ ಆಧಾರದಿಂದ ಅವರವರ ಕೃತ್ಯಗಳ ಪ್ರಕಾರ ಸತ್ತವರಿಗೆ ನ್ಯಾಯ ತೀರ್ಪಾಯಿತು.

- ಪ್ರಕಟಣೆ 20:12

ಯಾವನ ಹೆಸರು ಜೀವಬಾಧ್ಯರ ಪಟ್ಟಿಯಲ್ಲಿ ಬರೆದದ್ದಾಗಿ ಕಾಣಲಿಲ್ಲವೋ ಅವನು ಬೆಂಕಿಯ ಕೆರೆಗೆ ದೊಬ್ಬಿಲ್ಪಟ್ಟನು.

- ಪ್ರಕಟಣೆ 20:15

ಜೀವಸ್ವರೂಪನಾದ ದೇವರ ಕೈಯಲ್ಲಿ ಸಿಕ್ಕಿ ಬೀಳುವದು ಭಯಂಕರವಾದದ್ದು.

- ಇಬ್ರಿಯರಿಗೆ 10:31

ಇದಲ್ಲದೆ ನಾನು ನಿಮಗೆ ಹೇಳುವುದೇನೆಂದರೆ ಮನುಷ್ಯರು ಸುಮ್ಮನೆ ಆಡುವ ಪ್ರತಿಯೊಂದು ಮಾತಿನ ವಿಷಯವಾಗಿ ನ್ಯಾಯ ವಿಚಾರಣೆಯ ದಿನದಲ್ಲಿ ಉತ್ತರ ಕೊಡಬೇಕು.

- ಮತ್ತಾಯ 12:36

ಒಳ್ಳೇದಾಗಲಿ ಕೆಟ್ಟದಾಗಲಿ ಸಕಲ ರಹಸ್ಯ ಸಂಗತಿ ಗಳನ್ನು ವಿಮರ್ಶಿಸುವ ನ್ಯಾಯವಿಚಾರಣೆಗೆ ದೇವರು ಪ್ರತಿಯೊಂದು ಕಾರ್ಯವನ್ನು ಗುರಿಮಾಡುವನು.

-ಪ್ರಸಂಗಿ 12:14

ಹಾಗೆಯೇ ಯುಗದ ಸಮಾಪ್ತಿಯಲ್ಲಿ ಆಗುವದು. ದೇವದೂತರು ಹೊರಟು ಬಂದು ನೀತಿವಂತರೊಳಗಿಂದ ಕೆಟ್ಟವರನ್ನು ಬೇರೆ ಮಾಡಿ ಅವರನ್ನು ಬೆಂಕೀಕೊಂಡದಲ್ಲಿ ಹಾಕುವರು. ಅಲ್ಲಿ ಗೋಳಾಟವೂ ಕಟಕಟನೆ ಹಲ್ಲುಕಡಿಯೋಣವೂ ಇರುವವು.

- ಮತ್ತಾಯ 13:49,50

## ಮಾನಸಾಂತರವು ಕ್ಷಮಾಪಣೆಯನ್ನು ತರುತ್ತದೆ ೧೯

ಯೆಹೋವನು ಸಿಕ್ಕುವ ಕಾಲದಲ್ಲಿ ಆತನನ್ನು ಆಶ್ರಯಿಸಿರಿ, ಆತನು ಸಮೀಪದಲ್ಲಿರುವಾಗ ಆತನಿಗೆ ಬಿನ್ನಹ ಮಾಡಿರಿ. ದುಷ್ಟನು ತನ್ನ ದುರ್ಮಾರ್ಗವನ್ನು ಬಿಡಲಿ, ಕೆಡುಕನು ತನ್ನ ದುರಾಲೋಚನೆಗಳನ್ನು ತ್ಯಜಿಸಲಿ, ಯೆಹೋವನ ಕಡೆಗೆ ತಿರುಗಿಕೊಂಡು ಬರಲಿ, ಆತನು ಅವನನ್ನು ಕರುಣಿಸುವನು; ನಮ್ಮ ದೇವರನ್ನು ಆಶ್ರಯಿಸಲಿ, ಆತನು ಮಹಾಕೃಪೆಯಿಂದ ಕ್ಷಮಿಸುವನು. -ಯೆಶಾಯ 55:6,7

ಮುರಿದ ಮನುಸ್ಸುಳ್ಳವರಿಗೆ ಯೆಹೋವನು ನೆರವಾಗುತ್ತಾನೆ. ಕುಗ್ಗಿಹೋದವರನ್ನು ಉದ್ಧಾರ ಮಾಡುತ್ತಾನೆ.

- ಕೀರ್ತನೆಗಳು 34:18

ಒಂದು ವೇಳೆ ಯೆಹೂದವಂಶದವರು ನಾನು ಅವರಿಗೆ ಮಾಡಬೇಕೆಂದಿರುವ ಕೇಡನ್ನು ಕೇಳಿ ತಮ್ಮ ತಮ್ಮ ದುರ್ಮಾರ್ಗಗಳಿಂದ ಹಿಂದಿರುಗಿಯಾರು ; ಹಿಂದಿರುಗಿರದರೆ ಅವರ ಪಾಪಾಪರಾಧಗಳನ್ನು ಕ್ಷಮಿಸಿ ಬಿಡುವೆನು.

- ಯೆರೆಮೀಯ 36:3

ಯೆಹೋವನ ಸನ್ನಿಧಿಯಲ್ಲಿ ನನ್ನ ದ್ರೋಹವನ್ನು ಒಪ್ಪಿಕೊಳ್ಳುವೆನು ಅಂದುಕೊಂಡು ನನ್ನ ಪಾಪವನ್ನು ಮರೆಮಾಡದೆ ನಿನಗೆ ನನ್ನ ದೋಷವನ್ನು ತಿಳಿಸಿದೆನು. ನೀನು ನನ್ನ ಅಪರಾಧಗಳನ್ನು ಪರಿಹರಿಸಿ ಬಿಟ್ಟೆ

- ಕೀರ್ತನೆಗಳು 32:5

ನಮ್ಮ ಪಾಪಗಳನ್ನು ಒಪ್ಪಿಕೊಂಡು ಅರಿಕೆ ಮಾಡಿದರೆ ಆತನು ನಂಬಿಗಸ್ತನೂ ನೀತಿವಂತನೂ ಆಗಿರುವುದರಿಂದ ನಮ್ಮ ಪಾಪಗಳನ್ನು ಕ್ಷಮಿಸಿಬಿಟ್ಟು ಸಕಲ ಅನೀತಿಯನ್ನು ಪರಿಹರಿಸಿ ನಮ್ಮನ್ನು ಶುದ್ಧಿ ಮಾಡುವನು.

- 1 ಯೋಹಾನ 1:9

ಆದುದರಿಂದ ದೇವರು ನಿಮ್ಮ ಪಾಪಗಳನ್ನು ಅಳಿಸಿ ಬಿಡುವ ಹಾಗೆ ನೀವು ಪಶ್ಚಾತ್ತಾಪ ಪಟ್ಟು ಆತನ ಕಡೆಗೆ ತಿರುಗಿಕೊಳ್ಳಿರಿ. - ಅಪೋಸ್ತಲರ ಕೃತ್ಯಗಳು 3:19a

ಯೆಹೋವ ದೇವರು ಏನು ಹೇಳುತ್ತಾನೋ ಕೇಳುತ್ತೇನೆ. ಆತನು ತನ್ನ ಭಕ್ತ ಜನರಿಗೆ ಸಮಾಧಾನ ವಾಕ್ಯ ವನ್ನು ಹೇಳುತ್ತಾನಲ್ಲಾ. ಅವರಾದರೋ ತಿರಿಗಿ ಮೂರ್ಖ ತನದಲ್ಲಿ ಬೀಳದಿರಲಿ. - ಕೀರ್ತನೆಗಳು 85:8

## ೨೨ ವಿಮೋಚನೆಯು ದೇವರಿಂದಲೇ ಪೂರ್ವಯೋಜಿತವಾಗಿದೆ

ಅವರು ನೀತಿವಂತರೆಂದು ನಿರ್ಣಯಹೊಂದುವದು ದೇವರ ಉಚಿತಾರ್ಥವಾದ ಕೃಪೆಯಿಂದಲೇ ಕ್ರಿಸ್ತಯೇಸುವಿನಿಂದಾದ ಪಾಪ ವಿಮೋಚನೆಯ ಮೂಲಕವಾಗಿ ಆಗುವದು. ಈತನು ತನ್ನ ರಕ್ತವನ್ನು ಸುರಿಸಿ ನಂಬಿಕೆಯಿದ್ದವರಿಗಾಗಿ ಕೃಪಾದಾರವಾಗಬೇಕೆಂದು ದೇವರು ಈತನನ್ನು ಮುಂದಿಟ್ಟನು. -ರೋಮಾ:3:24,25a

ಆದರೆ ನಾವು ಪಾಪಿಗಳಾಗಿದ್ದಾಗಲೂ ಕ್ರಿಸ್ತನು ನಮಗೋಸ್ಕರ ಪ್ರಾಣಕೊಟ್ಟದ್ದರಲ್ಲಿ ದೇವರು ನಮ್ಮ ಮೇಲೆ ತನಗಿರುವ ಪ್ರೀತಿಯನ್ನು ಸಿದ್ಧಾಂತಪಡಿಸಿದ್ದಾನೆ. ಈಗ ನಾವು ಆತನ ರಕ್ತದಿಂದ ನೀತಿವಂತರಾಗಿರಲಾಗಿ ಆತನ ಮೂಲಕ ಬರುವ ಕೋಪಕ್ಕೆ ತಪ್ಪಿಸಿಕೊಳ್ಳುವುದು ಮತ್ತೂ ನಿಶ್ಚಯವಲ್ಲವೇ. - ರೋಮಾ 5:8,9

ಯೇಸುಕ್ರಿಸ್ತನ ಮೇಲಣ ನಂಬಿಕೆಯಿಂದಲೇ ಹೊರತು ನೇಮನಿಷ್ಟೆಗಳನ್ನನು ಸರಿಸಿ ನೀತಿವಂತನೆಂದು ನಿರ್ಣಯಿಸಲ್ಪಡುವದಿಲ್ಲವೆಂಬುದು ನಮಗೆ ತಿಳಿದಿರುವದರಿಂದ ನಾವು ಸಹ ನೇಮ ನಿಷ್ಟೆಗಳನ್ನು ಬಿಟ್ಟು ಕ್ರಿಸ್ಥನ ಮೇಲಣ ನಂಬಿಕೆಯಿಂದಲೇ ನೀತಿವಂತರೆಂದು ನಿರ್ಣಯಿಸಲ್ಪ ಡುವದಕ್ಕಾಗಿ ಕ್ರಿಸ್ತ ಯೇಸುವಿನಲ್ಲಿ ನಂಬಿಕೆಯಿಟ್ಟವು. - ಗಲಾತ್ಯ 2:16a

ನಂಬಿಕೆಯ ಮೂಲಕ ಕೃಪೆಯಿಂದಲೇ ರಕ್ಷಣೆ ಹೊಂದಿದವರಾಗಿದ್ದೀರಿ. ಆ ರಕ್ಷಣೆಯು ನಿಮ್ಮಿಂದುಂಟಾ ದುದಲ್ಲ. ಅದು ದೇವರ ವರವೇ, ಅದು ಪುಣ್ಯ ಕ್ರಿಯೆಗ ಳಿಂದ ಉಂಟಾದುದ್ದಲ್ಲ. ಆದುದರಿಂದ ಹೊಗಳಿಕೊಳ್ಳು ವುದಕ್ಕೆ ಯಾರಿಗೂ ಆಸ್ಪದವಿಲ್ಲ. - ಎಫೆಸ 2:8,9

ಆತನಲ್ಲಿ ನಂಬಿಕೆಯಿಡುವ ಪ್ರತಿಯೊಬ್ಬನು ಆತನ ಹೆಸರಿನ ಮೂಲಕವಾಗಿ ಪಾಪಪರಿಹಾರವನ್ನು ಹೊಂದುವನೆಂದು ಆತನ ವಿಷಯದಲ್ಲಿ ಪ್ರವಾದಿ ಗಳೆಲ್ಲರೂ ಸಾಕ್ಷಿ ಹೇಳಿದ್ದಾರೆ ಅಂದನು.

ಅ. ಕೃತ್ಯಗಳು10:43

ಬರಬೇಕಾದ ರಕ್ಷಣೆಯು ಇನ್ನಾರಲ್ಲಿಯೂ ಸಿಕ್ಕು ವುದಿಲ್ಲ; ಆ ಹೆಸರಿನಿಂದಲೇ ಹೊರತು ಆಕಾಶದ ಕೆಳಗೆ ಮನುಷ್ಯರೊಳಗೆ ರಕ್ಷಣೆಯಾಗುವುದಿಲ್ಲ ಎಂದು ಹೇಳಿದನು.

ಅ. ಕೃತ್ಯಗಳು 4:12

ಈತನು ನಮಗೋಸ್ಕರ ತನ್ನ ರಕ್ತವನ್ನು ಸುರಿಸಿದ್ದ ರಿಂದ ನಮ ಅಪರಾಧಗಳು ಪರಿಹಾರವಾಗಿ ನಮಗೆ ಬಿಡುಗಡೆಯಾಯಿತು. ಇದು ದೇವರ ಕೃಪಾತಿಶಯದಂತ ಎಫೆಸ 1:7

## ನಾವು ದೇವರಿಗೆ ಮರೆಯಾಗಿರಲು ಸಾಧ್ಯವಿಲ್ಲ ೧೭

ಯೆಹೋವನ ದೃಷ್ಟಿಯು ಎಲ್ಲೆಲ್ಲಿಯೂ ಇರುವದು; ಆತನು ಕೆಟ್ಟವರನ್ನೂ ಒಳ್ಳೆಯವರನ್ನೂ ನೋಡುತ್ತಲೇ ಇರುವನು.

-ಜ್ಞಾನೋಕ್ತಿಗಳು 15:3

ಯೆಹೋವನೇ, ನೀನು ನನ್ನನ್ನು ಪರೀಕ್ಷಿಸಿ ತಿಳುಕೊಂಡಿದ್ದೀ; ನಾನು ಕೂತುಕೊಳ್ಳುವದೂ ಏಳುವದೂ ನಿನಗೆ ಗೊತ್ತದೆ; ದೂರದಿಂದಲೇ ನನ್ನ ಆಲೋಚನೆ ಗಳನ್ನು ಬಲ್ಲವನಾಗಿರುತ್ತೀ; ನಾನು ನಡೆಯುವುದನ್ನೂ ಮಲಗುವುದನ್ನೂ ಶೋಧಿಸಿ ಗ್ರಹಿಸಿಕೊಳ್ಳುತ್ತೀ, ನನ್ನ ನಡತೆಯಲ್ಲಾ ನಿನಗೆ ಗೋಚರವಾಗಿದೆ. ಯೆಹೋವನೇ, ನನ್ನ ನಾಲಿಗೆಯ ಮಾತುಗಳಲ್ಲಿ ನೀನು ಅರಿಯದೆ ಇರುವಂಥದು ಒಂದೂ ಇಲ್ಲ.

-ಕೀರ್ತನೆಗಳು 139 : 1-4

ಯೆಹೋವನು ಮನುಷ್ಯರಂತೆ ಹೊರಗಿನ ತೋರಿಕೆಯನ್ನು ನೋಡದೆ ಹೃದಯವನ್ನೇ ನೋಡು ವವನಾಗಿದ್ದಾನೆ ಅಂದನು. - 1 ಸಮುವೇಲನು 16:7b

ಕಿವಿ ಮಾಡಿದವನು ಕೇಳನೋ ?
ಕಣ್ಣು ಕೊಟ್ಟವನು ನೋಡನೋ ?

-ಕೀರ್ತನೆಗಳು 94:9

ಅವರ ನಡತೆಯನ್ನೆಲ್ಲಾ ದೃಷ್ಟಿಸುತ್ತೇನೆ, ಅದು ನನ್ನ ಮುಖಕ್ಕೆ ಮರೆಯಾಗಿಲ್ಲ; ಅವರ ಅಧರ್ಮವು ನನಗೆ ಗುಟ್ಟಲ್ಲ, ಪ್ರತ್ಯಕ್ಷದಲ್ಲೇ ಇದೆ.

- ಯೆರೆಮೀಯ 16:17

ನಾವು ಯಾವಾತನಿಗೆ ಲೆಕ್ಕ ಒಪ್ಪಿಸಬೇಕಾಗಿದೆಯೋ ಆತನ ದೃಷ್ಟಿಗೆ ಸಮಸ್ತವು ಮುಚ್ಚುಮರೆಯಿಲ್ಲ ದ್ದಾಗಿಯೂ ಬೈಲಾದದ್ದಾಗಿಯೂ ಅದೆ. ಆತನ ಸನ್ನಿದಿ ಯಲ್ಲಿ ಅಗೋಚರವಾಗಿರುವ ಸೃಷ್ಟಿಯು ಒಂದೂ ಇಲ್ಲ.

-ಇಬ್ರಿಯರಿಗೆ 4:13

ಅಧರ್ಮಿಗಳು ಅಡಗಿಕೊಳ್ಳುವುದಕ್ಕತೆ ಅನುಕೂಲ ವಾದ ಯಾವ ಕತ್ತಲೂ ಯಾವ ಗಾಡಾಂಧಕಾರವೂ ಇರುವುದಿಲ್ಲ.

-ಯೋಬನು 34:22

## ೨೦ ದೇವರೊಂದಿಗೆ ನಮ್ಮ ಸಮಾಧಾನಪಡಿಸಲು ಯಜ್ಞದ ಅಗತ್ಯವಿದೆ.

14ನೇ ಪುಟದೊಂದಿಗೆ ಹೋಲಿಸಿರಿ)

ಅವನು ಆ ಪಶುವಿನ ತಲೆಯ ಮೇಲೆ ಕೈಯಿಡಬೇಕು, ಆಗ ಅದು ಅವನಿಗೋಸ್ಕರ ದೋಷ ಪರಿಹಾರವನ್ನು ಮಾಡುವುದಕ್ಕಾಗಿ ಅಂಗೀಕಾರವಾಗುವದು. ಯಾಕೆಂದರೆ, ಪ್ರತಿದೇಹಿಗೂ ರಕ್ತವೇ ಪ್ರಾಣಾಧಾರ. ಅಂಥ ರಕ್ತವನ್ನು ನೀವು ಯಜ್ಞವೇದಿಗೆ ಎರಚಿ ನಿಮಗೋಸ್ಕರ ದೋಷಪರಿಹಾರ ಮಾಡಿಕೊಳ್ಳಬೇಕೆಂದು ನಿಮಗೆ ಅನುಗ್ರಹ ಮಾಡಿದ್ದೇನೆ. ರಕ್ತವು ಪ್ರಾಣಾಧಾರವಾಗಿರುವ ಕಾರಣ ಅದರಿಂದ ದೋಷಪರಿಹಾರವಾಗುತ್ತಷ್ಟೆ

- ಯಾಜಕಕಾಂಡ 1:4;17:11

ಧರ್ಮ ಶಾಸ್ತ್ರದ ಪ್ರಕಾರ ಸ್ವಲ್ಪ ಕಡಿಮ ಎಲ್ಲಾ ವಸ್ತುಗಳು ರಕ್ತದಿಂದಲೇ ಶುದ್ಧೀಕರಿಸಲ್ಪಡುವವು ; ರಕ್ತಧಾರೆಯಿಲ್ಲದೆ ಪಾಪಪರಿಹಾರ ಉಂಟಾಗುವುದಿಲ್ಲ.

- ಇಬ್ರಿಯರಿಗೆ 9:22b

ಆ ಮರಿಯು ಪೂರ್ಣಾಂಗವಾದ ಒಂದು ವರುಷದ ಗುಂಡಾಗಿರಬೇಕು. ಆ ರಕ್ತವು ನೀವಿರುವ ಮನೆಗಳನ್ನು ಸೂಚಿಸುವದಾದ ಕಾರಣ ನಾನು ಅದನ್ನು ಕಂಡು ನಿಮಗೆ ಯಾವ ನಷ್ಟವನ್ನೂ ಮಾಡದೆ ಮುಂದಕ್ಕೆ ದಾಟಿ ಹೋಗುವೆನು

- ವಿಮೋಚನಾ ಕಾಂಡ 12:5a, 13a

ಇಸಾಕನು - ಇಗೋ, ಬೆಂಕಿಯೂ, ಕಟ್ಟಿಗೆಯೂ ಉಂಟು ಆದರೆ ಹೋಮಕ್ಕೆ ಬೇಕಾದ ಕುರಿ ಎಲ್ಲಿ ಎಂದು ಕೇಳಿದ್ದಕ್ಕೆ ಅಬ್ರಹಾಮನು - ಮಗನೇ, ಹೋಮಕ್ಕೆ ಬೇಕಾದ ಕುರಿಯನ್ನು ದೇವರೇ ಒದಗಿಸುವನು ಅಂದನು. ಅಬ್ರಹಾಮನು ಕಣ್ಣೆತ್ತಿ ನೋಡುವಾಗ ತನ್ನ ಹಿಂದುಗಡೆ ಒಂದು ಟಗರು ಪೊದೆಯಲ್ಲಿ ಕೊಂಬುಗಳಿಂದ ಸಿಕ್ಕಿಕೊಂಡಿತ್ತು. ಅವನು ಹೋಗಿ ಅದನ್ನು ಹಿಡಿದು ತಂದು ತನ್ನ ಮಗನಿಗೆ ಬದಲಾಗಿ ಹೋಮ ಮಾಡಿದನು.

- ಆದಿಕಾಂಡ 22:7b-8a,13

## ಯೇಸುವಿನ ಜನನವು ಘೋಷಿಸಲಾಗಿದೆ ೨೩

ದೇವರು ಗಬ್ರಿಯೇಲನೆಂಬ ತನ್ನ ದೂತನನ್ನು ಸೀಮೆಯ ನಜರೇತ ಎಂಬ ಊರಿಗೆ ಒಬ್ಬ ಕನ್ಯೆಯ ಬಳಿಗೆ ಕಳುಹಿಸಿದನು; ಆ ಕನ್ಯೆಯ ಹೆಸರು ಮರಿಯಳು; ಆಕೆಯು ದಾವೀದನ ಮನೆತನದ ಯೋಸೆಫನೆಂಬ ಪುರುಷನಿಗೆ ನಿಶ್ಚಿತಾರ್ಥವಾಗಿದ್ದಳು. ಆ ದೂತನು ಈಕೆಯ ಬಳಿಗೆ ಬಂದು - ದೇವರ ದಯೆ ಹೊಂದಿದವಳೇ, ನಿನಗೆ ಶುಭವಾಗಲಿ ಕರ್ತನು ನಿನ್ನ ಸಂಗಡ ಇದ್ದಾನೆ. ಅಂದನು. ಆಕೆಯು ಆ ಮಾತಿಗೆ ತತ್ತರಿಸಿ, ಇದೆಂಥ ಆಶೀರ್ವಾದ ಎಂದು ಯೋಚನೆ ಮಾಡುತ್ತಿರಲಾಗಿ, ಆ ದೂತನು ಆಕೆಗೆ ಮರಿಯಳೇ, ಹೆದರಬೇಡ, ನಿನಗೆ ದೇವರ ದಯೆ ದೊರಕಿತು. ಇಗೋ, ನೀನು ಗರ್ಭಿಣಿಯಾಗಿ ಒಬ್ಬ ಮಗನನ್ನು ಹೆರುವಿ; ಆತನಿಗೆ ಯೇಸುವೆಂದು ಹೆಸರಿಡಬೇಕು. ಆತನು ಮಹಾಪುರುಷನಾಗಿ ಪರಾತ್ಪರನ ಕುಮಾರನೆನಿಸಿಕೊಳ್ಳುವನು. ಇದಲ್ಲದೆ ದೇವರಾಗಿರುವ ಕರ್ತನು ಆತನ ಮೂಲಪಿತನಾದ ದಾವೀದನ ಸಿಂಹಾಸನವನ್ನು ಆತನಿಗೆ ಕೊಡುವನು. ಆತನು ಯಾಕೋಬನ ವಂಶವನ್ನು ಸದಾಕಾಲ ಆಳುವನು. ಆತನ ರಾಜ್ಯಕ್ಕೆ ಅಂತ್ಯವೇ ಇಲ್ಲ ಎಂದು ಹೇಳಿದನು. ಮರಿಯಳು ಆ ದೂತನನ್ನು ಇದು ಹೇಗಾದೀತು? ನಾನು ಪುರುಷನನ್ನು ಅರಿತವಳಲ್ಲವಲ್ಲಾ ಎಂದು ಕೇಳಿದ್ದಕ್ಕೆ ದೂತನು- ನಿನ್ನ ಮೇಲೆ ಪವಿತ್ರಾತ್ಮ ಬರುವದು ಪರಾತ್ಪರನ ಶಕ್ತಿಯ ನೆರಳು ನಿನ್ನ ಮೇಲೆ ಬೀಳುವದು ಆದದರಿಂದ ಹುಟ್ಟುವ ಆ ಪವಿತ್ರ ಶಿಶು ದೇವರ ಮಗನೆನಿಸಿಕೊಳ್ಳುವದು. ಮತ್ತು ನಿನ್ನ ಬಂಧುವಾದ ಯೆಲಿಸಬೆತಳಿದ್ದಾಳಲ್ಲಾ, ಆಕೆ ಸಹ ಮುಪ್ಪಿನವಳಾದರೂ ಗರ್ಭಿಣಿಯಾಗಿದ್ದಾಳೆ. ಆಕೆಯ ಗರ್ಭದಲ್ಲಿ ಗಂಡು ಮಗುವಿದೆ, ಬಂಜೆಯೆನಿಸಿಕೊಂಡಿದ್ದ ಆಕೆಗೆ ಇದೇ ಆರನೇ ತಿಂಗಳು. ದೇವರಿಂದ ಬರುವ ಯಾವ ಮಾತಾದರೂ ನಿಶ್ಫಲವಾಗುವದಿಲ್ಲ ಎಂದನು. ಆಗ ಮರಿಯಳು - ಇಗೋ, ನಾನು ಕರ್ತನ ದಾಸಿ, ನಿನ್ನ ಮಾತಿನಂತೆ ನನಗಾಗಲಿ ಅಂದಳು. ಆಮೇಲೆ ಆ ದೂತನು ಆಕೆಯ ಬಳಿಯಿಂದ ಹೊರಟು ಹೋದನು. ಲೂಕ 1:26b-38

## ೧೮ ಪಾಪದಿಂದ ತಿರುಗಿಕೊಳ್ಳುವ ಅಗತ್ಯವಿದೆ.

ಕರ್ತನಾದ ಯೆಹೋವನು ಇಂತೆನ್ನುತ್ತಾನೆ - ದುಷ್ಟನ ಸಾವಿನಲ್ಲಿ ನನಗೆ ಲೇಶವಾದರೂ ಸಂತೋಷವುಂಟೋ? ಅವನು ತನ್ನ ದುರ್ಮಾರ್ಗವನ್ನು ಬಿಟ್ಟು ಬಾಳುವುದೇ ನನಗೆ ಸಂತೋಷ.

-ಯೆಹಜ್ಕೇಲನು 18:23

ಹಾಗೆ ಭಾವಿಸಕೂಡದೆಂದು ನಿಮಗೆ ಹೇಳುತ್ತೇನೆ, ದೇವರ ಕಡೆಗೆ ತಿರುಗಿಕೊಳ್ಳದಿದ್ದರೆ ನೀವೆಲ್ಲರೂ ಹಾಗೆಯೇ ಹಾಳಾಗಿ ಹೋಗುವಿರಿ. -ಲೂಕ 13:3

ದೋಷಗಳನ್ನು ಮುಚ್ಚಿಕೊಳ್ಳುವವನಿಗೆ ಶುಭವಾಗದು : ಅವುಗಳನ್ನು ಒಪ್ಪಿಕೊಂಡು ಬಿಟ್ಟು ಬಿಡುವವನಿಗೆ ಕರುಣೆ ದೊರೆಯುವುದು. - ಜ್ಞಾನೋಕ್ತಿಗಳು 28:13

ಯೆಹೋವನು ಇಂತೆನ್ನುತ್ತಾನೆ - ಈಗಲಾದರೋ ನೀವು ಮನಃಪೂರ್ವಕವಾಗಿ ನನ್ನ ಕಡೆಗೆ ತಿರುಗಿಕೊಂಡು, ಉಪವಾಸಮಾಡಿರಿ, ಅಳಿರಿ, ಗೋಳಾಡಿರಿ, ನಿಮ್ಮ ಬಟ್ಟೆಗಳನ್ನಲ್ಲ, ನಿಮ್ಮ ಹೃದಯಗಳನ್ನು ಹರಿದುಕೊಂಡು ನಿಮ್ಮ ದೇವರಾದ ಯೆಹೋವನ ಕಡೆಗೆ ತಿರಿಗಿಕೊಳ್ಳಿರಿ, ಆತನು ದಯೆಯೂ ಕನಿಕರವೂ ದೀರ್ಘಶಾಂತಿಯೂ ಮಹಾಕೃಪೆಯೂ ಉಳ್ಳುವನಾಗಿದ್ದಾನೆ.

-ಯೋವೇಲ 2:12,13a

ಮಾತುಗಳನ್ನು ತೆಗೆದುಕೊಂಡು ಯೆಹೋವನ ಬಳಿಗೆ ಹಿಂದಿರುಗಿ ಆತನಿಗೆ - ನಮ್ಮ ಅಪರಾಧವನ್ನು ಸಂಪೂರ್ಣವಾಗಿ ನಿವಾರಣೆ ಮಾಡಿ ಒಳ್ಳೆಯದನ್ನು ಅಂಗೀಕರಿಸು

- ಹೋಶೇಯ 14:2a

ಅವನು ಮನುಷ್ಯರ ಮುಂದೆ ನಿಂತು ನಾನು ಪಾಪ ಮಾಡಿ ನ್ಯಾಯವನ್ನು ಕೆಡಿಸಿದ್ದರೂ, ಆತನು ಮುಯ್ಯಿತೀರಿಸದೆ ನನ್ನ ಆತ್ಮವನ್ನು ಅಧೋಲೋಕಕ್ಕೆ ಹೋಗದಂತೆ ವಿಮೋಚಿಸಿದ್ದಾನೆ, ನನ್ನ ಜೀವವು ಬೆಳಕನ್ನು ಕಾಣುತ್ತಿರುವುದು ಎಂದು ಕೀರ್ತನೆ ಹಾಡುವನು. - ಯೋಬನು 33:27,28

ನಿಮ್ಮ ನಿಮ್ಮ ನಡತೆಗೆ ತಕ್ಕ ಹಾಗೆ ನಾನು ನಿಮಗೆ ತೀರ್ಪು ಮಾಡುವೆನು ; ಅಧರ್ಮವು ನಿಮ್ಮನ್ನು ನಾಶ ಮಾಡದಂತೆ ತಿರುಗಿಕೊಂಡು ನಿಮ್ಮ ಅಪರಾಧಗಳನ್ನೆಲ್ಲಾ ಬಿಟ್ಟು ಬಿಡಿರಿ.

- ಯೆಹೆಜ್ಕೇಲನು 18:30b

## ಯೇಸು, ದೇವರು ಒದಗಿಸಿದ ಕುರಿಮರಿಯಾಗಿದ್ದಾನೆ ೨೧

ಮರುದಿನ ಯೋಹಾನನು ತನ್ನ ಕಡೆಗೆ ಬರುವ ಯೇಸುವನ್ನು ನೋಡಿ - ಅಗೋ ದೇವರು ನೇಮಿಸಿದ ಕುರಿ, ಲೋಕದ ಪಾಪವನ್ನು ನಿವಾರಣೆ ಮಾಡುವವನು

- ಯೋಹಾನ 1:29

ನಮ್ಮೆಲ್ಲರ ದೋಷಫಲವನ್ನೂ ಯೆಹೋವನು ಅವನ ಮೇಲೆ ಹಾಕಿದನು. ಅವನು ಬಾಧೆಗೆ ಒಳಗಾಗಿ ತನ್ನನ್ನು ತಗ್ಗಿಸಿಕೊಂಡನು, ಬಾಯಿ ತೆರೆಯಲಿಲ್ಲ. ವಧ್ಯಸ್ಥಾನಕ್ಕೆ ಒಯ್ಯಲ್ಪಡುವ ಕುರಿಯಂತೆಯೂ ಉಣ್ಣೆ ಕತ್ತರಿಸುವವರ ಮುಂದೆ ಮೌನವಾಗಿರುವ ಕುರಿಯ ಹಾಗೂ ಇದ್ದನು, ಬಾಯಿ ತೆರೆಯಲೇ ಇಲ್ಲ.

-ಯೆಶಾಯ 53:66,7

ಹೋತಗಳ ಮತ್ತು ಹೋರಿಕರಗಳ ರಕ್ತವನ್ನು ತೆಗೆದುಕೊಳ್ಳದೆ ಸ್ವಂತ ರಕ್ತವನ್ನೇ ತೆಗೆದುಕೊಂಡು ನಮಗೋಸ್ಕರ ನಿತ್ಯ ವಿಮೋಚನೆಯನ್ನು ಸಂಪಾದಿಸಿಕೊಂಡವನಾಗಿ ಒಂದೇ ಸಾರಿ ದೇವರ ಸನ್ನಿಧಾನಕ್ಕೆ ಪ್ರವೇಶಿಸಿದನು. ಆದರೆ ಒಂದೇ ಸಾರಿ ಯುಗಗಳ ಸಮಾಪ್ತಿಯಲ್ಲೇ ಆತನು ಪಾಪ ನಿವಾರಣೆ ಮಾಡಬೇಕೆಂಬ ಉದ್ದೇಶದಿಂದ ತನ್ನನ್ನು ಯಜ್ಞಮಾಡಿಕೊಳ್ಳುವವನಾಗಿ ಪ್ರತ್ಯಕ್ಷನಾದನು. ಹಾಗೆಯೇ ಕ್ರಿಸ್ತನು ಸಹ ಬಹು ಜನರ ಪಾಪಗಳನ್ನು ಹೊತ್ತುಕೊಳ್ಳುವದಕ್ಕೋಸ್ಕರ ಒಂದೇ ಸಾರಿ ಸಮರ್ಪಿತನಾದನು.

- ಇಬ್ರಿಯರಿಗೆ 9:12,26b,28a

ನಿಮ್ಮ ಹಿರಿಯರು ಕಲಿಸಿಕೊಟ್ಟ ವ್ಯರ್ಥವಾದ ನಡವಳಿಕೆಯಿಂದ ನಿಮಗೆ ಬಿಡುಗಡೆಯಾದದ್ದು ಬೆಳ್ಳಿ ಬಂಗಾರ ಮೊದಲಾದ ನಶಿಸಿ ಹೋಗುವ ವಸ್ತು ಗಳಿಂದಲ್ಲ, ಪೂರ್ಣಾಂಗವಾದ ನಿಷ್ಕಳಂಕ ಯಜ್ಞದ ಕುರಿಯ ರಕ್ತದಿಂದಲೋ ಎಂಬಂತೆ ಕ್ರಿಸ್ತನ ಅಮೂಲ್ಯವಾದ ರಕ್ತದಿಂದಲೇ ಎಂದು ಬಲ್ಲಿರಲ್ಲವೇ. -I ಪೇತ್ರ 1:18a,19

ತನ್ನನ್ನು ತಾನೇ ನಿರ್ದೋಷಿಯನ್ನಾಗಿ ದೇವರಿಗೆ ಸಮರ್ಪಿಸಿಕೊಂಡ ಕ್ರಿಸ್ತನ ರಕ್ತವು ಎಷ್ಟೋ ಹೆಚ್ಚಾಗಿ ನಮ್ಮನ್ನು ನಿರ್ಜೀವಕರ್ಮಗಳಿಂದ ಬಿಡಿಸಿ ನಾವು ಜೀವವುಳ್ಳ ದೇವನು ಆರಾಧಿಸುವವರಾಗುವಂತೆ ನಮ್ಮ ಮನಸ್ಸನ್ನು ಶುದ್ಧೀಕರಿಸುವುದಲ್ಲವೇ - ಇಬ್ರಿಯರಿಗೆ 9:14

## ೨೪ ವಾಸ್ತವವಾಗಿ ಯೇಸು ಯಾರಾಗಿದ್ದಾನೆ

ಕ್ರಿಸ್ತಯೇಸು ...... ಆತನು ದೇವಸ್ವರೂಪನಾಗಿದ್ದರೂ ದೇವರಿಗೆ ಸರಿಸಮಾನನಾಗಿರುವುದೆಂಬ ಅಮೂಲ್ಯ ಪದವಿಯನ್ನು ಬಿಡಲೊಲ್ಲೆನು ಎಂದೆಣಿಸದೆ ತನ್ನನ್ನು ಬರಿದು ಮಾಡಿಕೊಂಡು ಆಕಾಶದಲ್ಲಿ ಮನುಷ್ಯನಾಗಿ ಕಾಣಿಸಿಕೊಂಡಿದ್ದಾಗ ತನ್ನನ್ನು ತಗ್ಗಿಸಿಕೊಂಡು ಮರಣವನ್ನು ಅಂದರೆ ಶಿಲುಬೆಯ ಮರಣವನ್ನಾದರೂ ಹೊಂದುವಷ್ಟು ವಿಧೇಯನಾದನು. -ಫಿಲಿಪ್ಪ 2:5b-8

ನಾನು ತಂದೆಯೂ ಒಂದಾಗಿದ್ದೇವೆ ಅಂದನು. ಆತನು ಹೇಳಿರುವಲ್ಲಿ ತಂದೆಯು ಪ್ರತಿಷ್ಠೆ ಮಾಡಿ ಲೋಕಕ್ಕೆ ಕಳುಹಿಸಿ ಕೊಟ್ಟವನಾದ ನಾನು ದೇವರ ಮಗನಾಗಿ ದ್ದೇನೆಂದು ಹೇಳಿದ್ದಕ್ಕೆ ನೀನು ದೇವದೂಷಣೆ ಮಾಡುತ್ತೀ ಅನ್ನುತ್ತೀರೋ?

ಯೋಹಾನ 10:30,36

ನಿತ್ಯವಾಕ್ಯವಾಗಿರುವ ಯೇಸುಕ್ರಿಸ್ತನು ಯಾವಾಗಲೂ ಅಸ್ತಿತ್ವದಲ್ಲಿದ್ದಾನೆ. ಒಂದು ಅದ್ಭುತದಿಂದ ದೇವರು ಆತನನ್ನು ಮರಿಯಳ ಗರ್ಭದಲ್ಲಿರಿಸಿದನು. ಶಾರೀರಿಕವಾಗಿ ಆತನು ನುನುಷ್ಯಕುಮಾರನೆಂದು, ಆತ್ಮೀಯ ರೀತಿಯಲ್ಲಿ ದೇವಕುಮಾರನೆಂದು ತಿಳಿಸಲ್ಪಟ್ಟಿದ್ದಾನೆ. ದೇವರಿಗೂ ಮತ್ತು ಆತನ ವಾಕ್ಯಕ್ಕೂ ನಡುವೆ ಇರುವ ಬಾಂಧವ್ಯವನ್ನು ವಿವರಿಸಲು ಸತ್ಯವೇದದಲ್ಲಿ 'ಮಗನು' ಎಂಬ ಪದವನ್ನು ಬಳಸಲಾಗಿದೆ.

ಆದುದರಿಂದ ಕ್ರಿಸ್ತನು ಭೂಲೋಕದೊಳಗೆ ಬರುವಾಗ ಯಜ್ಞ ನೈವೇದ್ಯಗಳು ನಿನಗೆ ಇಷ್ಟವಾಗಿರಲಿಲ್ಲ. ನನಗೆ ದೇಹವನ್ನು ಸಿದ್ಧಮಾಡಿಕೊಟ್ಟೆ.

-ಇಬ್ರಿಯರಿಗೆ 10:15

ಆತನು ವಂಶಕ್ರಮದಿಂದ ದಾವೀದನ ಸಂತಾನದಲ್ಲಿ ಹುಟ್ಟಿಯಿದವನೂ ಪವಿತ್ರವಾದ ಆತ್ಮವುಳ್ಳವನಾಗಿದ್ದು, ಸತ್ತಮೇಲೆ ಜೀವನನಾಗಿ ಎದ್ದು ಬಂದ ಮಹತ್ಕಾರ್ಯ ದಿಂದ ದೇವಕುಮಾರನೆಂದು ನಿರ್ಣಯಿಲ್ಪಟ್ಟವನೂ ಆಗಿದ್ದಾನೆ.

ರೋಮಾ 1:4

ತೋಮನು ಆತನಿಗೆ - ನನ್ನ ಸ್ವಾಮಿ, ನನ್ನ ದೇವರು ! ಎಂದು ಹೇಳಿದನು

ಯೋಹಾನ 20:28

## ವಾಸ್ತವವಾಗಿ ಯೇಸು ಯಾರಾಗಿದ್ದಾನೆ



ದೇವಭಕ್ತಿಗೆ ಆಧಾರವಾಗಿರುವ ಸತ್ಯಾರ್ಥವು ಗಂಭೀರವಾದದ್ದೆಂಬದಕ್ಕೆ ನಾವೆಲ್ಲರೂ ಒಪ್ಪಿಕೊಳ್ಳುತ್ತೇವೆ; ಅದೇನೆಂದರೆ - ಆತನು ಶರೀರಧಾರಿಯಾಗಿ ಪ್ರತ್ಯಕ್ಷನಾದನು;

-1 ತಿಮೊಥಿ 3:16a

ಕ್ರಿಸ್ತನಲ್ಲಿಯೇ ದೇವರ ಸರ್ವ ಸಂಪೂರ್ಣತೆಯು ಅವತರಿಸಿ ವಾಸಮಾಡುತ್ತದೆ. - ಕೊಲೊಸ್ಸೆ 2:9

ಒಂದು ಮಗು ನಮಗಾಗಿ ಹುಟ್ಟಿದೆಯಷ್ಟೆ, ವರದ ಮಗನು ನಮಗೆ ದೊರೆತನು; ಆಡಳಿತವು ಅವನ ಬಾಹುವಿನ ಮೇಲಿರುವದು; ಅದ್ಭುತ ಸ್ವರೂಪನು, ಆಲೋಚನಾಕರ್ತನು, ಪರಾಕ್ರಮಿಯಾದ ದೇವರು, ನಿತ್ಯನಾದ ತಂದೆ, ಸಮಾಧಾನದ ಪ್ರಭು ಎಂಬವು ಅವನ ಹೆಸರು.

- ಯೆಶಾಯ 9:6

ಅಂದಾಗ ಯೇಸು- ನಿಮಗೆ ನಿಜನಿಜವಾಗಿ ಹೇಳುತ್ತೇನೆ, ಅಬ್ರಹಾಮನು ಹುಟ್ಟುವದಕ್ಕಿಂತ ಮುಂಚಿನಿಂದಲೂ ನಾನು ಇದ್ದೇನೆ ಅಂದನು -ಯೋಹಾನ 8:58

ಆತನಲ್ಲಿ ಜೀವವಿತ್ತು; ಆ ಜೀವವು ಮನುಷ್ಯರಿಗೆ ಬೆಳಕಾಗಿತ್ತು. ನಿಜವಾದ ಬೆಳಕು ಲೋಕಕ್ಕೆ ಬರುವದಾಗಿತ್ತು ; ಆ ಬೆಳಕೇ ಪ್ರತಿ ಮನುಷ್ಯನಿಗೂ ಬೆಳಕನ್ನು ಕೊಡು ವಂಥದು. ಆತನು ಲೋಕದಲ್ಲಿ ಇದ್ದನು : ಮತ್ತು ಲೋಕವು ಆತನ ಮೂಲಕವಾಗಿ ಉಂಟಾಯಿತು; ಆದರೂ ಲೋಕವು ಆತನನ್ನು ಅರಿಯಲಿಲ್ಲ.

ಯೋಹಾನ 1:4,9-10

ಏಕೆಂದರೆ ದೇವರು ಒಬ್ಬನೇ, ದೇವರಿಗೂ ಮನುಷ್ಯರಿಗೂ ಮಧ್ಯಸ್ಥನು ಒಬ್ಬನೇ, ಆತನು ಮನುಷ್ಯನಾಗಿರುವ ಕ್ರಿಸ್ತಯೇಸುವೇ, ಆತನು ಎಲ್ಲರ ವಿಮೋಚನಾರ್ಥವಾಗಿ ತನ್ನನ್ನು ಒಪ್ಪಿಸಿಕೊಟ್ಟನು. ಇದೇ ತಕ್ಕ ಸಮಯಗಳಲ್ಲಿ ಹೇಳಬೇಕಾದ ಸಾಕ್ಷಿಯು.

-1 ತಿಮೋಥಿ 2:5, 6a

ಈ ಕುಮಾರನಲ್ಲಿ ನಮ್ಮ ಪಾಪಗಳು ಪರಿಹಾರವಾಗಿ ನಮಗೆ ಬಿಡುಗಡೆಯಾಯಿತು. ಆತನು ಅದೃಶ್ಯನಾದ ದೇವರ ಪ್ರತಿರೂಪನೂ ಸೃಷ್ಟಿಗೆಲ್ಲಾ ಜ್ಯೇಷ್ಠಪುತ್ರನ ಸ್ಥಾನ ಹೊಂದಿದವನೂ ಆಗಿದ್ದಾನೆ. - ಕೊಲೊಸ್ಸೆ 1:14,15a



## ಬರಹ ಮತ್ತು ಜೀವವಾಕ್ಯಗಳ ಹೋಲಿಕೆ

**ಸತ್ಯವೇದವು ಆತ್ಮಕ್ಕೆ ಆಹಾರವಾಗಿದೆ**

ಆತನ ಬಾಯಿಂದ ಬಂದ ಮಾತುಗಳನ್ನು ಎದೆಯಲ್ಲಿ ನಿಧಿಯನ್ನಾಗಿ ಬಚ್ಚಿಟ್ಟುಕೊಂಡಿದ್ದೇನೆ.

- ಯೋಬನು 23:12b

ಮನುಷ್ಯನು ರೊಟ್ಟಿತಿಂದ ಮಾತ್ರದಿಂದ ಬದುಕುವದಿಲ್ಲ, ದೇವರ ಬಾಯಿಂದ ಹೊರಡುವ ಪ್ರತಿಯೊಂದು ಮಾತಿನಿಂದಲೂ ಬದುಕುವನು ಎಂದು ಬರೆದದೆ ಅಂದನು.

- ಮತ್ತಾಯ 4:4b

**ಸತ್ಯವೇದವು ನಮ್ಮ ದಾರಿಗೆ ಬೆಳಕು ನೀಡುತ್ತದೆ.**

ನಿನ್ನ ವಾಕ್ಯವು ನನ್ನ ಕಾಲಿಗೆ ದೀಪವೂ ನನ್ನ ದಾರಿಗೆ ಬೆಳಕೂ ಆಗಿದೆ.

- ಕೀರ್ತನೆಗಳು 119:105

ನಿನ್ನ ವಾಕ್ಯ ವಿವರಣೆಯಿಂದ ಯುಕ್ತಿಹೀನರಿಗೆ ಜ್ಞಾನೋದಯವಾಗುವದು.

- ಕೀರ್ತನೆಗಳು 119:130

**ಯೇಸು ಪರಲೋಕದಿಂದ ಬಂದ ರೊಟ್ಟಿ**

ಪರಲೋಕದಿಂದ ಇಳಿದು ಬರುವ ಜೀವವುಳ್ಳ ರೊಟ್ಟಿಯು ನಾನೇ, ಈ ರೊಟ್ಟಿಯನ್ನು ಯಾವನಾದರೂ ತಿಂದರೆ ಅವನು ಸದಾಕಾಲ ಬದುಕುವನು ಮತ್ತು ನಾನು ಕೊಡುವ ರೊಟ್ಟಿ ನನ್ನ ಮಾಂಸವೇ, ಅದನ್ನು ಲೋಕದ ಜೀವಕ್ಕೋಸ್ಕರ ಕೊಡುವೆನು ಎಂದು ಹೇಳಿದನು. ಜೀವಕೊಡುವ ರೊಟ್ಟಿ ನಾನೇ.

- ಯೋಹಾನ 6:51,48

ಆತನಲ್ಲಿ ಜೀವವಿತ್ತು ; ಆ ಜೀವವು ಮನುಷ್ಯರಿಗೆ ಬೆಳಕಾಗಿತ್ತು. ಯೇಸು ತಿರಿಗಿ ಅವರ ಸಂಗಡ ಮಾತನಾಡಲಾರಂಭಿಸಿ - ನಾನೇ ಲೋಕಕ್ಕೆ ಬೆಳಕು , ನನ್ನನ್ನು ಅನುಸರಿಸುವವನು ಕತ್ತಲೆಯಲ್ಲಿ ನಡೆಯದೆ ಜೀವ ಕೊಡುವ ಬೆಳಕನ್ನು ಹೊಂದಿದವನಾಗಿರುವನು ಎಂದು ಕೇಳಿದನು.

- ಯೋಹಾನ 1:4,8:12

## ಯೇಸುವಿನ ಮರಣವು ದೇವರ ಯೋಜನೆಯ ನೆರವೇರಿಕೆ



ನಾನು ತಿರಿಗಿ ಪಡಕೊಳ್ಳುತ್ತೇನೆಂದು ನನ್ನ ಪ್ರಾಣವನ್ನು ಕೊಡುತ್ತೇನೆ; ಅದರ ನಿಮಿತ್ತವಾಗಿ ತಂದೆಯು ನನ್ನನ್ನು ಪ್ರೀತಿಸುತ್ತಾನೆ. ನನ್ನ ಪ್ರಾಣವನ್ನು ಯಾರೂ ನನ್ನಿಂದ ತೆಗೆಯರು, ನನ್ನಷ್ಟಕ್ಕೆ ನಾನೇ ಅದನ್ನು ಕೊಡುತ್ತೇನೆ; ಅದನ್ನು ಕೊಡುವುದಕ್ಕೆ ನನಗೆ ಅಧಿಕಾರ ಉಂಟು, ಅದನ್ನು ತಿರಿಗಿ ಪಡಕೊಳ್ಳುವುದಕ್ಕೆ ನನಗೆ ಅಧಿಕಾರ ಉಂಟು

- ಯೋಹಾನ 10:17,18a

ಅದಕ್ಕೆ ಯೇಸು - ಮೇಲಣಿಂದ ನಿನಗೆ ಕೊಡಲ್ಪಡದಿದ್ದರೆ ನನ್ನ ಮೇಲೆ ನಿನಗೆ ಯಾವ ಅಧಿಕಾರವೂ ಇರುತ್ತಿರಲಿಲ್ಲ.

- ಯೋಹಾನ 19:11a

ನಾನು ನನ್ನ ತಂದೆಯನ್ನು ಬೇಡಿಕೊಳ್ಳಲಾರೆನೆಂದೂ ಬೇಡಿಕೊಂಡರೆ ಆತನು ನನಗೆ ಈಗಲೇ ಹನ್ನೆರಡು ಗಣಗಳಿಗಿಂತ ಹೆಚ್ಚು ಮಂದಿ ದೇವದೂತರನ್ನು ಕಳುಹಿಸಿ ಕೊಡುವುದಿಲ್ಲವೆಂದೂ ನೆನಸುತ್ತೀಯಾ? ಕಳುಹಿಸಿ ಕೊಟ್ಟರೆ ನನಗೆ ಇಂಥಿಂಥದು ಆಗಬೇಕೆಂಬುವ ಶಾಸ್ತ್ರದ ಮಾತುಗಳು ನೆರವೇರುವದು ಎಂದು ಹೇಳಿದನು - ಮತ್ತಾಯ 26:53,54

ಆದರೆ ದೇವರು ತಾನು ನೇಮಿಸಿದ ಕ್ರಿಸ್ತನು ಬಾಧೆಯನ್ನನುಭವಿಸಿ ಸಾಯಬೇಕೆಂಬುದಾಗಿ ಎಲ್ಲಾ ಪ್ರವಾದಿಗಳ ಬಾಯಿಂದ ಮುಂಚಿತವಾಗಿ ಹೇಳಿಸಿದ ಮಾತನ್ನು ಹೀಗೆ ನೆರವೇರಿಸಿದನು.

- ಅಪೊಸ್ತಲರ ಕೃತ್ಯಗಳು 3:18

ಆ ಯೇಸು ದೇವರ ಸ್ಥಿರಸಂಕಲ್ಪಕ್ಕೂ ಭವಿಷ್ಯದ್ ಜ್ಞಾನಕ್ಕೂ ಅನುಸಾರವಾಗಿ ಒಪ್ಪಿಸಲ್ಪಟ್ಟಿರಲು ನೀವು ಅನ್ಯಜನರ ಕೈಯಿಂದ ಆತನನ್ನು ಶಿಲುಬೆಗೆ ಹಾಕಿಸಿ ಕೊಂದಿರಿ.

- ಅಪೊಸ್ತಲರ ಕೃತ್ಯಗಳು 2:23

ಅವನನ್ನು ಜಜ್ಜುವದು ಯಹೋವನ ಸಂಕಲ್ಪವಾಗಿತ್ತು.

- ಯೆಶಾಯ 53:10a

''ಕ್ರಿಸ್ತನು ಇಂಥ ಕ್ರಮಗಳನ್ನು ಅನುಭವಿಸಿ ತನ್ನ ಮಹಾಪದವಿಗೆ ಸೇರುವದು ಅಗತ್ಯವಾಗಿತ್ತಲ್ಲವೇ?''

- ಲೂಕನು 24:26



## ಸತ್ಯ ವೇದವು (ಶಾಸ್ತ್ರವು) ದೇವರ ವಾಕ್ಯವಾಗಿದೆ

ಯಾಕೆಂದರೆ ಯಾವ ಪ್ರವಾದನೆಯೂ ಎಂದೂ ಮನುಷ್ಯರ ಚಿತ್ತದಿಂದ ಉಂಟಾಗಲಿಲ್ಲ, ಮನುಷ್ಯರು ಪವಿತ್ರಾತ್ಮ ಪ್ರೇರಿತರಾಗಿ ದೇವರಿದಂದ ಹೊಂದಿದ್ದನ್ನೇ ಮಾತಾಡಿದರು

-2 ಪೇತ್ರ 1:21

ಆತನು ಪೂರ್ವದಲ್ಲಿದ್ದ ತನ್ನ ಶ್ರೀಪ್ರವಾದಿಗಳ ಬಾಯಿಂದ ತಾನು ಹೇಳಿದಂತೆಯೇ,.................. ನಮ್ಮ ದೇವರು ಅತ್ಯಂತ ಕರುಣೆಯಿಂದ ದಯಪಾಲಿಸುವ ಪಾಪ ಪರಿಹಾರವೆಂಬ ರಕ್ಷಣೆಯ ತಿಳುವಳಿಕೆಯನ್ನು ಆತನ ಪೂಜೆಗೆ ಕೊಡುವವನಾಗಿಯೂ ಇರುವಿ.

- ಲೂಕನು 1:70,77

ಯೆಹೋವನ ಆತ್ಮವು ನನ್ನಲ್ಲಿ ಉಸುರಿತು; ಆತನ ವಾಕ್ಯವು ನನ್ನ ಬಾಯಲ್ಲಿತ್ತು.

- II ಸಮುವೇಲನು 23:2

ನಾನು ಈಗ ನಿಮಗೆ ತಿಳಿಸುವ ಮಾತುಗಳು ನಿಮ್ಮ ಹೃದಯದಲ್ಲಿರಬೇಕು. - ಧರ್ಮೋಪದೇಶಕಾಂಡ 6:6

ದೈವಪ್ರೇರಿತವಾದ ಪ್ರತಿಯೊಂದು ಶಾಸ್ತ್ರವು ಉಪದೇಶಕ್ಕೂ ಖಂಡನೆಗೂ ತಿದ್ದುಪಾಡಿಗೂ ನೀತಿಶಿಕ್ಷೆಗೂ ಉಪಯುಕ್ತವಾಗಿದೆ. - II ತಿಮೋಥಿ 3:16

ಪೂರ್ವದಲ್ಲಿ ಬರೆದದ್ದೆಲ್ಲಾ ನಮ್ಮನ್ನು ಉಪದೇಶಿಸುವದಕ್ಕಾಗಿ ಬರೆಯಲ್ಪಟ್ಟಿತು. ನಾವು ಓದಿ ಸ್ಥಿರಚಿತ್ತವನ್ನೂ ಆದರಣೆಯನ್ನೂ ಹೊಂದಿ ರಕ್ಷಣೆಯ ನಿರೀಕ್ಷೆಯುಳ್ಳವರಾಗಿರುವಂತೆ ಆ ಗ್ರಂಥಗಳು ಬರೆಯಲ್ಪಟ್ಟವು.

- ರೋಮಾ 15:4

ನೀವು ಶಾಸ್ತ್ರವನ್ನಾದರೂ ದೇವರ ಶಕ್ತಿಯನ್ನಾದರೂ ತಿಳಿಯದೆ ತಪ್ಪುವವರಾಗಿದ್ದೀರಿ;

ಮತ್ತಾಯ 22:29b

ವಾಗ್ದಾನವನ್ನು ವಿಶೇಷ ರೀತಿಯಿಂದ ನೆರವೇರಿಸಿ ನಿನ್ನ ನಾಮ ಮಹತ್ತನ್ನು ಹೆಚ್ಚಿಸಿದ್ದೀ.

- ಕೀರ್ತನೆಗಳು 138:2b

## ಯೇಸು ಲೋಕಕ್ಕೆ ಬೆಳಕಾಗಿದ್ದಾನೆ



ಯೆಹೋವನ ಧರ್ಮಶಾಸ್ತ್ರದಲ್ಲಿ ಆನಂದ ಪಡುವವನಾಗಿ ಅದನ್ನೇ ಹಗಲಿರುಳು ಧ್ಯಾನಿಸುತ್ತಿರುವನೋ ಅವನು ಎಷ್ಟೋ ಧನ್ಯನು. ಅವನು ನೀರಿನ ಕಾಲಿವೆ ಗಳ ಬಳಿಯಲ್ಲಿ ಬೆಳೆದಿರುವ ಮರದ ಹಾಗಿರುವನು. ಅಂಥ ಮರವು ತಕ್ಕ ಕಾಲದಲ್ಲಿ ಫಲ ಕೊಡುತ್ತದಲ್ಲ; ಅದರ ಎಲೆ ಬಾಡುವುದೇ ಇಲ್ಲ. ಅದರಂತೆ ಅವನ ಕಾರ್ಯವೆಲ್ಲವೂ ಸಫಲವಾಗುವದು.

- ಕೀರ್ತನೆಗಳು 1:2,3

ನೀವು ನನ್ನಲ್ಲಿ ನೆಲೆಗೊಂಡಿರಿ, ನಾನು ನಿಮ್ಮಲ್ಲಿ ನೆಲೆಗೊಂಡಿರುವೆನು. ಕೊಂಬೆಯು ಬಳ್ಳಿಯಲ್ಲಿ ನೆಲೆಗೊಂಡಿರದಿದ್ದರೆ, ಹೇಗೆ ತನ್ನಷ್ಟಕ್ಕೆ ತಾನೇ ಫಲ ಕೊಡಲಾರದೋ, ಹಾಗೆಯೇ ನೀವು ನನ್ನಲ್ಲಿ ನೆಲೆಗೊಂಡಿರದಿದ್ದರೆ, ಫಲ ಕೊಡಲಾರಿರಿ. ನಾನು ದ್ರಾಕ್ಷೇ ಬಳ್ಳಿ, ನೀವು ಕೊಂಬೆಗಳು; ನಾನು ಅವನಲ್ಲಿಯೂ ನೆಲೆಗೊಂಡಿದ್ದರೆ ಅವನೇ ಬಹಳ ಫಲ ಕೊಡುವನು ; ನೀವು ನನ್ನನ್ನು ಬಿಟ್ಟು ಏನೂ ಮಾಡಲಾರಿರಿ. - ಯೋಹಾನ 15:4,5

## ಸತ್ಯವೇದವು ಯೇಸು ಕ್ರಿಸ್ತನ ಬಗ್ಗೆ ಹೇಳುತ್ತದೆ.

ಶಾಸ್ತ್ರಗಳಿಂದ ನಿತ್ಯಜೀವವು ದೊರೆಯುತ್ತದೆಂದು ನೀವು ನೆಸಿ ಅವುಗಳನ್ನು ವಿಚಾರಿಸುತ್ತೀರಲ್ಲಾ; ಅವುಗಳು ನನ್ನ ವಿಷಯದಲ್ಲಿ ಸಾಕ್ಷಿ ಕೊಡುವವುಗಳಾಗಿದೆ. ಅವನು ನನ್ನ ವಿಷಯವಾಗಿ ಬರೆದನು; ಆದುದರಿಂದ ನೀವು ಮೋಶೆಯ ಮಾತನ್ನು ನಂಬುವವರಾಗಿದ್ದರೆ ನನ್ನ ಮಾತನ್ನೂ ನಂಬುತ್ತಿದ್ದಿರಿ

- ಯೋಹಾನ 5:39,46

ಮೋಶೆಯ ಮತ್ತು ಎಲ್ಲಾ ಪ್ರವಾದಿಗಳ ಗ್ರಂಥಗಳು ಮೊದಲುಗೊಂಡು ಸಮಸ್ತ ಗ್ರಂಥಗಳಲ್ಲಿ ತನ್ನ ವಿಷಯವಾಗಿರುವ ಸೂಚನೆಗಳನ್ನು ಅವರಿಗೆ ವಿವರಿಸಿದನು.

ಲೂಕ 24:27



## ಯೇಸುವಿನ ಮರಣವು ಸಾಕ್ಷಿಗಳಿಂದ ವರದಿಯಾಗಿದೆ

ಅದಲ್ಲದೆ ಇಬ್ಬರು ಕಳ್ಳರನ್ನು ತಂದು ಒಬ್ಬನನ್ನು ಆತನ ಬಲಗಡೆಯಲ್ಲಿ ಒಬ್ಬನನ್ನು ಎಡಗಡೆಯಲ್ಲಿ ಆತನ ಸಂಗಡ ಶಿಲುಬೆಗೆ ಹಾಕಿದರು

- ಮಾರ್ಕ 15:27,28

ಆದದರಿಂದ ಸಿಪಾಯಿಗಳು ಬಂದು ಮೊದಲನೆಯವನ ಕಾಲುಗಳನ್ನು ಅವನ ಜೊತೆಯಲ್ಲಿ ಶಿಲುಬೆಗೆ ಹಾಕಿಸಿಕೊಂಡಿದ್ದ ಮತ್ತೊಬ್ಬನ ಕಾಲುಗಗಳನ್ನು ಮುರಿದರು. ಆದರೆ ಯೇಸುವಿನ ಬಳಿಗೆ ಬಂದಾಗ ಆತನು ಆಗಲೇ ಸತ್ತಿರುವುದನ್ನು ಅವರು ಕಂಡು ಆತನ ಕಾಲು ಗಳನ್ನು ಮುರಿಯಲಿಲ್ಲ. ಆದರೂ ಸಿಪಾಯಿಗಳಲ್ಲಿ ಒಬ್ಬನು ಈಟಿಯಿಂದ ಆತನ ಪಕ್ಕೆಯನ್ನು ತಿವಿದನು; ತಿವಿದ ಕೂಡಲೇ ರಕ್ತವೂ ನೀರೂ ಹೊರಟಿತು. ಅದನ್ನು ಕಂಡವನೇ ಸಾಕ್ಷಿ ಹೇಳಿದ್ದಾನೆ. ಅವನ ಸಾಕ್ಷಿ ಸತ್ಯವೇ: ತಾನು ಹೇಳುವುದು ಸತ್ಯವೆಂದು ಅವನು ಬಲ್ಲನು: ನೀವು ಸಹ ನಂಬಬೇಕೆಂದು ಇದನ್ನು ಹೇಳಿದ್ದಾನೆ. ಯಾಕೆಂದರೆ - ಆತನ ಒಂದು ಎಲುಬನ್ನಾದರೂ ಮುರಿಯಕೂಡದು ಎಂದು ಶಾಸ್ತ್ರದಲ್ಲಿ ಬರೆದ ಮಾತು ನೆರವೇರುವಂತೆ ಇದಾಯಿತು: ಮತ್ತು - ಅವರು ತಾವು ಇರಿದವರನ್ನು ದಿಟ್ಟಿಸಿ ನೋಡುವರು ಎಂದು ಶಾಸ್ತ್ರದಲ್ಲಿ ಮತ್ತೊಂದು ಮಾತು ಹೇಳಿ ಅದೆ.

- ಯೋಹಾನ 19:32-37

ಮಧ್ಯಾಹ್ನ ಹನ್ನೆರಡು ಘಂಟೆಯಿಂದ ಮೂರು ಘಂಟೆಯವರೆಗೆ ಆ ದೇಶದ ಮೇಲೆಲ್ಲಾ ಕತ್ತಲೆ ಕವಿಯಿತು. ಯೇಸು ತಿರುಗಿ ಮಹಾ ಧ್ವನಿಯಿಂದ ಕೂಗಿ ಪ್ರಾಣ ಬಿಟ್ಟನು. ಆಗ ಇಗೋ ದೇವಾಲಯದ ತೆರೆಯು ಮೇಲಿಂದ ಕೆಳಗಿನವರೆಗೂ ಹರಿದು ಎರಡು ಭಾಗವಾಯಿತು.:

ಶತಾಧಿಪತಿಯು ಮತ್ತು ಅವನ ಸಂಗಡ ಯೇಸುವನ್ನೂ ಕಾಯುತ್ತಿದ್ದವರು ಭೂಕಂಪವನ್ನು ನಡೆದ ಸಂಗತಿಯನ್ನು ನೋಡಿ ಬಹಳ ಹೆದರಿಕೊಂಡು ನಿಜವಾಗಿ ಈತನು ದೇವಕುಮಾರನಾಗಿದ್ದನು ಅಂದರು.

ಮತ್ತಾಯ 27:45,50-51,54

## ಯೇಸು ದೇವರ ವಾಕ್ಯವಾಗಿದ್ದಾನೆ.



ಆತನು ರಕ್ತಪ್ರೋಕ್ಷಿತವಾದ ವಸ್ತ್ರವನ್ನು ಧಸಿರಿಕೊಂಡಿದ್ದನು.

- ಪ್ರಕಟಣೆ 19:13

ಆದಿಯಲ್ಲಿ ವಾಕ್ಯವಿತ್ತು; ಆ ವಾಕ್ಯವು ದೇವರ ಬಳಿಯಲ್ಲಿತ್ತು. ಆ ವಾಕ್ಯವು ದೇವರಾಗಿತ್ತು. ಆ ವಾಕ್ಯವೆಂಬವನು ನರಾವತಾರ ಎತ್ತಿ ನಮ್ಮ ಮಧ್ಯದಲ್ಲಿ ವಾಸ 'ಮಾಡಿದನು.

- ಯೋಹಾನ 1:1,14a

**ಯೇಸು ದೇವರನ್ನು ಪ್ರಕಟ ಪಡಿಸುತ್ತಾನೆ.**

ದೇವರನ್ನು ಯಾರೂ ಎಂದೂ ಕಂಡಿಲ್ಲ; ಯಾವನು ಏಕಪುತ್ರನೂ, ಸ್ವತಃ ದೇವರೂ ಆಗಿದ್ದು ತಂದೆಯ ಎದೆಯಲ್ಲಿದ್ದಾನೋ ಆತನೇ ತಿಳಿಯಪಡಿಸಿದನು.

- ಯೋಹಾನ 1:18

ಯಾಕೆಂದರೆ ಕತ್ತಲೆಯೊಳಗಿಂದ ಬೆಳಕು ಹೊಳೆಯಲಿ ಎಂದು ಹೇಳಿದ ದೇವರು ತಾನೇ ಯೇಸು ಕ್ರಿಸ್ತನ ಮುಖದಲ್ಲಿ ತೋರುವ ದೇವ ಪ್ರಭಾವ ಜ್ಞಾನವೆಂಬ ಪ್ರಕಾಶವು ಅನೇಕರಿಗೆ ಉಂಟಾಗುವದಕ್ಕಾಗಿ ನಮ್ಮ ಹೃದಯಗಳಲ್ಲಿ ಹೊಳೆದನು.

-II ಕೊರಿಂಥಿ 4:6

**ದೇವರು ಯೇಸುವಿನ ಮೂಲಕ ಮಾತನಾಡುತ್ತಾನೆ.**

ಪುರಾತನ ಕಾಲದಲ್ಲಿ ನಮ್ಮ ಪಿತೃಗಳ ಸಂಗಡ ಪ್ರವಾದಿಗಳ ಬಾಯಿಂದ ಭಾಗ ಭಾಗವಾಗಿಯೂ ವಿಧವಿಧವಾಗಿಯೂ ಮಾತಾಡಿದ ದೇವರು ಈ ಅಂತ್ಯ ದಿನಗಳಲ್ಲಿ ನಮ್ಮ ಸಂಗಡ ಮಗನ ಮುಖಾಂತರ ಮಾತಾಡಿದ್ದಾನೆ. ಈತನನ್ನು ಎಲ್ಲಕ್ಕೂ ಬಾಧ್ಯನನ್ನಾಗಿ ನೇಮಿಸಿದನು. ಈತನ ಮೂಲಕವೇ ಜಗತ್ತನ್ನು ಉಂಟು ಮಾಡಿದನು.

- ಇಬ್ರಿಯರಿಗೆ 1:1,2

ನನ್ನನ್ನು ಪ್ರೀತಿಸದೆ ಇರುವವನು ನನ್ನ ಮಾತುಗಳನ್ನು ಕೈಕೊಂಡು ನಡೆಯುವುದಿಲ್ಲ; ನೀವು ಆಲಿಸುವ ಮಾತು ನನ್ನದಲ್ಲ, ನನ್ನನ್ನು ಕಳುಹಿಸಿದ ತಂದೆಯ ಮಾತೇ

- ಯೋಹಾನ 14:24



## ದೇವರ ನಿತ್ಯವಾಕ್ಯವು ಎಂದೂ ಬದಲಾಗದು

ಯೆಹೋವನೇ, ನಿನ್ನ ವಾಕ್ಯವು ಪರಲೋಕದಲ್ಲಿ ಶಾಶ್ವತವಾಗಿ ಸ್ಥಾಪಿಸಲ್ಪಟ್ಟಿದೆ. - ಕೀರ್ತನೆಗಳು 119:89

ನಿನ್ನ ವಾಕ್ಯದ ಸಾರಾಂಶವು ಸತ್ಯವೇ; ನಿನ್ನ ನೀತಿ ವಿಧಿಗಳೆಲ್ಲ ಯುಗಯುಗಕ್ಕೂ ಇರುವವು. - ಕೀರ್ತನೆಗಳು 119:160

ಹುಲ್ಲು ಒಣಗಿಹೋಗುವದು, ಹೂವು ಬಾಡಿಹೋಗುವದು, ನಮ್ಮ ದೇವರ ಮಾತೋ ಸದಾಕಾಲವು ಇರುವದು ಎಂದು ಉತ್ತರವಾಯಿತು. - ಯೆಶಾಯ 40:8

ಆಕಾಶವು ಭೂಮಿಯೂ ಅಳಿದುಹೋಗುವ ತನಕ ಧಮಶಾಸ್ತ್ರವೆಲ್ಲ ನೆರವೇರಿದ ಹೊರತು ಅದರೊಳಗಿಂದ ಒಂದು ಸೊನ್ನೆಯಾದರೂ ಒಂದು ಗುಡುಸಾದರೂ ಅಳಿದಹೋಗಲಾರದು. - ಮತ್ತಾಯ 5:18b

ಶಾಸ್ತ್ರವು ಸುಳ್ಳಾಗಲಾರದಷ್ಟೆ - ಯೋಹಾನ 10:35b

ಸತ್ಯವೇದವನ್ನು ಬದಲಾಯಿಸಲು ಮಾನವನು ಧೈರ್ಯ ಮಾಡನು

ನಾನು ನಿಮಗೆ ಆಜ್ಞಾಪಿಸುವುದನ್ನೆಲ್ಲಾ ನೀವು ಅನುಸರಿಸಲೇಬೇಕು; ಅದಕ್ಕೆ ಏನೂ ಕೊಡಿಸಬಾರದು. ಅದರಿಂದ ಏನೂ ತೆಗೆದುಬಿಡಬಾರದು. -ಧರ್ಮೋಪ 12:32

ಆತನ ಮಾತುಗಳಿಗೆ ಯಾವದನ್ನೂ ಸೇರಿಸಬೇಡ; ಆತನು ನಿನ್ನನ್ನು ಖಂಡಿಸುವಾಗ ನೀನು ಸುಳ್ಳುಗಾರನೆಂದು ತೋರಿಬಂದೀಯೆ. - ಜ್ಞಾನೋಕ್ತಿಗಳು 30:6

ಯಾವನಾದರೂ ಈ ಪ್ರವಾದನಾ ಪುಸ್ತಕದಲ್ಲಿರುವ ಮಾತುಗಳಲ್ಲಿ ಒಂದನ್ನಾದರೂ ತೆಗೆದು ಬಿಟ್ಟರೆ ಆ ಪುಸ್ತಕದಲ್ಲಿ ಬರೆದಿರುವ ಅವನಿಗಿರುವ ಪಾಲನ್ನು ದೇವರು ತೆಗೆದುಬಿಡುವನು.

ಪ್ರಕಟಣೆ 22:19a

ದೇವರ ವಾಕ್ಯವನ್ನು ಉಲ್ಲಂಘಿಸುವವನು ನಾಶನಾಗುವನು: - ಜ್ಞಾನೋಕ್ತಿಗಳು ೧13:13a

## ಯೇಸು ಮರಣವನ್ನು ಜಯಿಸಿದನು



ಆತನನ್ನು ದೇವರು ಮರಣ ವೇದನೆಗಳಿಂದ ಬಿಡಿಸಿ ಎಬ್ಬಿಸಿದನು ; ಯಾಕೆಂದರೆ ಮರಣವು ಆತನನ್ನು ಹಿಡಕೊಂಡಿರುವುದು ಅಸಾಧ್ಯವಾಗಿತ್ತು.

ಈ ಯೇಸುವನ್ನೇ ದೇವರು ಎಬ್ಬಿಸಿದನು; ಇದಕ್ಕೆ ನಾವೆಲ್ಲರು ಸಾಕ್ಷಿಗಳಾಗಿದ್ದೇವೆ.

- ಅಪೊಸ್ತಲರ ಕೃತ್ಯಗಳು 2:24,32

ಇದಲ್ಲದೆ ಮಕ್ಕಳು ರಕ್ತಮಾಂಸಧಾರಿಗಳಾಗಿರು ವುದರಿಂದ ಆತನೂ ಅವರಂತೆಯೇ ಆದನು. ತನ್ನ ಮರಣದಿಂದಲೇ ಮರಣಾಧಿಕಾರಿಯನ್ನು ಮರಣ ಭಯದ ದೆಸೆಯಿಂದ ತಮ್ಮ ಜೀವಮಾನದಲ್ಲೆಲ್ಲಾ ದಾಸತ್ವದೊಳಗಿದ್ದವರನ್ನು ಬಿಡಿಸುವದಕ್ಕೂ ಅವರಂತೆ ರಕ್ತ ಮಾಂಸ ಧಾರಿಯಾದನು.

- ಇಬ್ರಿಯರಿಗೆ 2:14,15

ಮರಣವೇ, ನಿನ್ನ ಜಯವೆಲ್ಲಿ? ಮರಣವೇ, ನಿನ್ನ ವಿಷದ ಕೊಂಡಿ ಎಲ್ಲಿ?

ಆದರೆ ದೇವರು ನಮ್ಮ ಕರ್ತನಾದ ಯೇಸುಕ್ರಿಸ್ತನ ಮೂಲಕ ನಮಗೆ ಜಯವನನಲು ಕೊಟ್ಟಿದ್ದಾನೆ; ಆತನಿಗೆ ಸ್ತೋತ್ರ. -೧ ಕೊರಿಂಥದವರಿಗೆ 15:55.57

ಸತ್ತವನಾದೆನು, ಮತ್ತು ಇಗೋ ಯುಗಯುಗಾಂತರಗಳಲ್ಲಿಯೂ ಬದುಕುವವನಾಗಿದ್ದೇನೆ; ಮರಣದ ಮತ್ತು ಪಾತಾಳದ ಬೀಗದ ಕೈಗಳು ನನ್ನಲ್ಲಿ ಅವೆ.

- ಪ್ರಕಟಣೆ 1:18

ಆದದರಿಂದ ನೀನು ನಮ್ಮ ಕರ್ತನನ್ನನು ಕುರಿತು ಹೇಳುವ ಸಾಕ್ಷಿಯ ವಿಷಯದಲ್ಲಾಗಲೀ ಆತನ ಸೆರೆಯವನಾದ ನನ್ನ ವಿಷಯದಲ್ಲಾಗಲೀ ನಾಚಿಕೆ ಪಡದೆ ದೇವರ ಬಲವನ್ನು ಆಶ್ರಯಿಸಿ ನನ್ನೊಂದಿಗೆ ಸುವಾರ್ತೆ ಗೋಸ್ಕರ ಶ್ರಮೆಯನ್ನನುಭವಿಸು. ಆತನು ಅನಾದಿ ಕಾಲದಲ್ಲಿ ಆ ಕೃಪೆಯನ್ನು ಕ್ರಿಸ್ತಯೇಸುವಿನಲ್ಲಿ ನಮಗೆ ಅನುಗ್ರಹಿಸಿ ಈಗ ನಮ್ಮ ರಕ್ಷಕನಾದ ಕ್ರಿಸ್ತಯೇಸುವಿನ ಪ್ರತ್ಯಕ್ಷತೆಯ ಮೂಲಕ ಅದನ್ನು ಪ್ರಕಾಶ ಪಡಿಸಿದ್ದಾನೆ. ಈತನು ಮರಣವನ್ನು ನಿವೃತ್ತಿ ಮಾಡಿ ಸುವಾರ್ತೆಯ ಮೂಲಕ ಜೀವವನ್ನೂ ನಿರ್ಲಯತ್ವವನ್ನೂ ಪ್ರಕಾಶಗೊಳಿಸಿದನು.

2 - ತಿಮೊಥೆಯನಿಗೆ 1:18b,10

ಮರಣವು ಇನ್ನೂ ಆತನನ್ನು ಆಳುವುದಿಲ್ಲವೆಂದು ನಮಗೆ ತಿಳಿದದೆ. - ರೋಮಾಪುರದವರಿಗೆ 6:9b

## ೩೪ ಯೇಸುವಿನೊಡನೆ ನಾವು ಏನು ಮಾಡಬೇಕು?

ಇಗೋ, ಬಾಗಿಲಲ್ಲಿ ನಿಂತುಕೊಂಡು ತಟ್ಟುತ್ತಾ ಇದ್ದೇನೆ. ಯಾವನಾದರೂ ನನ್ನ ಶಬ್ದವನ್ನು ಕೇಳಿ ಬಾಗಿಲನ್ನು ತೆರೆದರೆ ನಾನು ಒಳಗೆ ಬಂದು ಅವನ ಸಂಗಡ ಊಟ ಮಾಡುವೆನು, ಅವನು ನನ್ನ ಸಂಗಡ ಊಟ ಮಾಡುವನು.

- ಪ್ರಕಟಣೆ 3:20

ಆದರೆ ಯಾವನು ಪುಣ್ಯಕ್ರಿಯೆಗಳನ್ನು ಮಾಡಿದವನಾಗಿರದೆ, ಪಾಪಾತ್ಮರನ್ನು ನೀತಿವಂತರೆಂದು ನಿರ್ಣಯಿಸುವಾತನಲ್ಲಿ ನಂಬಿಕೆಯಿಡುತ್ತಾನೋ ಅವನ ನಂಬಿಕೆಯೇ ನೀತಿ ಎಂದು ಎಣಿಸಲ್ಪಡುವದು. - ರೋಮಾಪುರದವರಿಗೆ 4:5

ಇದನ್ನು ಹೇಳಿ ಅವರ ಮೇಲೆ ಊದಿ ಅವರಿಗೆ ಬೇಡಿಕೊಳ್ಳಿರಿ. ನಿಮಗೆ ಸಿಕ್ಕುವದು; ಆಗ ನಿಮ್ಮ ಆನಂದವು ಪರಿಪೂರ್ಣವಾಗುವದು. - ಯೋಹಾನ 20:22:16:24b

ಅದೇನೆಂದರೆ ನೀನು ಯೇಸುವನ್ನು ಕರ್ತನೆಂದು ಬಾಯಿಂದ ಅರಿಕೆ ಮಾಡಿಕೊಂಡು ದೇವರು ಆತನನ್ನು ಸತ್ತವರೊಳಗಿಂದ ಎಬ್ಬಿಸಿದನೆಂದು ಹೃದಯದಿಂದ ನಂಬಿದರೆ ನಿನಗೆ ರಕ್ಷಣೆಯಾಗುವದು ಎಂಬದೇ.

- ರೋಮಾಪುರದವರಿಗೆ 10:9

ತಂದೆಯ ಮೇಲಾಗಲಿ ತಾಯಿಯ ಮೇಲಾಗಲಿ ನನ್ನ ಮೇಲೆ ಇಡುವದಕ್ಕಿಂತ ಹೆಚ್ಚಾದ ಮಮತೆಯನ್ನಿ ಡುವವನು ನನಗೆ ಯೋಗ್ಯನಲ್ಲ:

ಮತ್ತು ಯೇಸು ತನ್ನ ಶಿಷ್ಯರಿಗೆ ಹೇಳಿದ್ದೇನೆಂದರೆ - ಯಾವನಿಗಾದರೂ ನನ್ನ ಹಿಂದೆ ಬರುವದಕ್ಕೆ ಮನಸ್ಸಿದ್ದರೆ ಅವನು ತನ್ನನ್ನು ನಿರಾಕರಿಸಿ ತನ್ನ ಶಿಲುಬೆಯನ್ನು ಹೊತ್ತುಕೊಂಡು ನನ್ನ ಹಿಂದೆ ಬರಲಿ.

ತನ್ನ ಪ್ರಾಣವನ್ನು ಉಳಿಸಿಕೊಳ್ಳಬೇಕೆಂದಿರುವವನು ಅದನ್ನು ಕಳಕೊಳ್ಳುವನು; ಆದರೆ ನನ್ನ ನಿಮಿತ್ತವಾಗ ತನ್ನ ಪ್ರಾಣವನ್ನು ಕಳಕೊಂಡವನು ಅದನ್ನು ಕಂಡು ಕೊಳ್ಳುವನು.

- ಮತ್ತಾಯ 10:37a 16:24,25

ನೀವು ಕ್ರಿಸ್ತನವರಾಗಿದ್ದರೆ ಅಬ್ರಹಾಮನ ಸಂತಿತಿ ಯವರೂ ವಾಗ್ದಾನಕ್ಕನುಸಾರವಾಗಿ ಬಾಧ್ಯರೂ ಆಗಿದ್ದೀರಿ

- ಗಲಾತ್ಯದವರಿಗೆ 3:29

ಕರ್ತನಾದ ಯೇಸುವಿನ ಮೇಲೆ ನಂಬಿಕೆಯಿಡು, ಆಗ ನೀನು ರಕ್ಷಣೆ ಹೊಂದುವಿ, ನಿನ್ನ ಮನೆಯವರೂ ರಕ್ಷಣೆ ಹೊಂದುವರು. - ಅಪೊಸ್ತಲರ ಕೃತ್ಯಗಳು16:31

## ಯೇಸುವಿನ ಮೂಲಕ ದೇವರು ತಂದೆಯೆಂದು ನಮಗೆ ತಿಳಿಯುವುದು ೩೭

ಯೇಸು ಅವನಿಗೆ - ನಾನೇ ಮಾರ್ಗವೂ ಸತ್ಯವೂ ಜೀವವೂ ಆಗಿದ್ದೇನೆ; ನನ್ನ ಮೂಲಕವಾಗಿ ಹೊರತು ಯಾರೂ ತಂದೆಯ ಬಳಿಗೆ ಬರುವುದಿಲ್ಲ. ನೀವು ನನ್ನನ್ನು ಅರಿತಿದ್ದರೆ ನನ್ನ ತಂದೆಯನ್ನೂ ಅರಿಯುತ್ತಿದ್ದಿರಿ; ಈಗಿನಿಂದ ಆತನನ್ನು ಅರಿತುಕೊಂಡಿದ್ದೀರಿ; ಆತನನ್ನು ನೋಡಿದ್ದೀರಲ್ಲಾ ಎಂದು ಹೇಳಿದನು.

ಅವನನ್ನು ನನ್ನ ತಂದೆಯೂ ಪ್ರೀತಿಸುವನು. ಮತ್ತು ನಾವಿಬ್ಬರೂ ಅವನ ಬಳಿಗೆ ಬಂದು ಅವನ ಬಳಿಯಲ್ಲಿ ಬಿಡಾರವನ್ನು ಮಾಡಿಕೊಳ್ಳುವೆವು.

- ಯೋಹಾನ 14:6,7,23b

ಧರ್ಮಶಾಸ್ತ್ರಾಧೀನರಾದವರನ್ನು ವಿಮೋಚಿಸಬೇಕೆಂತಲೂ ಪುತ್ರರ ಪದವಿಯನ್ನು ನಮಗೆ ದೊರಕಿಸಬೇಕೆಂತಲೂ ಆತನು ಸ್ತ್ರೀಯಲ್ಲಿ ಹುಟ್ಟಿದವನಾಗಿಯೂ ಧರ್ಮಶಾಸ್ತ್ರಾಧೀನನಾಗಿಯೂ ಬಂದನು. ನೀವು ಪುತ್ರರಾಗಿರುವುದರಿಂದ ದೇವರು ಅಪ್ಪಾ ತಂದೆಯೇ ಎಂದು ಕೂಗುವ ತನ್ನ ಮಗನ ಆತ್ಮವನ್ನು ನಮ್ಮ ಹೃದಯಗಳಲ್ಲಿ ಕಳುಹಿಸಿಕೊಟ್ಟನು.

ಹೀಗಿರುವಲ್ಲಿ ಇನ್ನು ನೀನು ದಾಸನಲ್ಲ, ಮಗನಾಗಿದ್ದೀ. ಮಗನೆಂದ ಮೇಲೆ ದೇವರ ಮೂಲಕ ಬಾಧ್ಯನೂ ಆಗಿದ್ದೀ.

ನೀವೆಲ್ಲರೂ ಕ್ರಿಸ್ತಯೇಸುವಿನಲ್ಲಿಟ್ಟಿರುವ ನಂಬಿಕೆಯ ಮೂಲಕ ದೇವರ ಪುತ್ರರಾಗಿದ್ದೀರಿ.

-ಗಲಾತ್ಯದವರಿಗೆ 4:4b 5b-7;3:26

ಯಾರಾರು ಆತನನ್ನು ಅಂಗೀಕರಿಸಿದರೋ, ಅಂದರೆ ಆತನ ಹೆಸರಿನಲ್ಲಿ ನಂಬಿಕೆಯಿಟ್ಟರೋ, ಅವರಿಗೆ ದೇವರ ಮಕ್ಕಳಾಗುವ ಅಧಿಕಾರ ಕೊಟ್ಟನು.

- ಯೋಹಾನ 1:12

ಯಾವನಾದರೂ ಪಾಪ ಮಾಡಿದರೆ ತಂದೆಯ ಬಳಿಯಲ್ಲಿ ನೀತಿವಂತನಾದ ಯೇಸುಕ್ರಿಸ್ತನೆಂಬ ಸಹಾಯನು ನಮಗಿದ್ದಾನೆ. - ೧ ಯೋಹಾನ 2:1b

ಆತನ ಮೂಲಕ ನಾವೂ ನೀವೂ ಒಬ್ಬ ಆತ್ಮವನ್ನೇ ಹೊಂದಿದವರಾಗಿ ತಂದೆಯ ಬಳಿಗೆ ಪ್ರವೇಶಿಸುವುದಕ್ಕೆ ಮಾರ್ಗವಾಯಿತು.

- ಎಫೆಸದವರಿಗೆ 2:18

## ೪೦ ಈ ಶ್ರೇಷ್ಠ ರಕ್ಷಣೆಯನ್ನು ಅಸಡ್ಡೆ ಮಾಡಬೇಡ

ಮೋಶೆಯ ವಿಧಿಗಳನ್ನು ಅಸಡ್ಡೆ ಮಾಡಿದವನಿಗೆ ಇಬ್ಬರು ಇಲ್ಲವೆ ಮೂವರು ಸಾಕ್ಷಿಗಳ ಮಾತಿನ ಮೇಲೆ ಕನಿಕರವಿಲ್ಲದೆ ಮರಣ ದಂಡನೆ ಆಗುತ್ತದಷ್ಟೆ. ಯಾವನು ದೇವಕುಮಾರನನ್ನು ತುಳಿದು ಒಡಂಬಡಿಕೆಯನ್ನು ಸ್ಥಿರಪಡಿಸಿದಂಥ ತನ್ನನ್ನು ಪವಿತ್ರ ಮಾಡಿದಂಥ ರಕ್ತವನ್ನು ಅಶುದ್ಧವೆಂದೆಣಿಸಿ ದೇವರ ಕೃಪಾವರವಾಗಿರುವ ಆತ್ಮವನ್ನು ತಿರಸ್ಕಾರ ಮಾಡಿದ್ದಾನೋ ಅವನು ಇನ್ನೂ ಎಷ್ಟೋ ಕ್ರೂರವಾದ ದಂಡನೆಗೆ ಪಾತ್ರನಾಗಬೇಕೆಂಬು ದನ್ನು ಯೋಚಿಸಿರಿ.

- ಇಬ್ರಿಯರಿಗೆ 10:28,29

ನನ್ನನ್ನು ಲಕ್ಷ್ಯಮಾಡದೆ ನನ್ನ ಮಾತುಗಳನ್ನು ಅಂಗೀಕರಿಸದೆ ಇರುವವನಿಗೆ ತೀರ್ಪು ಮಾಡುವಂಥದು ಒಂದು ಇದೆ, ಅದು ಯಾವದೆಂದರೆ, ನಾನು ಆಡಿದ ಮಾತು, ಅದೇ ಅವನಿಗೆ ಕಡೇ ದಿನದಲ್ಲಿ ತೀರ್ಪು ಮಾಡುವರು.

- ಯೋಹಾನ 12:48

ಆದದರಿಂದ ನೀವು ನಿಮ್ಮ ಪಾಪಗಳಲ್ಲಿಯೇ ಸಾಯುವಿರೆಂದು ನಿಮಗೆ ಹೇಳಿದೆನು ; ನನ್ನನ್ನು ಆತನೆಂದು ನೀವು ನಂಬದೆ ಹೋದರೆ ನಿಮ್ಮ ಪಾಪಗಳಲ್ಲಿಯೇ ಸಾಯುವಿರೆಂದು ಹೇಳಿದನು. - ಯೋಹಾನ 8:24

ನನ್ನ ಸ್ನೇಹಿತರಾದ ನಿಮಗೆ ಹೇಳುತ್ತೇನೆ. ದೇಹವನ್ನು ಕೊಂದು ಅದಕ್ಕಿಂತ ಹೆಚ್ಚಿನದೇನೂ ಮಾಡಲಾರದವರಿಗೆ ಹೆದರಬೇಡಿರಿ. ನೀವು ಯಾರಿಗೆ ಹೆದರಬೇಕೋ ನಿಮಗೆ ತಿಳಿಸುತ್ತೇನೆ. ಕೊಂದ ಮೇಲೆ ನರಕದೊಳಘೆ ಹಾಕುವ ಅಧಿಕಾರವುಳ್ಳವನಿಗೆ ಹೆದರಬೇಕು ; ಹೌದು, ಆತನಿಗೇ ಹೆದರಬೇಕೆಂದು ನಿಮಗೆ ಹೇಳುತ್ತೇನೆ.

- ಲೂಕನು 12:4,5

ಈ ಅತ್ಯಂತ ವಿಶೇಷ ರಕ್ಷಣೆಯನ್ನು ನಾವು ಅಲಕ್ಷ್ಯ ಮಾಡಿದರೆ ತಪ್ಪಿಸಿಕೊಳ್ಳುವುದು ಹೇಗೆ?

- ಇಬ್ರಿಯರಿಗೆ 2:3a

ಮಗನಿಗೆ ಒಳಗಾಗದವನು ಜೀವವನ್ನು ಕಾಣುವದೇ ಇಲ್ಲ; ದೇವರ ಕೋಪವು ಅವನ ಮೇಲೆ ನೆಲೆಗೊಂಡಿರುವುದು.

- ಯೋಹಾನ 3:36b

## ಯೇಸುವಿನ ಮೂಲಕ ನಮಗೆ ಹೊಸ ಜೀವನ ೩೫

ಆ ಸಾಕ್ಷಿ ಯಾವದೆಂದರೆ ದೇವರು ನಮಗೆ ನಿತ್ಯಜೀವವನ್ನು ಅನುಗ್ರಹಿಸಿದನು, ಆ ಜೀವವು ಆತನ ಮಗನಲ್ಲಿ ಅದೆ ಎಂಬದೇ.

ಯಾವನು ದೇವರ ಮಗನನ್ನು ಅಂಗೀಕರಿಸಿದ್ದಾನೋ ಅವನಿಗೆ ಆ ಜೀವ ಉಂಟು; ಯಾವನು ದೇವರ ಮಗ ನನ್ನು ಅಂಗೀಕರಿಸಲಿಲ್ಲವೋ ಅವನಿಗೆ ಆ ಜೀವವಿಲ್ಲ.

- ೧ ಯೋಹಾನ 5:11,12

ಆದರೆ ಕರುಣಾನಿಧಿಯಾಗಿರುವ ದೇವರು ನಮ್ಮ ಮೇಲೆ ಮಹಾ ಪ್ರೀತಿಯನ್ನಿಟ್ಟು ಅಪರಾಧಗಳ ದೆಸೆಯಿಂದ ಸತ್ತವರಾಗಿದ್ದ ನಮ್ಮನ್ನು ಕ್ರಿಸ್ತನೊಂದಿಗೆ ಬದುಕಿಸಿದನು.

- ಎಫೆಸದವರಿಗೆ 2:4,5a

ಕ್ರಿಸ್ತನೊಂದಿಗೆ ಶಿಲುಬೆಗೆ ಹಾಕಿಸಿಕೊಂಡ ವನಾಗಿದ್ದೇನೆ; ಇನ್ನು ಜೀವಸುವವನು ನಾನಲ್ಲ, ಕ್ರಿಸ್ತನು ನನ್ನಲ್ಲಿ ಜೀವಿಸುತ್ತಾನೆ: ಈಗ ಶರೀರದಲ್ಲಿರುವ ನಾನು ಜೀವಿಸುವದು ಹೇಗೆಂದರೆ ದೇವಕುಮಾರನ ಮೇಲಣ ನಂಬಿಕೆಯಲ್ಲಿಯೇ ಆತನು ನನ್ನನ್ನು ಪ್ರೀತಿಸಿ ನನಗೋಸ್ಕರ ತನ್ನನ್ನು ಒಪ್ಪಿಸಿಬಿಟ್ಟನು.

- ಗಲಾತ್ಯದವರಿಗೆ 2:20

ಯಾಕೆಂದರೆ ಜೀವವನ್ನುಂಟು ಮಾಡುವ ಪವಿತ್ರಾತ್ಮನಿಂದಾದ ನಿಯಮವು ನಿನ್ನನ್ನು ಪಾಪ ಮರಣಗಳಿಗೆ ಕಾರಣವಾದ ನಿಯಮದಿಂದ ಕ್ರಿಸ್ತಯೇಸುವಿನ ಮೂಲಕ ಬಿಡಿಸಿತು.ಯ - ರೋಮಾಪುರದವರಿಗೆ 8:2

ಹೀಗಿರಲಾಗಿ ಯಾವನಾದರೂ ಕ್ರಿಸ್ತನಲ್ಲಿದ್ದರೆ ಅವನು ನೂತನ ಸೃಷ್ಟಿಯಾದನು. ಇಗೋ, ಪೂರ್ವ ಸ್ಥಿತಿ ಹೋಗಿ ಎಲ್ಲಾ ನೂತನವಾಯಿತು. - 2 ಕೊರಿಂಥದವರಿಗೆ 5:17

ನೀವು ಪುನರ್ಜನ್ಮ ಹೊಂದಿದರಾಗಿದ್ದೀರಲ್ಲಾ; ಆ ಜನ್ಮವು ನಾಶವಾಗುವ ಬೀಜದಿಂದ ಉಂಟಾದದ್ದಲ್ಲ, ನಾಶವಾಗದ ಬೀಜದಿಂದಲೇ ಉಂಟಾದದ್ದು ಅದು ದೇವರ ಸದಾ ಜೀವವುಳ್ಳ ವಾಕ್ಯದ ಮೂಲಕವಾಗಿ ಉಂಟಾ ಯಿತು.

- ೧ ಪೇತ್ರನು 1:23

ಹಸುಮಕ್ಕಳಂತೆ ಪಾರಮಾರ್ಥಿಕವಾದ ಶುದ್ಧ ಹಾಲನ್ನು ಬಯಸಿರಿ; ಅದರಿಂದ ಬೆಳೆಯುತ್ತಾ ರಕ್ಷಣೆಯನ್ನು ಹೊಂದುವಿರಿ;

- ೧ ಪೇತ್ರನು 2:2

## ೩೮ ಯೇಸು ಪ್ರೀತಿ, ಸಂತೋಷ, ಸಮಾಧಾನ ತರುತ್ತಾನೆ

ಪ್ರೀತಿಯಿಲ್ಲದವನು ದೇವರನ್ನು ಬಲ್ಲವನಲ್ಲ; ಯಾಕೆಂದರೆ ದೇವರು ಪ್ರೀತಿ ಸ್ವರೂಪಿಯು.

ದೇವರು ಪ್ರೀತಿ ಸ್ವರೂಪಿ ಪ್ರೀತಿಯಲ್ಲಿ ನೆಲೆಗೊಂಡಿರುವವನು ದೇವರಲ್ಲಿ ನೆಲೆಗೊಂಡಿದ್ದಾನೆ. ದೇವರು ಅವನಲ್ಲಿ ನೆಲೆಗೊಂಡಿದ್ದಾನೆ. - ೧ ಯೋಹಾನ 4:8,16b

ಒಬ್ಬರಿಗೊಬ್ಬರು ಉಪಕಾರಿಗಳಾಗಿಯೂ ಕರುಣೆಯುಳ್ಳವರಾಗಿಯೂ ಕ್ಷಮಿಸುವವರಾಗಿಯೂ ಇರ್ರಿ. ದೇವರು ನಿಮಗೆ ಕ್ರಿಸ್ತನಲ್ಲಿ ಕ್ಷಮಿಸಿದನಲ್ಲಾ; -ಎಫೆಸದವರಿಗೆ 4:32

ನಿಮ್ಮೊಳಗೆ ಒಬ್ಬರ ಮೇಲೊಬ್ಬರಿಗೆ ಪ್ರೀತಿಯಿದ್ದರೆ ಎಲ್ಲರೂ ನಿಮ್ಮನ್ನು ನನ್ನ ಶಿಷ್ಯರೆಂದು ತಿಳುಕೊಳ್ಳುವರು ಅಂದನು - ಯೋಹಾನ 13:35

ದೇವರಾತ್ಮನಿಂದ ಉಂಟಾಗುವ ಫಲವೇನೆಂದರೆ ಪ್ರೀತಿ ಸಂತೋಷ ಸಮಾಧಾನ. - ಗಲಾತ್ಯದವರಿಗೆ 5:33a

ನಾನು ಯೆಹೋವನಲ್ಲಿ ಉಲ್ಲಾಸಿಸುವೆನು, ನನ್ನ ರಕ್ಷಕನಾದ ದೇವರಲ್ಲಿ ಆನಂದಿಸುವೆನು - ಹಬಕ್ಕೂಕ 3:18

ನೀನು ನನಗೆ ಜೀವ ಮಾರ್ಗವನ್ನು ತಿಳಿಯ ಪಡಿಸುವಿ;ನಿನ್ನ ಸಮ್ಮುಖದಲ್ಲಿ ಪರಿಪೂರ್ಣ ಸಂತೋಷವಿದೆ; ನಿನ್ನ ಬಲಗೈಯಲ್ಲಿ ಶಾಶ್ವತ ಭಾಗ್ಯವಿದೆ.

- ಕೀರ್ತನೆಗಳು 16:11

ಹೀಗಿರಲಾಗಿ ನಾವು ನಂಬಿಕೆಯಿಂದ ನೀತಿವಂತರಾದ ಕಾರಣ ನಮ್ಮ ಕರ್ತನಾದ ಯೇಸುಕ್ರಿಸ್ತನ ಮೂಲಕ ದೇವರೊಂದಿಗೆ ಉಂಟಾದ ಸಮಾಧಾನದಲ್ಲಿ ಇರೋಣ.

- ರೋಮಾಪುರದವರಿಗೆ 5:1

ಶಾಂತಿಯನ್ನು ನಿಮಗೆ ಬಿಟ್ಟುಹೋಗುತ್ತೇನೆ. ನನ್ನಲ್ಲಿರುವಂಥ ಶಾಂತಿಯನ್ನು ನಕಿಮಗೆ ಕೊಡುತ್ತೇನೆ. ಲೋಕವು ಕೊಡುವ ರೀತಿಯಿಂದ ನಾನು ನಿಮಗೆ ಕೊಡುವುದಿಲ್ಲ. ನಿಮ್ಮ ಹೃದಯವು ಕಳವಳಗೊಳ್ಳದಿರಲಿ, ಹೆದರದಿರಲಿ. - ಯೋಹಾನ 14:27

ಎಲ್ಲಾ ಗ್ರಹಿಕೆಯನ್ನು ಮೀರು ದೇವ ಶಾಂತಿಯು ನಿಮ್ಮ ಹೃದಯಗಳನ್ನೂ ಯೋಚನೆಗಳನ್ನೂ ಕ್ರಿಸ್ತಯೇಸುವಿಲ್ಲಿ ಕಾಯುವರು. - ಫಿಲಿಪ್ಪಿಯವರಿಗೆ 4:7

## ಯೇಸುಕ್ರಿಸ್ತನು ನಮ್ಮನ್ನು ನ್ಯಾಯ ವಿಚಾರಣೆ ಮಾಡುತ್ತಾನೆ ೪೧

ಯಾಕೆಂದರೆ ಆತನು ನಿಷ್ಕರ್ಷೆ ಮಾಡಿದ ಪುರುಷನ ಕೈಯಿಂದ ನೀತಿಗನುಸಾರವಾಗಿ ಭೂಲೋಕದ ನ್ಯಾಯ ವಿಚಾರಣೆ ಮಾಡುವುದಕ್ಕೆ ಒಂದು ದಿವಸವನ್ನು ಗೊತ್ತು ಮಾಡಿದ್ದಾನೆ. ಅವನನ್ನು ಸತ್ತವರೊಳಗಿಂದ ಎಬ್ಬಿಸಿದ್ದರಲ್ಲಿ ಇದನ್ನು ನಂಬುವದಕ್ಕೆ ಎಲ್ಲರಿಗೂ ಆಧಾರ ಕೊಟ್ಟಿದ್ದಾನೆ ಅಂದನು.

- ಅಪೊಸ್ತಲರ ಕೃತ್ಯಗಳು 17:31

ಇದಲ್ಲದೆ ತಂದೆಯು ಯಾರಿಗೂ ತೀರ್ಪು ಮಾಡುವದೂ ಇಲ್ಲ; ತೀರ್ಪು ಮಾಡುವ ಅಧಿಕಾರವನ್ನೆಲ್ಲಾ ಮಗನಿಗೆ ಕೊಟ್ಟಿದ್ದಾನೆ; ಎಲ್ಲರೂ ತನಗೆ ಮಾನಕೊಡುವ ಪ್ರಕಾರವೇ ಮಗನಿಗೂ ಮಾನಕೊಡಬೇಕೆಂದು ತಂದೆಯು ಇಚ್ಛಿಸುತ್ತಾನೆ.

- ಯೋಹಾನ 5:22, 23a

ಯಾಕೆಂದರೆ ಪ್ರತಿಯೊಬ್ಬನು ತನ್ನ ದೇಹದ ಮೂಲಕ ನಡಿಸಿದ ಒಳ್ಳೇದಕ್ಕಾಗಲಿ ಕೆಟ್ಟದ್ದಕ್ಕಾಗಲೀ ಸರಿಯಾಗಿ ಪ್ರತಿಫಲವನ್ನು ಹೊಂದುವದಕ್ಕೋಸ್ಕರ ನಾವೆಲ್ಲರೂ ಕ್ರಿಸ್ತನ ನ್ಯಾಯಾಸನದ ಮುಂಎ ಯಥಾಸ್ಥಿತಿಯಲ್ಲಿ ಕಾಣಿಸಿಕೊಳ್ಳಬೇಕು. 2 - ಕೊರಿಂಥದವರಿಗೆ 5:10

ನಾನು ಸಾರುವ ಸುವಾರ್ತೆಯಲ್ಲಿ ಬೋಧಿಸಿರುವ ಪ್ರಕಾರ ದೇವರ ಯೇಸು ಕ್ರಿಸನ ಮೂಲಕ ವಾಗಿ ಮನುಷ್ಯರ ಗುಟ್ಟುಗಳನ್ನು ಹಿಡಿದು ವಿಚಾರಿಸುವ ದಿನವು ಬರುತ್ತದೆ.

- ರೋಮಾಪುರದವರಿಗೆ 2:16a

ಯೇಸು ಕರ್ತನು ತನ್ನ ಶಕ್ತಿಯನ್ನು ತೋರ್ಪಡಿಸುವ ದೇವದೂತರಿಂದ ಕೂಡಿದವನಾಗಿ ಉರಿಯುವ ಬೆಂಕಿಯಲ್ಲಿ ಆಕಾಶದಿಂದ ಪ್ರತ್ಯಕ್ಷನಾಗುವ ಕಾಲದಲ್ಲಿ ಅದನ್ನು ಕೊಡುವನು.

ಆಗ ನಮ್ಮ ಕರ್ತನಾದ ಯೇಸುವು ದೇವರನ್ನರಿಯದವರಿಗೂ ತನ್ನ ಸುವಾರ್ತೆಗೆ ಒಳಪಡಿಸಿದವರಿಗೂ ಪ್ರತೀಕಾರವನ್ನು ಸಲ್ಲಿಸುವನು.

2 - ಥೆಸಲೋಸಿಕದವರಿಗೆ 1:7b,8

ಮತ್ತು ತಮ್ಮ ಮೇಲೆ ನಾನು ದೊರೆತನ ಮಾಡುವದು ಇಷ್ಟವಿಲ್ಲವೆಂದು ಹೇಳಿದ ಆ ನನ್ನ ವೈರಿಗಳನ್ನು ಇಲ್ಲಿಗೆ ತಂದು ನನ್ನ ಮುಂದೆ ಸಂಹಾರ ಮಾಡಬೇಕು ಅಂದನು.

- ಲೂಕ 19:27

## ೩೬ ದೇವರು ತನ್ನ ಜನರಿಗೆ ತಂದೆಯಾಗಿದ್ದಾನೆ

ಪರಿಶುದ್ಧ ವಾಸಸ್ಥಾನದಲ್ಲಿರುವ ದೇವರು ದಿಕ್ಕಿಲ್ಲದವರಿಗೆ ತಂದೆಯೂ ವಿಧವೆಯರಿಗೆ ಸಹಾಯಕ ನೂ ಆಗಿದ್ದಾನೆ.

- ಕೀರ್ತನೆಗಳು 68:5

ಈಗಲಾದರೋ ಯೆಹೋವನೇ, ನೀನು ನಮ್ಮ ತಂದೆಯಾಗಿದ್ದೀ; ನಾವು ಜೇಡಿಮಣ್ಣು, ನೀನು ಕುಂಬಾರ, ನಾವೆಲ್ಲರೂ ನಿನ್ನ ಕೈ ಕೆಲಸವೇ.

ಯೆಹೋವಾ, ನೀನೇ ನಮ್ಮ ಪಿತೃ; ಆದಿಯಿಂದಲೂ ನಮ್ಮ ವಿಮೋಚಕನು ಅನ್ನಿಸಿಕೊಂಡಿದ್ದೀ.

- ಯೆಶಾಯ 64:8;63:16b

ಆಗ ಅವರು ನನ್ನ ಪ್ರಜೆಯಲ್ಲದವರು ಎನಿಸಿಕೊಳ್ಳುವುದಕ್ಕೆ ಬದಲಾಗಿ ಜೀವಸ್ವರೂಪನಾದ ದೇವರ ಮಕ್ಕಳು ಎನಿಸಿಕೊಳ್ಳುವರು.

- ಹೋಶೇಯ 1:10b

ಹಾಗಾದರೆ ಕೆಟ್ಟವರಾದ ನೀವು ನಿಮ್ಮ ಮಕ್ಕಳಿಗೆ ಒಳ್ಳೆಯ ಪದಾರ್ಥಗಳನ್ನು ಕೊಡಬಲ್ಲವರಾದರೆ ಪರಲೋಕದಲ್ಲಿರುವ ನಿಮ್ಮ ತಂದೆಯು ತನ್ನನ್ನು ಬೇಡಿಕೊಳ್ಳುವವರಿಗೆ ಎಷ್ಟೋ ಹೆಚ್ಚಾಗಿ ಒಳ್ಳೆಯ ವರಗಳನ್ನು ಕೊಡುವನಲ್ಲವೇ.

ಆದದರಿಂದ ನೀವು ಹೀಗೆ ಪ್ರಾರ್ಥನೆ ಮಾಡತಕ್ಕದ್ದು - ಪರಲೋಕದಲ್ಲಿರುವ ನಮ್ಮ ತಂದೆಯೇ.

- ಮತ್ತಾಯ 7:11:6:9

ಅಶುದ್ಧವಾದ ಯಾವದನನ್ನೂ ಮುಟ್ಟದಿರಿ ಎಂದು ಕರ್ತನು ಹೇಳುತ್ತಾನೆ.

ಇದಲ್ಲದೆ - ನಾನು ನಿಮ್ಮನ್ನು ಸೇರಿಸಿಕೊಂಡು ನಿಮಗೆ ತಂದೆಯಾಗಿರುವೆನು; ನೀವು ನನಗೆ ಕುಮಾರ ಕುಮಾರಿ ಯರು ಆಗಿರುವಿರೆಂದು ಸರ್ವಶಕ್ತನಾದ ಕರ್ತನು ಹೇಳುತ್ತಾನೆ.

2 - ಕೊರಿಂಥದವರಿಗೆ 6:117b,18

ಯಾರಾರು ದೇವರ ಆತ್ಮನಿಂದ ನಡೆಸಿಕೊಳ್ಳುತ್ತಾರೋ ಅವರು ದೇವರ ಮಕ್ಕಳು.

- ರೋಮಾಂಥಪುರದವರಿಗೆ 8:14

## ಯೇಸು ತನ್ನ ನಿಜ ಹಿಂಬಾಲಕರನ್ನು ಪುನರುತ್ಥಾನಗೊಳಿಸುವನು ೩೯

ಯೇಸುವನ್ನು ಸತ್ತವರೊಳಗಿಂದ ಜೀವಿತನಾಗಿ ಎಬ್ಬಿ,ಸಿದಾತನ ಆತ್ಮನು ನಿಮ್ಮಲ್ಲಿ ವಾಸವಾಗಿದ್ದರೆ ಕ್ರಿಸ್ತಯೇಸುವನ್ನು ಸತ್ತವರೊಳಗಿಂದ ಎಬ್ಬಿಸಿದಾತನು ನಿಮ್ಮಲ್ಲಿ ವಾಸವಾಗಿರುವ ತನ್ನ ಆತ್ಮನ ಮೂಲಕ ನಿಮ್ಮ ಮೃತ್ಯುದೇಹಗಳನ್ನು ಸಹ ಬದುಕಿಸುವನು.

- ರೋಮಾಪುರದವರಿಗೆ 8:11

ದೇವರು ಕರ್ತನನ್ನು ಎಬ್ಬಿಸಿದ್ದಲ್ಲದೆ ನಮ್ಮನ್ನೂ ತನ್ನ ಪರಾಕ್ರಮದಿಂದ ಎಬ್ಬಿಸುವನು.

-೧ ಕೊರಿಂಥದವರಿಗೆ 6:14

ಮಗನನ್ನು ನೋಡಿ ಆತನನ್ನು ನಂಬುವ ಪ್ರತಿ ಯೊಬ್ಬನಿಗೆ ನಿತ್ಯಜೀವವು ಸಿಕ್ಕಬೇಕೆಂಬದೇ ನನ್ನ ತಂ ಎಯ ಚಿತ್ತವಾಗಿದೆ. ಮತ್ತು ನಾನು ಕಡೇದಿನದಲ್ಲಿ ಅವನನಉ ಎಬ್ಬಿಸುವೆನು ಎಂದು ಹೇಳಿದನು. - ಯೋಹಾನ 6:40

ಯೇಸು ಆಕೆಗೆ - ನಾನೇ ಪುನರುತ್ಥಾನವೂ ಜೀವವೂ ಆಗಿದ್ದೇನೆ ; ನನ್ನನ್ನು ನಂಬುವವನು ಸತ್ತರೂ ಬದುಕುವನು; ಮತ್ತು ಬದುಕುತ್ತಾ ನನ್ನನ್ನು ನಂಬುವ ಪ್ರತಿಯೊಬ್ಬನು ಎಂದಿಗೂ ಸಾಯುವುದಿಲ್ಲ. - ಯೋಹಾನ 11:25, 26a

ಮನುಷ್ಯನ ಮೂಲಕ ಮರಣವು ಉಂಟಾದ ಕಾರಣ ಮನುಷ್ಯನ ಮೂಲಕ ಸತ್ತವರಿಗೆ ಪುನರುತ್ಥಾನ ವುಂಟಾಗುವುದು

ಯಾವ ಪ್ರಕಾರ ಆದಾಮನ ಸಂಬಂಧದಿಂದ ಎಲ್ಲರೂ ಸಾಯುವವರಾದರೋ ಅದೇ ಪ್ರಕಾರ ಕ್ರಿಸ್ತನ ಸಂಬಂಧದಿಂದ ಎಲ್ಲರೂ ಜೀವಿತರಾಗುವರು. ಆದರೆ ಪ್ರತಿಯೊಬ್ಬನು ತನ್ನ ತನ್ನ ತರಗತಿಯಲ್ಲಿರುನು. ಕ್ರಿಸ್ತನು ಪ್ರಥಮ ಫಲ; ತರುವಾಯ ಕ್ರಿಸ್ತನ ಪ್ರತ್ಯಕ್ಷಿಕೆಯಲ್ಲಿ ಆತನವರು ಎದ್ದು ಬರುವರು.

- ೧ ಕೊರಿಂಥದವರಿಗೆ 15:21-23

ನಾನು ಬದುಕುವದರಿಂದ ನೀವು ಬದುಕುವಿರಿ.

- ಯೋಹಾನ 14:19b

ಇದಲ್ಲದೆ ನಾವು ಕ್ರಿಸ್ತನೊಡನೆ ಸತ್ತ ಪಕ್ಷದಲ್ಲಿ ಆತನೊಡನೆ ಜೀವಿಸುವುದೆಂದು ನಂಬುತ್ತೇನೆ.

- ರೋಮಾಪುರದವರಿಗೆ 6:8

## ೪೨ ಹಿಂಬಾಲಕರೆಂದು ಹೇಳಿಕೊಳ್ಳುವವರೆಲ್ಲರು ಯೇಸುವಿಗೆ ಸೇರಿದವರಲ್ಲ

ಅವರು ತಾವು ದೇವರನ್ನು ಅರಿತವರೆಂದು ಹೇಳಿಕೊಳ್ಳುತ್ತಾರೆ;

-ತೀತನಿಗೆ 1:16a

ಯಾವನಿಗಾದರೂ ಕ್ರಿಸ್ತನ ಆತ್ಮನು ಇಲ್ಲದಿದ್ದರೆ ಅವನು ಕ್ರಿಸ್ತನವನಲ್ಲ

- ರೋಮಾಪುರದವರಿಗೆ 8:9b

ನಿನ್ನ ಮಾತುಗಳನ್ನು ಕೇಳುತ್ತಾರೆ, ಆದರೆ ಕೈಕೊಳ್ಳುವುದಿಲ್ಲ , ಬಾಯಿಂದ ಬಹು ಪ್ರೀತಿಯನ್ನು ತೋರಿಸುತ್ತಾರೆ, ಅವರ ಮನಸ್ಸೇನೋ ತಾವು ದೋಚಿಕೊಂಡದರ ಮೇಲೆ ಹೋಗುತ್ತದೆ.

- ಯೆಹೆಜ್ಕೇಲನು 33:31b

ಈ ಜನರು ಮಾತಿನಿಂದ ನನ್ನನ್ನು ಸನ್ಮಾನಿಸುತ್ತಾರೆ, ಆದರೆ ಅವರ ಮನಸ್ಸು ನನಗೆ ದೂರವಾಗಿದೆ

- ಮತ್ತಾಯ 15:8

ನನ್ನನ್ನು ಸ್ವಾಮೀ, ಸ್ವಾಮೀ ಅನ್ನುವವರೆಲ್ಲರೂ ಪರಲೋಕ ರಾಜ್ಯದಲ್ಲಿ ಸೇರುವರೆಂದು ನೆನಸಬೇಡಿರಿ: ಪರಲೋಕದಲ್ಲಿರುವ ನನ್ನ ತಂದೆಯ ಚಿತ್ತದಂತೆ ನಡೆಯುವವನೇ ಪರಲೋಕ ರಾಜ್ಯಕ್ಕೆ ಸೇರುವನು.

ಸ್ವಾಮೀ, ಸ್ವಾಮಿ, ನಿನ್ನ ಹೆಸರಿನ ಮೇಲೆ ನಾವು ಬೋಧನೆ ಹೇಳಲಿಲ್ಲವೇ? ನಿನ್ನ ಹೆಸರಿನ ಮೇಲೆ ದೆವ್ವಗಳನ್ನು ಬಿಡಿಸಲಿಲ್ಲವೇ? ನಿನ್ನ ಹೆಸರಿನ ಮೇಲೆ ಅನೇಕ ಮಹತ್ಕಾರ್ಯಗಳನ್ನು ಮಾಡಲಿಲ್ಲವೇ ಎಂದು ಆ ದಿನದಲ್ಲಿ ಎಷ್ಟೋ ಜನರು ನನಗೆ ಹೇಳುವರು. ಆಗ ನಾನು ಅವರಿಗೆ ನಾನೆಂದೂ ನಿಮ್ಮ ಗುರುತು ಕಾಣೆನು; ಧರ್ಮವನ್ನು ಮೀರಿ ನಡೆಯುವವರೆಗೆ ನನ್ನಿಂದ ತೊಲಗಿ ಹೋಗಿರಿ ಎಂದು ಎಲ್ಲರ ಮುಂದೆ ಹೇಳಿ ಬಿಡುವೆನು.

- ಮತ್ತಾಯ 7:21-23

ಹಾಗೆಯೇ ನೀವು ಸಹ ಹೊರಗೆ ಜನರಿಗೆ ಸತ್ಪುರುಷರಂತೆ ಕಾಣಿಸಿಕೊಳ್ಳುತ್ತೀರಿ ಸರಿ, ಆದರೆ ಒಳಗೆ ಕಪಟದಿಂದಲೂ ಅನ್ಯಾಯದಿಂದಲೂ ತುಂಬಿದವರಾಗಿದ್ದೀರಿ.

- ಮತ್ತಾಯ 23:28

## ನಿಜ ಹಿಂಬಾಲಕರು ಯೇಸುವಿಗೆ ವಿಧೇಯರಾಗುತ್ತಾರೆ ೪೩

ನಾವು ಆತನ ಆಜ್ಞೆಗಳನ್ನು ಕೈಕೊಂಡು ನಡೆದರೆ ಅದರಿಂದಲೇ ಆತನನ್ನು ಬಲ್ಲವರಾಗಿದ್ದೇವೆಂದು ತಿಳುಕೊಳ್ಳುತ್ತೇವೆ. - ೧ ಯೋಹಾನನು 2:3

ನನ್ನ ಆತ್ಮವನ್ನು ನಿಮ್ಮಲ್ಲಿ ನೆಲಸಿರುವಂತೆ ಅನುಗ್ರಹಿಸಿ ನೀವು ನನ್ನ ನಿಯಮಗಳನ್ನು ಅನುಸರಿಸುವ ಹಾಗೆ ಮಾಡುವೆನು. ನೀವು ನನ್ನ ವಿಧಿಗಳನ್ನು ಕೈಕೊಂಡು ಆಚರಿಸುವಿರಿ. - ಯೆಹೆಜ್ಕೇಲನು 36:27

ತನಗೆ ವಿಧೇಯರಾಗಿರುವವರೆಲ್ಲರಿಗೂ ನಿರಂತರವಾದ ರಕ್ಷಣೆಗೆ ಕಾರಣನಾದನು. - ಇಬ್ರಿಯರಿಗೆ 5:9

ಪಾಪದಿಂದ ಬಿಡುಗಡೆಯನ್ನು ಹೊಂದಿ ನೀತಿಗೆ ದಾಸ ರಾದದರಿಂದಲೂ ದೇವರಿಗೆ ಸ್ತೋತ್ರವಾಗಲಿ.

- ರೋಮಾಪುರದವರಿಗೆ 6:18

ನಾವು ಆತನ ನಿರ್ಮಾಣ, ಸತ್ಕಾರ್ಯಗಳನ್ನು ಮಾಡುವದಕ್ಕಾಗಿಯೇ ಕ್ರಿಸ್ತಯೇಸುವಿನಲ್ಲಿ ಸೃಷ್ಟಿಸಲ್ಪಟ್ಟೆವು. ನಾವು ಸತ್ಕಾರ್ಯಗಳನ್ನು ನಡೆಸುವವರಾಗಿ ಬದುಕಬೇಕೆಂದು ದೇವರು ನಮ್ಮನ್ನು ಮೊದಲೇ ನೇಮಿಸಿದನು.

- ಎಫೆಸದವರಿಗೆ 2:10

ಆದರೆ ಕ್ರಿಸ್ತನು ನಿಮ್ಮಲ್ಲಿದ್ದರೆ ದೇಹವು ಪಾಪದ ದೆಸೆಯಿಂದ ಸತ್ತದ್ದಾಗಿದ್ದರೂ ಆತ್ಮವು ನೀತಿಯ ದೆಸೆಯಿಂದ ಜೀವಸ್ವರೂಪವಾಗಿದೆ. ನೀವು ಶರೀರಭಾವವನ್ನು ಅನುಸರಿಸಿ ಬದುಕಿದರೆ ಸಾಯುವದು ನಿಶ್ಚಯ; ನೀವು ಪವಿತ್ರಾತ್ಮನಿಂದ ದೇಹದ ದುರಭ್ಯಾಸಗಳನ್ನು ನಾಶ ಮಾಡುವದಾದರೆ ಜೀವಿಸುವಿರಿ. - ರೋಮಾಪುರದವರಿಗೆ 8:10,13

ತನ್ನವರು ಯಾರಾರೆಂಬದನ್ನು ಕರ್ತನು ತಿಳಿದಿದ್ದಾನೆಂತಲೂ ಕರ್ತನ ನಾಮ ವನ್ನು ಹೇಳಿಕೊಳ್ಳುವವರೆಲ್ಲ ರೂ ದುರ್ಮಾರ್ಗತನವನ್ನು ಬಿಟ್ಟುಬಿಡಬೇಕೆಂತಲೂ ಲಿಪಿಯುಂಟು. - ತಿಮೊಥೆಯನಿಗೆ 2:19b

ಪೇತ್ರನೂ ಉಳಿದ ಅಪೊಸ್ತಲರು ಮನುಷ್ಯರಿಗಿಂತಲೂ ದೇವರಿಗೆ ಹೆಚ್ಚಾಗಿ ವಿಧೇಯರಾಗಿರಬೇಕಲ್ಲಾ.

- ಅಪೊಸ್ತಲರ ಕೃತ್ಯಗಳು -5:29

## ೪೪ ಯೇಸುವಿನ ಹಿಂಬಾಲಕರನ್ನು ಈ ಲೋಕವು ಹಗೆ ಮಾಡುತ್ತದೆ

ಲೋಕವು ನಿಮ್ಮ ಮೇಲೆ ದ್ವೇಷ ಮಾಡುವದಾದರೆ ಅದು ಮೊದಲು ನನ್ನ ಮೆಲೆ ದ್ವೇಷ ಮಾಡಿತೆಂದು ತಿಳುಕೊಳ್ಳಿರಿ. ನೀವು ಲೋಕದ ಕಡೆಯವರಾಗಿರುತ್ತಿದ್ದರೆ ಲೋಕವು ನಿಮ್ಮ ಮೇಲೆ ತನ್ನವರೆಂದು ಮಮತೆ ಇಡುತ್ತಿತ್ತು; ಆದರೆ ನೀವು ಲೋಕದ ಕಡೆಯವರಲ್ಲದೆ ಇರುವದರಿಂದಲೂ ನಾನು ನಿಮ್ಮನ್ನು ಲೋಕದೊಳಗಿಂದ ಆರಿಸಿ ತೆಗೆದು ಕೊಂಡಿರುವದರಿಂದಲೂ ಲೋಕವು ನಿಮ್ಮ ಮೇಲೆ ದ್ವೇಷ ಮಾಡುತ್ತದೆ.

- ಯೋಹಾನ 15:18,19

ಅದಲ್ಲದೆ ನಿಮ್ಮನ್ನು ಕೊಲ್ಲುವವನು ತಾನು ದೇವರಿಗೆ ಯಜ್ಞವನ್ನು ಮಾಡಿದ್ದೇನೆಂದು ನೆನಸುವ ಕಾಲ ಬರುತ್ತದೆ. ಅವರು ತಂದೆಯನ್ನಾದರೂ ನನ್ನನ್ನಾದರೂ ತಿಳಿಯದವ ರಾಗಿರುವುದರಿಂದ ಇಂಥದನ್ನು ನಿಮಗೆ ಮಾಡುವರು

- ಯೋಹಾನ 16:2b,3

ದೇವರ ಮಕ್ಕಳೆಂಬ ಹೆಸರನ್ನು ನಮಗೆ ಕೊಡುವುದರಲ್ಲಿ ತಂದೆಯು ಎಂಥಾ ಪ್ರೀತಿಯನ್ನು ನಮ್ಮ ಮೇಲೆ ಇಟ್ಟಿದ್ದಾನೆ, ನೋಡಿರಿ; ನಾವು ಆತನ ಮಕ್ಕಳಾಗಿದ್ದೇವೆ. ಈ ಕಾರಣದಿಂದ ಲೋಕವು ನಮ್ಮನ್ನು ತಿಳಿದುಕೊಳ್ಳುವುದಿಲ್ಲ, ಅದು ಆತನನ್ನು ತಿಳಿದುಕೊಳ್ಳಲಿಲ್ಲವಲ್ಲಾ.

- ೧ ಯೋಹಾನ 3:1

ನಾವು ಬಹುಸಂಕಟಗಳನ್ನು ತಾಳಿ ದೇವರ ರಾಜ್ಯದೊಳಗೆ ಸೇರಬೇಕೆಂಬದಾಗಿ

- ಅಪೊಸ್ತಲರ ಕೃತ್ಯಗಳು 14:22b

ಕ್ರಿಸ್ತಯೇಸುವಿನಲ್ಲಿ ಸದ್ಭಕ್ತರಾಗಿ ಜೀವಿಸುವುದಕ್ಕೆ ಮನಸ್ಸು ಮಾಡುವವರೆಲ್ಲರೂ ಹಿಂಸೆಗೊಳಗಾಗುವರು.

-ತಿಮೊಥೆಯನಿಗೆ 3:12

ಲೋಕದಲ್ಲಿ ನಿಮಗೆ ಸಂಕಟ ಉಂಟು; ಧೈರ್ಯ ವಾಗಿರಿ, ನಾನು ಲೋಕವನ್ನು ಜಯಿಸಿದ್ದೇನೆ ಎಂದು ಹೇಳಿದನು

- ಯೋಹಾನ 16:33b

ನಾನು ನಿನ್ನ ವಾಕ್ಯವನ್ನು ಇವರಿಗೆ ಕೊಟ್ಟಿದ್ದೇನೆ. ನಾನು ಲೋಕದವನಲ್ಲದೆ ಇರುವ ಪ್ರಕಾರ ಇವರೂ ಲೋಕದವರಲ್ಲ; ಆದ ಕಾರಣ ಲೋಕವು ಇವರ ಮೇಲೆ ದ್ವೇಷ ಮಾಡಿಲದೆ. - ಯೋಹಾನ 17:14

## ಹಿಂಸೆಗೊಳಗಾಗುವವರಿಗೆ ಇರುವ ವಾಗ್ದಾನಗಳು ೪೫

ನಿಮ್ಮ ಚಿಂತೆಯನ್ನೆಲ್ಲಾ ಆತನ ಮೇಲೆ ಹಾಕಿರಿ, ಆತನು ನಿಮಗೋಸ್ಕರ ಚಿಂತಿಸುತ್ತಾನೆ. - ೧ ಪೇತ್ರನು 5:7

ನೀನಂತು ಹೆದರಬೇಡ, ನಾನೇ ನಿನ್ನೊಂದಿಗಿದ್ದೇನೆ : ದಿಗ್ಭ್ರಮೆಗೊಳ್ಳದಿರು, ನಾನೇ ನಿನ್ನ ದೇವರು; ನಾನು ನಿನ್ನನ್ನು ಬಲಪಡಿಸುತ್ತೇನೆ; ನನ್ನ ಧರ್ಮದ ಬಲಗೈಯನ್ನು ನಿನಗೆ ಆಧಾರ ಮಾಡುತ್ತೇನೆ.

- ಯೆಶಾಯ 41:10

ತಂದೆ ತಾಯಿಗಳು ನನ್ನನ್ನು ತೊರೆದು ಬಿಟ್ಟರೇನು: ಯೆಹೋವನು ನನ್ನನ್ನು ಸೇರಿಸಿಕೊಳ್ಳುವನು.

- ಕೀರ್ತನೆಗಳು 27:10

ಆದದರಿಂದ ಕರ್ತನು ನನ್ನ ಸಹಾಯಕನು, ಭಯಪಡೆನು, ಮನುಷ್ಯನು ನನಗೆ ಏನು ಮಾಡಾನು? ಎಂದು ನಾವು ಧೈರ್ಯವಾಗಿ ಹೇಳಬಲ್ಲೆವು.

- ಇಬ್ರಿಯರಿಗೆ 13:6

ನೀವು ಕ್ರಿಸ್ತನ ಹೆಸರಿನ ನಿಮಿತ್ತ ನಿಂದೆಗೆ ಗುರಿಯಾದರೆ ಧನ್ಯರೇ, ತೇಜೋಮಯವಾದ ಆತ್ಮನಾಗಿರುವ ದೇವರಾತ್ಮನು ನಿಮ್ಮಲ್ಲಿ ನೆಲೆಗೊಂಡಿದ್ದಾನಲ್ಲಾ.

- ೧ ಪೇತ್ರನು 4:14a

ನೀನು ಹೋಗುವಲ್ಲೆಲ್ಲಾ ನಿನ್ನನ್ನು ಕಾಯುವದಕ್ಕೆ ಆತನು ನಿನ್ನ ವಿಷಯವಾಗಿ ತನ್ನ ದೂತರಿಗೆ ಅಪ್ಪಣೆ ಕೊಡುವನು.

- ಕೀರ್ತನೆಗಳು 91:11

ನಾನು ಕಾರ್ಗತ್ತಲಿನ ಕಣಿವೆಯಲ್ಲಿ ನಡೆಯುವಾಗಲೂ ನೀನು ಹತ್ತಿರವಿರುವುದರಿಂದ ಕೇಡಿಗೆ ಹೆದರೆನು; ನಿನ್ನ ದೊಣ್ಣೆಯೂ ನಿನ್ನ ಕೋಲೂ ನನಗೆ ಧೈರ್ಯ ಕೊಡುತ್ತವೆ.

- ಕೀರ್ತನೆಗಳು 23:4

ನನ್ನನ್ನು ಬಲಪಡಿಸುವಾತನಲ್ಲಿದ್ದುಕೊಂಡು ಎಲ್ಲಕ್ಕೂ ಶಕ್ತನಾಗಿದ್ದೇನೆ.
ನನ್ನ ದೇವರು ಕ್ರಿಸ್ತಯೇಸುವಿನ ಮೂಲಕ ತನ್ನ ಪ್ರಭಾವದ ಐಶ್ವರ್ಯಕ್ಕೆ ತಕ್ಕ ಹಾಗೆ ನಿಮ್ಮ ಪ್ರತಿಯೊಂದು ಕೊರತೆಯನ್ನೂ ನೀಗಿಸುವನು.

- ಫಿಲಿಪ್ಪಿಯವರಿಗೆ 4:13,19

## ೪೬ ಪಾಪ ಮತ್ತು ಸೈತಾನನ ಮೇಲೆ ಜಯ

ಮನುಷ್ಯರು ಸಹಿಸಬಹುದಾದ ಶೋಧನೆಯೇ ಹೊರತು ಬೇರೆ ಯಾವದೂ ನಿಮಗೆ ಸಂಭವಿಸಲಿಲ್ಲ. ದೇವರು ನಂಬಿಗಸ್ತನು. ನಿಮ್ಮ ಶಕ್ತಿಯನ್ನು ಮೀರುವ ಶೋಧನೆಯನ್ನು ನಿಮಗೆ ಬರಗೊಡಿಸದೆ ನೀವು ಅದನ್ನು ಸಹಿಸುವುದಕ್ಕೆ ಶಕ್ತರಾಗುವಂತೆ ಶೋಧನೆಯಾಗುತ್ತಲೇ ತಪ್ಪಿಸಿಕೊಳ್ಳುವ ಮಾರ್ಗವನ್ನು ಸಿದ್ಧ ಮಾಡುವೆನು.

- ೧ ಕೊರಿಂಥದವರಿಗೆ 10:13

ಆದದರಿಂದ ನಾವು ಕರುಣೆಯನ್ನು ಹೊಂದುವಂತೆ ಯೂ ಆತನ ದಯೆಯಿಂದ ಸಮಯೋಚಿತವಾದ ಸಹಾಯವು ನಮಗೆ ದೊರೆಯುವಂತೆಯೂ ಧೈರ್ಯ ದಿಂದ ಕೃಪಾಸನದ ಮುಂದೆ ಬರೋಣ. - ಇಬ್ರಿಯರಿಗೆ 4:16

ಆದರೆ ಆತನು ಬೆಳಕಿನಲ್ಲಿರುವಂತೆಯೇ ನಾವು ಬೆಳಕಿನಲ್ಲಿ ನಡೆದರೆ ನಾವು ಒಬ್ಬರ ಸಂಗಡಲೊಬ್ಬರು ಅನ್ಯೋನ್ಯತೆಯಲ್ಲಿದ್ದೇವೆ, ಮತ್ತು ಆತನ ಮಗನಾದ ಯೇಸುವಿನ ರಕ್ತವು ಸಕಲ ಪಾಪವನ್ನು ನಿವಾರಣ ಮಾಡಿ ನಮ್ಮನ್ನು ಶುದ್ಧಿ ಮಾಡುತ್ತದೆ. - ೧ ಯೋಹಾನನು 1:7

ನೀವು ಯೌವನದ ಇಚ್ಛೆಗಳಿಗೆ ದೂರವಾಗಿರು: ನೀತಿ ವಿಶ್ವಾಸ ಪ್ರೀತಿ ಮತ್ತು ಸಮಾಧಾನವನ್ನು ಸಂಪಾದಿಸುವುದಕ್ಕೆ ಶುದ್ಧ ಹೃದಯವುಳ್ಳವರಾಗಿ ಕರ್ತನನ್ನು ಬೇಡಿಕೊಳ್ಳುವವರ ಸಂಗಡ ಪ್ರಯಾಸ ಪಡು. 2 - ತಿಮೊಥೆಯನಿಗೆ 2:22

ಅದೇ ಪ್ರಕಾರ ನೀವು ಸಹ ನಿಮ್ಮನ್ನು ಕ್ರಿಸ್ತಯೇಸುವಿನ ಐಕ್ಯದಿಂದ ಪಾಪದ ಪಾಲಿಗೆ ಸತ್ತವರೂ ದೇವರಾಗಿ ಜೀವಿಸುವವರೂ ಎಂದೂ ಎಣಿಸಿಕೊಳ್ಳಿರಿ.

2 - ರೋಮಾಪುರದವರಿಗೆ 6:11

ಹೀಗಿರಲಾಗಿ ದೇವರಿಗೆ ಒಳಗಾಗಿರಿ. ಸೈತಾನನನ್ನು ಎದುರಿಸಿರಿ, ಅವನು ನಿಮ್ಮನ್ನು ಬಿಟ್ಟು ಓಡಿಹೋಗುವನು.

- ಯಾಕೋಬನು 4:7

ನಿನಗೆ ವಿರೋಧವಾಗಿ ಪಾಪ ಮಾಡದಂತೆ ನಿನ್ನ ನುಡಿಗಳನ್ನು ನನ್ನ ಹೃದಯದಲ್ಲಿಟ್ಟುಕೊಂಡಿದ್ದೇನೆ.

- ಕೀರ್ತನೆಗಳು 119:11

ಲೋಕದಲ್ಲಿರುವವನಿಗಿಂತ ನಿಮ್ಮಲ್ಲಿರುವಾತನು ಹೆಚ್ಚಿನವನಾಗಿರುವುದರಿಂದ ನೀವು ಆ ಸುಳ್ಳು ಪ್ರವಾದಿಗಳನ್ನು ಜಯಿಸಿದ್ದೀರಿ. - ೧ ಯೋಹಾನನು 4:4b

## ಸಹಜ ಪ್ರಾರ್ಥನೆಯು ದೇವರೊಂದಿಗಿನ ಅನ್ಯೋನ್ಯತೆಯಾಗಿದೆ ೪೭

ನನ್ನ ಸಾನಿಧ್ಯಕ್ಕೆ ಬಾ ಎಂಬ ನಿನ್ನ ಮಾತಿಗೆ ನಾನು ಯೆಹೋವನೇ, ನಿನ್ನ ಸಾನಿಧ್ಯಕ್ಕೆ ಬರಲೇ ಬರುವೆನು ಎಂದು ಉತ್ತರಕೊಟ್ಟೆನು.
ಜನರೇ, ಯಾವಾಗಲೂ ಆತನನ್ನೇ ನಂಬಿ ನಿಮ್ಮ ಹೃದಯವನ್ನು ಆತನ ಮುಂದೆ ಬಿಚ್ಚಿರಿ; ದೇವರು ನಮ್ಮ ಆಶ್ರಯವು. - ಕೀರ್ತನೆಗಳು 27:8 62:8

ಯೆಹೋವನೇ, ನನ್ನನ್ನು ಸ್ವಸ್ಥ ಪಡಿಸು, ಆಗ ಸ್ವಸ್ಥನೇ ಆಗುವೆನು ; ನನ್ನನ್ನು ರಕ್ಷಿಸು, ಆಗ ರಕ್ಷಿತನೇ ಆಗುವೆನು; ನೀನೇ ನಿನಗೆ ಸ್ತುತ್ಯನು - ಯೆರೆಮೀಯ 17:14

ಎಡೆಬಿಡದೆ ಪ್ರಾರ್ಥನೆ ಮಾಡಿರಿ : ಎಲ್ಲಾದರಲ್ಲಿಯೂ ಕೃತಜ್ಞತಾ ಸ್ತುತಿ ಮಾಡಿರಿ : ಇದೇ ನಿಮ್ಮ ವಿಷಯವಾಗಿ ಕ್ರಿಸ್ತಯೇಸುವಿನಲ್ಲಿ ತೋರಿ ಬಂದ ದೇವರ ಚಿತ್ತ.

2 - ಥೆಸಲೋನಿಕದವರಿಗೆ 5:117,18

ನಿಮ್ಮ ಯಾವನಿಗಾದರೂ ಜ್ಞಾನ ಕಡಿಮೆಯಾಗಿದ್ದರೆ ಅವನು ದೇವರನ್ನು ಕೇಳಿಕೊಳ್ಳಲಿ, ಅದು ಅವನಿಗೆ ದೊರಕುವದು ; ದೇವರು ಹಂಗಿಸದೆ ಎಲ್ಲರಿಗೂ ಉದಾರ ಮನಸ್ಸಿನಿಂದ ಕೊಡುವವನಾಗಿದ್ದಾನೆ. - ಯಾಕೋಬನು 1:15

ನೀವು ನನ್ನಲ್ಲಿಯೂ ನನ್ನ ವಾಕ್ಯಗಳು ನಿಮ್ಮಲ್ಲಿಯೂ ನೆಲೆಗೊಂಡಿದ್ದರೆ ಏನು ಬೇಕಾದರೂ ಬೇಡಿಕೊಳ್ಳಿರಿ. ಅದು ನಿಮಗೆ ದೊರೆಯುವುದು. - ಯೋಹಾನ 15:7

ನಾನು ಯೆಹೋವನ ಸನ್ನಿಧಿಯಲ್ಲಿ ಬೇಡಿಕೊಳ್ಳಲು ಆತನು ಸದುತ್ತವನ್ನು ಕೊಟ್ಟು ಎಲ್ಲಾ ಭೀತಿಯಿಂದ ನನ್ನನ್ನು ತಪ್ಪಿಸಿದನು. - ಕೀರ್ತನೆಗಳು 34:4

ನಾನು ಕೆಟ್ಟತನದ ಮೇಲೆ ಮನಸ್ಸಿದ್ದರೆ, ಸ್ವಾಮಿಯು ನನ್ನ ವಿಜ್ಞಾಪಣೆಯನ್ನು ಕೇಳುತ್ತಿದಿಲ್ಲ.
ಯೆಹೋವನೇ, ನನ್ನ ಶಾಪವು ಬಹುಘೋರವಾಗಿದೆ. ಆದರೂ ನಿನ್ನ ಹೆಸರಿನ ನಿಮಿತ್ತ ಅದನ್ನು ಕ್ಷಮಿಸು.

- ಕೀರ್ತನೆಗಳು 66:18, 25:11

ಸರ್ವ ವಿಷಯದಲ್ಲಿ ದೇವರ ಮುಂದೆ ಕೃತಜ್ಞತಾ ಸ್ತುತಿಯನ್ನೂ ಪ್ರಾರ್ಥನೆ ವಿಜ್ಞಾಪಣೆಗಳನ್ನೂ ಮಾಡುತ್ತಾ ನಿಮಗೆ ಬೇಕಾದದ್ದನ್ನು ತಿಳಿಯ ಪಡಿಸಿರಿ.

- ಫಿಲಿಪ್ಪಿಯವರಿಗೆ 4:66

## ೪೮ ಯೇಸು ಬರುತ್ತಿದ್ದಾನೆ - ಸಿದ್ಧವಾಗಿರು !

ಕರ್ತನು ತಾನೇ ಆಜ್ಞಾ ಘೋಷದೊಡನೆಯೂ ಪ್ರಧಾನದೂತನ ಶಬ್ದದೊಡನೆಯೂ ದೇವರ ತುತೂರಿ ಧ್ವನಿಯೊಡನೆಯೂ ಆಕಾಶದಿಂದ ಇಳಿದು ಬರುವನು; ಆಗ ಕ್ರಿಸ್ತನಲ್ಲಿರುವ ಸತ್ತವರು ಮೊದಲು ಎದ್ದು ಬರುವರು. ಆ ಮೇಲೆ ಜೀವದಿಂದುಳಿದಿರುವ ನಾವು ಅಂತರಿಕ್ಷದಲ್ಲಿ ಕರ್ತನನ್ನು ಎದುರುಗೊಳ್ಳುವುದಕ್ಕಾಗಿ ಅವರ ಸಂಗಡವೇ ಮೇಘವಾಹನರಾಗಿ ಪಕ್ಕನೆ ಒಯ್ಯಲ್ಪಡುವೆವು, ಹೀಗಾಗಿ ನಾವು ಸದಾಕಾಲವೂ ಕರ್ತನ ಜೊತೆಯಲ್ಲಿರುವೆವು.

- ೧ ಥೆಸಲೋನಿಕದವರಿಗೆ 4:16,17

ಪ್ರಿಯರೇ, ಈ ವಾಗ್ದಾನಗಳು ನಮಗಿರುವುದರಿಂದ ನಾವು ಶರೀರಾತ್ಮಗಳ ಕಲ್ಮಶವನ್ನು ತೊಲಗಿಸಿ ನಮ್ಮನ್ನು ಶುಚಿ ಮಾಡಿಕೊಂಡು ದೇವರ ಭಯದಿಂದ ಕೂಡಿದವರಾಗಿ ಪವಿತ್ರತ್ವವನ್ನು ಸಿದ್ಧಿಗೆ ತರುವದಕ್ಕೆ ಪ್ರಯತ್ನಿ ಸೋಣ.

-೨ ಕೊರಿಂಥದವರಿಗೆ 7:1

ಪ್ರಿಯರಾದ ಮಕ್ಕಳೇ, ಆತನು ಪ್ರತ್ಯನಾಗುವಾಗ ನಾವು ಆತನ ಆಗಮನದಲ್ಲಿ ಆತನ ಮುಂದೆ ನಿಲ್ಲಲು ನಾಚಿಕೆ ಪಡದೆ ಧೈರ್ಯದಿಂದಿರುವಂತೆ ಆತನಲ್ಲಿ ನೆಲೆಗೊಂಡಿರೋಣ.

- ೧ ಯೋಹಾನನು 2:28

ನೀವೂ ಧೀರ್ಘಶಾಂತಿಯಿಂದಿರಿ : ನಿಮ್ಮ ಹೃದಯಗಳನ್ನು ದೃಢಪಡಿಸಿಕೊಳ್ಳಿರಿ. ಕರ್ತನ ಪ್ರತ್ಯಕ್ಷತೆಯು ಹತ್ತಿರವಾಯಿತು. ಸಹೋದರರೇ, ನೀವು ಒಬ್ಬರ ಮೇಲೊಬ್ಬರು ಗುಣುಗುಟ್ಟ ಬೇಡಿರಿ; ನ್ಯಾಯ ವಿಚಾರಣೆಗೆ ಗುರಿಯಾದೀರಿ. ಅಗೋ, ನ್ಯಾಯಾಧಿಪತಿಯು ಬಾಗಿಲಿನ ಹತ್ತಿರಲ್ಲೇ ನಿಂತಿದ್ದಾನೆ.

- ಯಾಕೋಬನು 5:8,9

ಮನುಷ್ಯ ಕುಮಾರನ ಮೇಲೆ ಏನಾದರೂ ಮಾತಾಡುವ ಪ್ರತಿಯೊಬ್ಬನಿಗೆ ಕ್ಷಮಾಪಣೆಯಾಗುವದು ; ಆದರೆ ಪವಿತ್ರಾತ್ಮವನ್ನು ದೂಷಿಸಿದವನಿಗೆ ಕ್ಷಮಾಪಣೆಯಿಲ್ಲ

- ಲೂಕ 12:40

## ದೇವರಾತ್ಮದಿಂದ ತುಂಬಿಸಲ್ಪಡಿರಿ

ನನ್ನ ಗದರಿಕೆಯನ್ನು ಕೇಳಿ ತಿರುಗಿಕೊಳ್ಳಿರಿ; ಇಗೋ, ನಿಮ್ಮ ಮೇಲೆ ನನ್ನ ಆತ್ಮವನ್ನು ಸುರಿಸಿ ನನ್ನ ಮಾತುಗಳನ್ನು ನಿಮಗೆ ತಿಳಿಯಪಡಿಸುವೆನು. - ಜ್ಞಾನೋಕ್ತಿಗಳು 1:23

ನಿಮ್ಮಲ್ಲಿ ಪ್ರತಿಯೊಬ್ಬರು ದೇವರ ಕಡೆಗೆ ತಿರುಗಿಕೊಂಡು ಯೇಸು ಕ್ರಿಸ್ತನ ಹೆಸರಿನ ಮೇಲೆ ದೀಕ್ಷಾಸ್ನಾನ ಮಾಡಿಸಿಕೊಳ್ಳಿರಿ, ಆಗ ನೀವು ಪವಿತ್ರಾತ್ಮದಾನವನ್ನು ಹೊಂದುವಿರಿ. - ಅಪೊಸ್ತಲರ ಕೃತ್ಯಗಳು 2:38b

ಮದ್ಯಪಾನ ಮಾಡಿ ಮತ್ತರಾಗಬೇಡಿರಿ, ಅದರಿಂದ ಪಟಿಂಗತನವು ಹುಟ್ಟುತ್ತದೆ. ಆದರೆ ಪವಿತ್ರಾತ್ಮ ಭರಿತರಾಗಿದ್ದು, ಕೀರ್ತನೆಗಳಿಂದಲೂ ಆತ್ಮ ಸಂಬಂಧವಾದ ಪದಗಳಿಂದಲೂ ಒಬ್ಬರಿಗೊಬ್ಬರು ಮಾತಾಡಿಕೊಳ್ಳುತ್ತಾ ನಿಮ್ಮ ಹೃದಯಗಳಲ್ಲಿ ಕರ್ತನಿಗೆ ಗಾನ ಮಾಡುತ್ತಾ ಕೀರ್ತನೆ ಹಾಡುತ್ತಾ ಯಾವಾಗಲೂ ಎಲ್ಲಾ ಕಾರ್ಯಗಳಿಗೋಸ್ಕರ ನಮ್ಮ ಕರ್ತನಾದ ಸ್ತೋತ್ರ ಮಾಡುತ್ತಾ ಕ್ರಿಸ್ತನಿಗೆ ಭಯಪಡುವವರಾಗಿದ್ದು, ಒಬ್ಬರಿಗೊಬ್ಬರು ವಿನಯವುಳ್ಳವರಾಗಿ ನಡೆದುಕೊಳ್ಳಿರಿ. - ಎಫೆಸದವರಿಗೆ 5:18-21

ಯಾಕೆಂದರೆ ದೇವರೇ ತನ್ನ ಸುಚಿತ್ತವನ್ನು ನೆರವೇರಿಸಬೇಕೆಂದು ನಿಮ್ಮಲ್ಲಿ ಉದ್ದೇಶವನ್ನೂ ಪ್ರಯತ್ನವನ್ನೂ ಉಂಟು ಮಾಡುವವನಾಗಿದ್ದೇನೆ.

-ಫಿಲಿಪ್ಪಿಯವರಿಗೆ 2:13

ನೀವು ದೇವರ ಆಲಯವಾಗಿದ್ದೀರೆಂದೂ ದೇವರ ಆತ್ಮನು ನಿಮ್ಮಲ್ಲಿ ವಾಸ ಮಾಡುತ್ತಾನೆಂದೂ ನಿಮಗೆ ಗೊತ್ತಿಲ್ಲವೋ? ನೀವು ನಿಮ್ಮ ಸ್ವಂತ ಸೊತ್ತಲ್ಲ; ನೀವು ಕ್ರಯಕ್ಕೆ ಕೊಳ್ಳಲ್ಪಟ್ಟವರು ; ಆದಕಾರಣ ನಿಮ್ಮ ದೇಹದಲ್ಲಿ ದೇವರ ಪ್ರಭಾವನನ್ನು ಪ್ರಕಾಶ ಪಡಿಸಿರಿ.

- ೧ ಕೊರಿಂಥದವರಿಗೆ 3:16, 6:20

ಅವರೆಲ್ಲರೂ ಪವಿತ್ರಾತ್ಮಭರಿತರಾಗಿ ದೇವರ ವಾಕ್ಯವನ್ನು ಧೈರ್ಯದಿಂದ ಹೇಳುವವರಾದರು.

- ಅಪೊಸ್ತಲರ ಕೃತ್ಯಗಳು 4:31b

For more information or to request a free Bible study, please write to:

**WMP**
**India Bible Literature**
**67 Beracah Road**
**Kilpauk, Chennai 600 010**

www.wmpress.org

1579/2 Kannada HKG